ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 YEARS 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 219

22–2–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 219


## ಭೀಕರ ರಸ್ತೆ ಅಪಘಾತ: ಕಾಶಿಗೆ ತೆರಳುತ್ತಿದ್ದ ಬೀದರ್‌ನ ಐವರು ಸಾವು



**ಲಕ್ನೋ:** ಪ್ರಯಾಗ್‌ರಾಜ್ ಕುಂಭಮೇಳಕ್ಕೆ ತೆರಳಿದ್ದ ಬೀದರ್ ಮೂಲದ ಒಂದೇ ಕುಟುಂಬದ 5 ಜನ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಉತ್ತರ ಪ್ರದೇಶದ ಕಾಶಿ ಬಳಿ ನಡೆದಿದೆ.

ಲಾರಿ ಮತ್ತು ಕ್ರೂಸರ್ ನಡುವೆ ಇಂದು ಬೆಳಗ್ಗೆ ಮಿರಜಾಪೂರ್ ಜಿಲ್ಲೆಯ ರೂಪಾಪೂರ ಬಳಿ ಅಪಘಾತ ಸಂಭವಿಸಿದೆ. 5 ಮಂದಿ ಸಾವನ್ನಪ್ಪಿದ್ದು 7 ಮಂದಿ ಗಾಯಗೊಂಡಿದ್ದಾರೆ.

ಬೀದರ್ ನಗರದ ಲಾಡಗೇರಿ ಬಡಾವಣೆಯ ನಿವಾಸಿಗಳಾದ ಸುನೀತಾ(35) ಸಂತೋಷ್ (43) ನೀಲಮ್ಮ (60) ಸೇರಿದಂತೆ ಆರು ಮಂದಿ ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಮಗು ಕೂಡ ಮೃತ ಪಟ್ಟಿದೆ.

ಒಂದೇ ಗಾಡಿಯಲ್ಲಿ ಒಟ್ಟು 14 ಜನ ಕುಂಭ ಮೇಳಕ್ಕೆ ತೆರಳಿದ್ದರು. ಪುಣ್ಯ ಸ್ನಾನ ಮಾಡಿದ ಬಳಿಕ ಪ್ರಯಾಗ್‌ರಾಜ್‌ನಿಂದ ಕಾಶಿ ಕಡೆಗೆ ಕ್ರೂಸರ್‌ನಲ್ಲಿ ತೆರಳುತ್ತಿದ್ದರು.

## ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಈ ವರ್ಷದಿಂದ 'ಹೆಚ್ಚುವರಿ' ಗ್ರೇಸ್ ಮಾರ್ಕ್ಸ್ ಇಲ್ಲ; ಉತ್ತೀರ್ಣರಾಗಲು ಕನಿಷ್ಠ ಶೇ.35 ಅಂಕ ಅಗತ್ಯ!

**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗೆ ತಂದಿದ್ದ ಶೇ.10ರಷ್ಟು ಹೆಚ್ಚುವರಿ ಗ್ರೇಸ್ ಮಾರ್ಕ್ಸ್ ನೀಡುವ ಪದ್ಧತಿ ಈ ವರ್ಷದಿಂದ ತೆಗೆಯಲಾಗಿದ್ದು, 2024ಕ್ಕೂ ಹಿಂದೆ ಇದ್ದಂತೆ ವಿದ್ಯಾರ್ಥಿಗಳು ಉತ್ತೀರ್ಣರಾಗಲು ಕನಿಷ್ಠ ಅಂಕವನ್ನು ಶೇ 35ಕ್ಕೆ ನಿಗದಿ ಮಾಡಲಾಗಿದೆ.

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳ ಸಿದ್ಧತೆ ಕುರಿತು ಶಿಕ್ಷಣ, ಗೃಹ ಮತ್ತು ಕಂದಾಯ ಇಲಾಖೆಗಳ ಅಧಿಕಾರಿಗಳು, ಉಪ ಆಯುಕ್ತರು, ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್‌ಗಳ ಸಿಇಒಗಳೊಂದಿಗೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಗುರುವಾರ ವಿಡಿಯೋ ಕಾನ್ಫರೆನ್ಸ್ ನಡೆಸಿ ಮಾತುಕತೆ ನಡೆಸಿದರು.

### ಮಾಧ್ಯಮಗಳಿಂದ ಅಂತರ ಕಾಯ್ದುಕೊಂಡ ಬಸನಗೌಡ ಪಾಟೀಲ್ ಯತ್ನಾಳ್

## ಚಾಮುಂಡೇಶ್ವರಿ ದೇವಸ್ಥಾನಕ್ಕೆ ಭೇಟಿ



**ಮೈಸೂರು:** ಪಕ್ಷದ ಕೇಂದ್ರ ಶಿಸ್ತು ಸಮಿತಿಯಿಂದ ನೋಟಿಸ್ ಪಡೆದಿರುವ ಬಿಜೆಪಿ ಬಂಡಾಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಶುಕ್ರವಾರ ಇಲ್ಲಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಈ ವೇಳೆ ಮಾಧ್ಯಮಗಳಿಂದ ಅಂತರ ಕಾಯ್ದು-ಕೊಂಡರು.

ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದ ನಂತರ ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಅವರು, 'ಸುಪ್ರೀಂಕೋರ್ಟ್ ನಿರ್ದೇಶನದಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಚಿಂಚೋಳಿಯಲ್ಲಿರುವ ನಮ್ಮ ಸಿದ್ಧಸಿರಿ ಪವರ್ ಹಾಗೂ ಎಥೆನಾಲ್ ಕಾರ್ಖಾನೆಯನ್ನು ಪ್ರಾರಂಭಿಸಲು ಅನುಮತಿ ನೀಡಿದೆ' ಎಂದಿದ್ದಾರೆ.

ಈ ಸಂಬಂಧ ನಾನು ನಾಡದೇವತೆ ಚಾಮುಂಡೇಶ್ವರಿ ಅಮ್ಮನವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿ ಪೂಜೆ ಸಲ್ಲಿಸಿದ್ದೇನೆ. ಚಿಂಚೋಳಿ ತಾಲ್ಲೂಕಿನಲ್ಲಿರುವ ನಮ್ಮ ಕಾರ್ಖಾನೆ ಆರಂಭವಾಗುವುದರಿಂದ ನೂರಾರು ಉದ್ಯೋಗ ಸೃಷ್ಟಿಯಾಗುತ್ತದೆ ಹಾಗೂ ರೈತರ ಏಳಿಗೆಗೆ ನಾಂದಿಯಾಗುತ್ತದೆ. ಸತ್ಯಮೇವ ಜಯತೇ' ಎಂದಿದ್ದಾರೆ.

ಪಕ್ಷದ ನಾಯಕತ್ವದ ವಿರುದ್ಧ ದನಿ ಎತ್ತಿದ್ದಕ್ಕಾಗಿ ವಿಜಯಪುರ ಶಾಸಕರಿಗೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿಯು ಎರಡು ತಿಂಗಳೊಳಗೆ ಎರಡನೇ ಬಾರಿಗೆ ನೋಟಿಸ್ ನೀಡಿತು.

ಪಕ್ಷದ ಹಿರಿಯ ನಾಯಕ ಬಿಎಸ್ ಯಡಿಯೂರಪ್ಪ ಹಾಗೂ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಅವರು ಕುಟುಂಬ ರಾಜಕಾರಣ, ಹೊಂದಾಣಿಕೆ ಹಾಗೂ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿ ಯತ್ನಾಳ್ ಅವರು ನಿರಂತರ ವಾಗ್ದಾಳಿ ನಡೆಸುತ್ತಾ ಬಂದಿದ್ದಾರೆ. ರಾಜ್ಯ ಘಟಕದ ಅಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಅವರನ್ನು ಕಿತ್ತೊಗೆಯಬೇಕು ಎಂದು ಯತ್ನಾಳ್ ಬಣ ಪಟ್ಟು ಹಿಡಿದಿದೆ. ಕಳೆದೊಂದು ವರ್ಷದಲ್ಲಿ ಯತ್ನಾಳ್ ಅವರಿಗೆ ಶಿಸ್ತು ಸಮಿತಿ ನೀಡುತ್ತಿರುವ ಮೂರನೇ ನೋಟಿಸ್ ಇದು.

ಯತ್ನಾಳ್ ಅವರು ಸಾಮಾನ್ಯವಾಗಿ ಬಹಿರಂಗವಾಗಿ ಮಾತನಾಡುವ ವ್ಯಕ್ತಿಯಾಗಿದ್ದಾರೆ. ಆದರೆ, ಸದ್ದಿಲ್ಲದೆ ದೇವಾಲಯಕ್ಕೆ ಪ್ರವೇಶಿಸಿದರು ಮತ್ತು ದೇವಾಲಯದ ಹೊರಗೆ ನಿಂತಿದ್ದ ಸುದ್ದಿಗಾರರಿಗೆ ಯಾವುದೇ ಪ್ರತಿಕ್ರಿಯೆ ನೀಡದೆ ತೆರಳಿದರು. ಅವರು ದೇವಸ್ಥಾನದಿಂದ ಹೊರಬರುತ್ತಿದ್ದಂತೆ ಕೆಲವರು ಜೈ ವಿಜಯೇಂದ್ರ ಎಂಬ ಘೋಷಣೆಗಳನ್ನು ಕೂಗಿದರು.

## ಚಾಮುಂಡಿಬೆಟ್ಟದಲ್ಲಿ ಕಾಡ್ಗಿಚ್ಚು

### ಬೆಂಕಿ ನಂದಿಸಲು ಅರಣ್ಯ ಇಲಾಖೆ ಹರಸಾಹಸ



**ಮೈಸೂರು:** ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಕಾಡ್ಗಿಚ್ಚು ಕಾಣಿಸಿಕೊಂಡಿದ್ದು, ನೂರಾರು ಎಕರೆ ಪ್ರದೇಶದಲ್ಲಿ ಬೆಂಕಿ ವ್ಯಾಪಿಸಿಕೊಂಡ ಪರಿಣಾಮ ಅರಣ್ಯ ಇಲಾಖೆ ಸಿಬ್ಬಂದಿಗಳು ಬೆಂಕಿ ನಂದಿಸಲು ಹರಹಾಸಹ ಪಡುತ್ತಿದ್ದಾರೆ.

ಚಾಮುಂಡಿ ಬೆಟ್ಟದಲ್ಲಿ ಶುಕ್ರವಾರ ಮಧ್ಯಾಹ್ನ ಬೆಂಕಿ ಕಾಣಿಸಿಕೊಂಡಿದ್ದು, ಕಿಡಿಗೇಡಿಗಳು ಬೆಂಕಿ ಹಾಕಿರಬಹುದು ಎಂದು ಶಂಕಿಸಲಾಗಿದೆ. ಬೆಂಕಿಯು ವ್ಯಾಪಕವಾಗಿ ಹರಡುತ್ತಿದ್ದು ಅಗ್ನಿಶಾಮಕದಳದ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ. ಬೆಟ್ಟದ ಸುತ್ತ ದಟ್ಟ ಹೊಗೆ ಕಾಣಿಸಿಕೊಂಡಿದೆ.

**ಮಾನವ ಕೃತ್ಯ ಶಂಕೆ :** ಇನ್ನು ಹಾಲಿ ಬೆಂಕಿ ಅವಘಡವನ್ನು ಮಾನವ ಕೃತ್ಯ ಎಂದು ಶಂಕಿಸಲಾಗಿದ್ದು, 'ಬೀಡಿ, ಸಿಗರೇಟು ಸೇದುವವರು ಬೆಂಕಿಕಡ್ಡಿ ಹಚ್ಚಿ ಸರಿಯಾಗಿ ಆರಿಸದೆ ಬಿಸಾಡಿದ್ದರಿಂದ ಬೆಂಕಿ ಹತ್ತಿಕೊಂಡಿರುವ ಸಾಧ್ಯತೆಯಿದೆ' ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಬೇಸಿಗೆ ಆರಂಭಕ್ಕೂ ಮುನ್ನವೇ ಬಿಸಿಲಿನ ತಾಪ ಹೆಚ್ಚಾಗಿದ್ದು, ಬೇಸಿಗೆ ಆರಂಭವಾಗಿರುವುದರಿಂದ ಕಾಡು ಒಣಗಿದೆ. ಇದೇ ಸಂದರ್ಭದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಇದು ಬೆಂಕಿ ವ್ಯಾಪಿಸಲು ಕಾರಣ ಎಂದು ಹೇಳಲಾಗುತ್ತಿದೆ. ಸದ್ಯ ಅರಣ್ಯ ಇಲಾಖೆ ಸಿಬ್ಬಂದಿಗಳು ಬೆಂಕಿ ನಂದಿಸಲು ಹರಹಾಸಹ ಪಡುತ್ತಿದ್ದು, ಶೀಘ್ರದಲ್ಲೇ ಬೆಂಕಿಯನ್ನು ನಿಯಂತ್ರಣಕ್ಕೆ ತರುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಶಿವಮೊಗ್ಗ: ತುಂಗಾ ಹಿನ್ನೀರಿನಲ್ಲಿ ಇಬ್ಬರು ಪುರುಷರು, ಓರ್ವ ಮಹಿಳೆ ಶವ ಪತ್ತೆ

**ಶಿವಮೊಗ್ಗ:** ತುಂಗಾ ನದಿ ಹಿನ್ನೀರಿನಲ್ಲಿ ಇಬ್ಬರು ಪುರುಷರು ಹಾಗೂ ಓರ್ವ ಮಹಿಳೆಯ ಮೃತದೇಹ ಕೊಳೆತ ಸ್ಥಿತಿಯಲ್ಲಿ ಪತ್ತೆ ಆಗಿದ್ದು, ಘಟನೆಯಿಂದ ಸ್ಥಳೀಯರು ಬೆಚ್ಚಿ ಬಿದ್ದಿದ್ದಾರೆ.



ಶಿವಮೊಗ್ಗದ ಸಕ್ರೆಬೈಲ್ ಆನೆ ಬಿಡಾರದ 10ನೇ ಮೈಲಿಕಲ್ಲಿನ ಬಳಿ ಮೂವರ ಶವ ಪತ್ತೆಯಾಗಿದ್ದು, ಅವರ ಗುರುತು ಇನ್ನೂ ಪತ್ತೆಯಾಗಿಲ್ಲ. ಆದರೆ ಆತ್ಮಹತ್ಯೆ ಮಾಡಿಕೊಂಡಿರು ಶಂಕೆ ವ್ಯಕ್ತವಾಗಿದೆ.

ಸ್ಥಳಕ್ಕೆ ತುಂಗಾನಗರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹಗಳನ್ನು ಆಸ್ಪತ್ರೆಗೆ ರವಾನಿಸಿದ್ದಾರೆ ಎಂದು ತಿಳಿದು ಬಂದಿದೆ.


## ಉದ್ಯೋಗ ಮೇಳ ಯಶಸ್ವಿ: ಜಿಲ್ಲಾಧಿಕಾರಿಗಳಿಂದ ಪ್ರಶಂಸೆ

**ದಾವಣಗೆರೆ:** ಇತ್ತೀಚಿಗೆ ಭಾನುವಳ್ಳಿಯಲ್ಲಿ ನಡೆದ ಬೃಹತ್ ಉದ್ಯೋಗ ಮೇಳದ ಯಶಸ್ಸಿಗೆ ಕಾರಣರಾದ ಸ್ನೇಹ ಸಂಭ್ರಮ ಗೆಳೆಯರ ಬಳಗದ ಗೌರವಾಧ್ಯಕ್ಷರು ಮತ್ತು ಜಿಎಂ ವಿಶ್ವವಿದ್ಯಾಲಯದ ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಟಿ.ಆರ್. ತೇಜಸ್ವಿ ಕಟ್ಟಿಮನಿ ಅವರಿಗೆ ಜಿಲ್ಲಾಧಿಕಾರಿ ಡಾ. ಜಿ.ಎಂ. ಗಂಗಾಧರ ಸ್ವಾಮಿ ಪ್ರಶಂಸಿಸಿದ್ದಾರೆ.



ಇದೇ ಫೆಬ್ರುವರಿ 9 ರಂದು ಭಾನುವಳ್ಳಿಯಲ್ಲಿ ನಡೆದ ಬೃಹತ್ ಉದ್ಯೋಗ ಮೇಳದಲ್ಲಿ 417 ಉದ್ಯೋಗ ಆಕಾಂಕ್ಷಿಗಳಿಗೆ ಉದ್ಯೋಗ ಪತ್ರ ಕೊಡುವುದರ ಮೂಲಕ ಭಾನುವಳ್ಳಿ ಮತ್ತು ಸುತ್ತಮುತ್ತಲಿನ 25ಕ್ಕೂ ಹೆಚ್ಚಿನ ಹಳ್ಳಿಯ ಉದ್ಯೋಗ ಆಕಾಂಕ್ಷಿಗಳಿಗೆ ಉದ್ಯೋಗ ಕೊಡುವಲ್ಲಿ ಪ್ರಯತ್ನವನ್ನು ಮಾಡಲಾಗಿತ್ತು. ಭಾನುವಳ್ಳಿಯ ಸ್ನೇಹ ಸಂಭ್ರಮ ಗೆಳೆಯರ ಬಳಗ ಮತ್ತು ಜಿ ಮಲ್ಲಿಕಾರ್ಜುನಪ್ಪ ಮತ್ತು ಶ್ರೀಮತಿ ಹಾಲಮ್ಮ ಚಾರಿಟಿ ಫೌಂಡೇಶನ್ ಸಹಯೋಗದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿ ಯಶಸ್ವಿಗೊಳಿಸಲಾಗಿತ್ತು.

ಮುಂದೆಯೂ ಇದೇ ರೀತಿ ಸಾಮಾಜಿಕ ಕಾರ್ಯಕ್ರಮಗಳನ್ನು ಮುಂದುವರಿಸಿ ಕೊಂಡು ಹೋಗಬೇಕೆಂದು ತಿಳಿಸಿದ್ದಾರೆ. ತೇಜಸ್ವಿ ಕಟ್ಟಿಮನಿ ಟಿ ಆರ್ ರವರು ಸ್ನೇಹ ಸಂಭ್ರಮ ಗೆಳೆಯರ ಬಳಗದ ಎಲ್ಲಾ ಸ್ನೇಹಿತರಿಗೂ ಮತ್ತು ಯಶಸ್ಸಿಗೆ ಕಾರಣೀಭೂತರಾದ ಜಿಎಂಎಚ್ ಚಾರಿಟಿ ಫೌಂಡೇಶನ್ ಬಳಗದ ಮಾಜಿ ಕೇಂದ್ರ ಸಚಿವರಾದ ಶ್ರೀ ಡಾ ಸಿದ್ದೇಶ್ವರ, ಜಿಎಂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಜಿಎಂ ಲಿಂಗರಾಜು, ಚಾರಿಟಿ ಟ್ರಸ್ಟ್ ಸದಸ್ಯರಾದ ಮಾಗನೂರು ಪ್ರಭುಕುಮಾರ್ ಇವರುಗಳಿಗೆ ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

### ವೃಷಭ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ಕುಟುಂಬ ಸದಸ್ಯರಿಗೆ ಸಹಾಯ ಮಾಡಲು ಮುಕ್ತ ಸಮಯದ ಲಾಭ ತೆಗೆದುಕೊಳ್ಳಿ. ಇಂದು ನಿಮ್ಮ ಹೃದಯ ಬಡಿತವು ನಿಮ್ಮ ಸಂಗಾತಿಯೊಡನೆ ಲಯದಲ್ಲಿ ಪ್ರೀತಿಯ ಸಂಗೀತವನ್ನು ನುಡಿಸುತ್ತದೆ.

### ಮಿಥುನ ರಾಶಿ

ಚಾಲನೆ ಮಾಡುವಾಗ ಎಚ್ಚರ ವಹಿಸಿ. ಯಾವುದೇ ಅನುಭವದ ವ್ಯಕ್ತಿಯ ಸಲಹೆ ಇಲ್ಲದೆ, ನಿಮಗೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸವನ್ನು ಮಾಡಬೇಡಿ. ಸಂತೋಷದ ಚೈತನ್ಯದಾಯಕ – ಪ್ರಿಯವಾದ ಚಿತ್ತದ – ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ಮತ್ತು ಖುಷಿಯನ್ನು ತರುತ್ತದೆ. ನಿಮ್ಮ ಪ್ರಿಯತಮೆ ಇಡೀ ದಿನ ನಿಮಗಾಗಿ ಪರಿತಪಿಸುತ್ತಾಳೆ.

### ಕರ್ಕ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ನೀವು ಒಳ್ಳೆಯ ಅಭಿವೃದ್ಧಿ ಸಾಧಿಸುತ್ತಿದ್ದ ಹಾಗೆ ಪ್ರೇಮ ಜೀವನ ಒಳ್ಳೆಯ ತಿರುವು ತೆಗೆದುಕೊಳ್ಳುತ್ತದೆ ನೀವು ಕೆಲವು ಜನರೊಂದಿಗೆ ಬೆರೆಯುವುದು ಸರಿಯಲ್ಲ ಎಂದು ನೀವು ಭಾವಿಸಿದರೆ ಮತ್ತು ಅವರೊಂದಿಗೆ ಇದ್ದು ನಿಮ್ಮ ಸಮಯ ಹಾಳಾಗುತ್ತಿದ್ದರೆ ಅವರ ಜೊತೆಯನ್ನು ನೀವು ಬಿಟ್ಟುಬಿಡಬೇಕು

### ಸಿಂಹ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಹ್ತಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಇಂದು ಪ್ರೀತಿಯಲ್ಲಿ ನಿಮ್ಮ ವಿವೇಚನಾ ಶಕ್ತಿಯನ್ನು ಬಳಸಿ.

### ಕನ್ಯಾ ರಾಶಿ

ಗಾಳಿಗೊಡ್ಡಿದ ಆಹಾರ ನಿಮಗೆ ಅನಾರೋಗ್ಯ ತರಬಹುದಾದ್ದರಿಂದ ಅವುಗಳನ್ನು ತಿನ್ನಬೇಡಿ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ನೀವು ಕಾಳಜಿಯುಳ್ಳ ಮತ್ತು ತಿಳುವಳಿಕೆಯುಳ್ಳ ಸ್ನೇಹಿತರನ್ನು ಭೇಟಿ ಮಾಡುತ್ತೀರಿ. ಜೀವನ ಸಂಗಾತಿಯೊಂದಿಗೆ ಸಮಯವನ್ನು ಕಳೆಯಲು ಇಂದು ನೀವು ಕಚೇರಿಯಿಂದ ಬೇಗನೆ ಹೋರಾಡುತ್ತೀರಿ ಆದರೆ ದಾರಿಯಲ್ಲಿ ವಿಪರೀತ ಜಾಮ್ನಿಂದಾಗಿ ಇದನ್ನು ಮಾಡಲು ನಿಮಗೆ ಸಾಧ್ಯವಾಗುವುದಿಲ್ಲ.

### ತುಲಾ ರಾಶಿ

ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು. ಗುಣಪಡಿಸಲಾರದ್ದನ್ನು ತಡೆದುಕೊಳ್ಳಬೇಕು ಎಂದು ನೆನಪಿಡಿ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು.

### ವೃಶ್ಚಿಕ ರಾಶಿ

ನಿಯಮಿತ ತೊಂದರೆ ನಿಮಗೆ ಕೆಲವು ಸಮಸ್ಯೆಗಳನ್ನು ಉಂಟುಮಾಡಬಹುದು. ನಿಮ್ಮ ನರಮಂಡಲದ ಕಾರ್ಯವೆಸಗುತ್ತಿರಲು ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳಿ. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಕೆಲಸದ ಒತ್ತಡ ನಿಮ್ಮ ಮನಸ್ಸನ್ನು ಆಕ್ರಮಿಸಿದ್ದರೂ ಸಹ ನಿಮ್ಮ ಪ್ರೀತಿಪಾತ್ರರು ನಿಮಗೆ ಪ್ರಣಯದ ಅಪಾರ ಸಂತೋಷವನ್ನು ತರುತ್ತಾರೆ.

### ಧನು ರಾಶಿ

ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ. ನೀವು ಪ್ರೀತಿಸುವ ಮತ್ತು ಕಾಳಜಿ ತೋರಿಸುವ ಜನರೊಂದಿಗೆ ಸಕಾರಣವಾಗಿರಲು ಪ್ರಯತ್ನಿಸಿ. ನಿಮ್ಮ ಪ್ರೀತಿ ಸಂಗಾತಿಯ ಒಂದು ಹೊಸ ಅದ್ಭುತ ಭಾಗವನ್ನು ನೀವಿಂದು ನೋಡಬಹುದು.

### ಮಕರ ರಾಶಿ

ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಕುಟುಂಬ ಸದಸ್ಯರೆಡೆಗೆ ನಿಮ್ಮ ಸರ್ವಾಧಿಕಾರಿ ಧೋರಣೆ ಕೇವಲ ಅನುಪಯುಕ್ತ ವಾದಗಳನ್ನು ಪ್ರಾರಂಭಿಸುತ್ತದೆ ಮತ್ತು ಇದು ಟೀಕೆಯನ್ನೂ ತರಬಹುದು. ಇಂದು ನೀವು ನಿಮ್ಮ ಸಂಗಾತಿಯ ಹೃದಯ ಬಡಿತಗಳ ಜೊತೆಗಿರುತ್ತೀರಿ. ಹೌದು, ಇದು ನೀವು ಪ್ರೀತಿಯಲ್ಲಿದ್ದೀರಿ ಎನ್ನುವ ಸಂಕೇತವಾಗಿದೆ! ನೀವು ಕೆಟ್ಟ ಸಮಯವನ್ನು ಹೊಂದಿರುವವರೊಂದಿಗೆ ಸಂಪರ್ಕವನ್ನು ಹೆಚ್ಚಿಸುವುದನ್ನು ತಪ್ಪಿಸಿ.

### ಕುಂಭ ರಾಶಿ

ದ್ವೇಷದ ಭಾವನೆ ದುಬಾರಿಯೆನಿಸಬಹುದು. ಇದು ನಿಮ್ಮ ಸಹನೆಯನ್ನು ಕುಂಠಿತಗೊಳಿಸುವುದಷ್ಟೇ ಅಲ್ಲದೇ ನಿಮ್ಮ ವಿವೇಚನಾಶಕ್ತಿಯನ್ನೂ ಕುಂಠಿತಗೊಳಿಸುತ್ತದೆ ಮತ್ತು ಸಂಬಂಧದಲ್ಲಿ ಶಾಶ್ವತ ಬಿರುಕನ್ನು ಸೃಷ್ಟಿಸುತ್ತದೆ. ನೀವು ಕಮಿಷನ್ಗಳಿಂದ ಡಿವಿಡೆಂಡ್ಗಳಿಂದ- ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ ಸ್ನೇಹ ಆಳವಾದ ಹಾಗೆ ಪ್ರಣಯ ನಿಮ್ಮೆಡೆ ಬರುತ್ತದೆ.

### ಮೀನ ರಾಶಿ

ತುಂಬಾ ಪ್ರಯಾಣ ನಿಮಗೆ ದಣಿವಾಗಿಸುತ್ತದೆ ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ. ಕೆಟ್ಟ ಸಮಯಗಳು ನಮಗೆ ಇನ್ನೂ ಹೆಚ್ಚನ್ನು ನೀಡುತ್ತವೆ. ಸ್ವಾನುಕಂಪದಲ್ಲಿ ಸಮಯ ವ್ಯರ್ಥ ಮಾಡದೇ ಜೀವನದ ಪಾಠ ಕಲಿಯಲು ಪ್ರಯತ್ನಿಸಿ.

# ವಸತಿಶಾಲೆಗಳಲ್ಲಿ ಎಸ್ಸಿ ಎಸ್ಟಿ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಪ್ರವೇಶಾತಿ ನೀಡಿ: ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸೂಚನೆ



**ಜಗಳೂರು:** ಎಸ್ಸಿ ಎಸ್ಟಿ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗದಂತೆ ಸಂಕಲ್ಪಗೈಯಲಾಗಿದ್ದು, ವಿದ್ಯಾರ್ಥಿಗಳು ಯಾವುದೇ ತಾಲೂಕಿನವರಾಗಲಿ ಅಧಿಕಾರಿಗಳು ವಸತಿಶಾಲೆಗಳಲ್ಲಿ ಕಡ್ಡಾಯವಾಗಿ ಪ್ರವೇಶಾತಿ ನೀಡಬೇಕು ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಇಲಾಖೆ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಸೂಚಿಸಿದರು.

ಬುಧವಾರ ತಾಲ್ಲೂಕಿನ ಕಾಮಗೇತನಹಳ್ಳಿ ಹೊಸಹಟ್ಟಿ ಬಳಿಯಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ವಸತಿಶಾಲೆ, ಚಿಕ್ಕಬಂಟನಹಳ್ಳಿಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಪಲ್ಲಾಗಟ್ಟೆ ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಮೂರು ನೂತನ ಕಟ್ಟಡಗಳ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಹುದಿನಗಳಿಂದ ನೆನೆಗುದಿಗೆ ಬಿದ್ದಿದ್ದ 22 ಕೋಟಿ ಅನುದಾನದಲ್ಲಿ ವಸತಿಶಾಲೆಗಳ ಸುಸಜ್ಜಿತ ಕಟ್ಟಗಳ ಕಾಮಗಾರಿ ಪೂರ್ಣಗೊಂಡು ಇಂದು ಲೋಕಾರ್ಪಣೆಗೊಂಡಿವೆ. ಮಾಜಿ ಸಚಿವ ಆಂಜನೇಯ ಅವರ ಆಡಳಿತಾವಧಿಯಲ್ಲಿ

ಅನುದಾನಕ್ಕೆ ಕೊರತೆಯಿರಲಿಲ್ಲ, ಜಿಲ್ಲೆಯಲ್ಲಿ ಶೈಕ್ಷಣಿಕ ಪ್ರಗತಿಗಾಗಿ ಸಾಕಷ್ಟು ಆದ್ಯತೆ ನೀಡಿ ವಸತಿ ಶಾಲೆಗಳನ್ನು ನಿರ್ಮಿಸಲಾಗಿದೆ.

ಹಂತಹಂತವಾಗಿ ಎಲ್ಲಾ ಜಾತಿ ಜನಾಂಗಗಳ ವಸತಿ ಶಾಲೆಗಳ ಸ್ವಂತಕಟ್ಟಡಗಳ ನಿಮ ರ್ಾಣ,ಮೂಲಸೌಕರ್ಯ,ಶೈಕ್ಷಣಿಕ ' ಸೌಲಭ್ಯ ಒದಗಿಸಲು ಬದ್ದನಾಗಿರುವೆ ಸದುಪಯೋಗಪಡೆದುಕೊಂಡು ವಿದ್ಯಾರ್ಥಿಗಳು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಏಕಲವ್ಯ ವಸತಿ ಶಾಲೆಗೆ ಕೇಂದ್ರ ಮತ್ತು ರಾಜ್ಯ ಸರಕಾರಗಳಿಂದ 70:30 ಅನುಪಾತದಲ್ಲಿ ಅನುದಾನ ಬರಲಿದೆ. ಮಾಗಡಿ ಬಳಿ 18 ಎಕರೆ ಸರ್ಕಾರಿ ಜಮೀನು ನಿಗದಿಯಾಗಿದ್ದು.ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್ ಅವರ ಸಹಕಾರದೊಂದಿಗೆ ಅನುದಾನ ಮಂಜೂರಾತಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದರು.

ತಾಲೂಕಿನಲ್ಲಿ ಕೆರೆಗಳು ಭರ್ತಿಯಾಗಿದ್ದು ಭವಿಷ್ಯದಲ್ಲಿ ಅಡಿಕೆ ನಾಡಾಗಿ ಪರಿವರ್ತನೆಗೊಂಡು ಕಂಗೊಳಿಸಲಿದೆ. ಬರದನಾಡಿನ ಹಣೆಪಟ್ಟಿ ಸಂಪೂರ್ಣ ಕಳಚಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶಾಸಕ ಬಿ. ದೇವೇಂದ್ರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಜೂನ್ 1 ರಂದು ಲೋಕಾರ್ಪಣೆಗೊಳ್ಳಬೇಕಿದ್ದ ನೂತನ ಕಟ್ಟಡಗಳು ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಿಂದ ವಿಳಂಬವಾಗಿದ್ದವು. ತಾತ್ಕಾಲಿಕವಾಗಿ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲು ತರಗತಿಗಳನ್ನು ಆರಂಭಿಸಲಾಗಿತ್ತು. ಇಂದು ಅಧಿಕೃತವಾಗಿ ಲೋಕಾರ್ಪಣೆಗೊಂಡಿವೆ. ಬಾಡಿಗೆ ಕಟ್ಟಡಗಳಿಂದ ಸ್ವಂತ ಕಟ್ಟಡಕ್ಕೆ ಸ್ಥಳಾಂತರಗೊಂಡಿವೆ ಎಂದರು.

ಅಂತೆಯೇ ಪಟ್ಟಣದಲ್ಲಿ ಅಲ್ಪ ಸಂಖ್ಯಾತರ ಇಲಾಖೆ ವಸತಿ ಶಾಲೆ ಸ್ವಂತ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿದ್ದು, ಬಗ್ಗೇನಹಳ್ಳಿ ಬಳಿ ಸರ್ಕಾರಿ ಜಾಗದಲ್ಲಿ ನೂತನ ಕಟ್ಟಡ ನಿರ್ಮಾಣಕ್ಕಾಗಿ ಸರಕಾರ 16 ಕೋಟಿ ಅನುದಾನ ಬಿಡುಗಡೆಗೊಳಿಸಿರುವುದು ಸ್ವಾಗತಾರ್ಹ ಎಂದರು.

ಜಗಳೂರು ಕ್ಷೇತ್ರದ ಸಮಗ್ರ ಅಭಿವೃದ್ದಿಗಾಗಿ ಸಾರ್ವಜನಿಕ ಆಸ್ಪತ್ರೆ ನಿರ್ಮಾಣಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಅವರು ಬಜೆಟ್ ನಲ್ಲಿ ಅನುದಾನ ಘೋಷಿಸುವ ಭರವಸೆ ನೀಡಿದ್ದಾರೆ ತಾವೂ ಧ್ವನಿಯಾಗಬೇಕು. ಕೆಎಸ್ ಆರ್ ಟಿಸಿ ಬಸ್ ಡಿಪೋ ನಿರ್ಮಾಣಕ್ಕೆ ತಮ್ಮ ಆಡಳಿತಾವಧಿಯಲ್ಲಿ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಉಸ್ತುವಾರಿ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್ ಅವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ, ಜಿ.ಪಂ. ಮಾಜಿ ಸದಸ್ಯ ಕೆ.ಪಿ. ಪಾಲಯ್ಯ, ಕೆಪಿಸಿಸಿ ಎಸ್ ಟಿ ಘಟಕದ ರಾಜ್ಯ ಪ್ರಧಾನಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಷಂಷೀರ್ ಅಹಮ್ಮದ್, ಎಸ್. ಮಂಜುನಾಥ್, ದೊಣೆಹಳ್ಳಿ ಗ್ರಾ.ಪಂ. ಅಧ್ಯಕ್ಷ ತಿಪ್ಪೇಸ್ವಾಮಿ, ಸಮಾಜಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಬಿಸಿಎಂ ಇಲಾಖೆ ಜಿಲ್ಲಾ ಕಲ್ಯಾಣ ಅಧಿಕಾರಿ ಗಾಯಿತ್ರಿ, ಪ.ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕ ನವೀನ್ ಕುಮಾರ್ ಮಠದ್, ತಾ.ಪಂ. ಇಓ ಕೆಂಚಪ್ಪ, ಪ.ವರ್ಗಗಳ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಮಂಜುನಾಥ್,ಗುತ್ತಿಗೆದಾರ ವೀರೇಶ್,

ಗ್ರಾ.ಪಂ. ಸದಸ್ಯ ಸಿದ್ದಲಿಂಗಪ್ಪ, ಪ್ರಾಂಶುಪಾಲರಾದ ಅಮರೇಶ್, ಮಹಾಂತೇಶ್ ಕಲ್ಲೂರು, ಮುಖಂಡರಾದ ಬಿ. ಮಹೇಶ್ವರಪ್ಪ, ಪಲ್ಲಾಗಟ್ಟೆ ಶೇಖರಪ್ಪ,ಮಧುಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

# ದೇಶಕ್ಕೆ ಪೂರಕ ಕಾರ್ಯ ನಿರ್ವಹಿಸುವವರು ನಿಜವಾದ ದೇಶಪ್ರೇಮಿಗಳು: ಯು.ಟಿ. ಖಾದರ್



**ದಾವಣಗೆರೆ:** ಯಾರು ಸಮಾಜ ಮತ್ತು ದೇಶಕ್ಕೆ ಪೂರಕವಾಗುವಂತಹ ಮಾತು ಹಾಗೂ ಕೆಲಸವನ್ನು ಮಾಡುತ್ತಾರೆಯೋ ಅವರೇ ನಿಜವಾದ ದೇಶಪ್ರೇಮಿಗಳು ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅಭಿಪ್ರಾಯಪಟ್ಟರು.

ಅವರು ದಾವಣಗೆರೆಯ ಕುವೆಂಪು ಕನ್ನಡ ಭವನದಲ್ಲಿ ಹಮ್ಮಿಕೊಂಡಿದ್ದ ಕೃತಿ ಬಿಡುಗಡೆ ಕಾರ್ಯಕ್ರಮಕ್ಕೆ ಆಗಮಿಸಿದ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದರು.

ಉದಯಗಿರಿ ಘಟನೆಗೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣದಲ್ಲಿಯ ಒಂದು ಪೋಸ್ಟ್ ನಿಂದ ಆದ ಸಮಸ್ಯೆ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಖಾದರ್ ಅವರು, ಸಾಮಾಜಿಕ ಜಾಲತಾಣದಲ್ಲಿ ಬರುವ ಸುದ್ದಿಗಳನ್ನು ಬಿಟ್ಟು, ಅವರವರ ತಪ್ಪುಗಳು ಮತ್ತು ಕೆಲಸಗಳನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು. ನಕಾರಾತ್ಮಕ ಮಾತು, ಕೆಲಸಗಳನ್ನು ಬಿಟ್ಟು, ದೇಶದ ಅಭಿವೃದ್ದಿಗೆ ತೊಡಗಿಸಿಕೊಳ್ಳಬೇಕು. ಯುವ ಜನಾಂಗವು ಉತ್ತಮ ಸಮಾಜ ಮತ್ತು ದೇಶದ ಅಭಿವೃದ್ಧಿಗೆ ಪೂರಕವಾಗುವ ಮಾತು ಮತ್ತು ಕೆಲಸಗಳನ್ನು ಮಾಡಬೇಕು" ಎಂದು ಸಲಹೆ ನೀಡಿದರು.

ಉದಯಗಿರಿ ಘಟನೆಯ ಆರೋಪಿಗಳನ್ನು ಇದುವರೆಗೂ ಬಂಧಿಸಿಲ್ಲ ಎಂಬ ಪ್ರಶ್ನೆಗೆ, ಈ ಸಂಬಂಧ ರಾಜ್ಯದ ಗೃಹ ಸಚಿವರು ಹಾಗೂ ಸರ್ಕಾರಿ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

ಜಗಳೂರು ಶಾಸಕ ಚಿಕ್ಕಮ್ಮನಹಟ್ಟಿ ದೇವೇಂದ್ರಪ್ಪ ಮಾತನಾಡಿ, ರಾಜ್ಯದಲ್ಲಿ ಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಸ್ಥಾನ ಎರಡೂ ಖಾಲಿ ಇಲ್ಲ. ಈ ಬಗ್ಗೆ ಚರ್ಚೆ ಅಪ್ರಸ್ತುತ. ಖಾಲಿಯಾದ ನಂತರ ಪಕ್ಷದ ಹೈಕಮಾಂಡ್ ಆ ಬಗ್ಗೆ ಸ್ಪಷ್ಟನೆ ನೀಡಲಿದೆ. ನನಗೂ ಕೂಡ ಆಸೆ ಇದೆ. ನಾನೇನು ಸನ್ಯಾಸಿಯಲ್ಲ. ಆದರೆ ಹಿರಿತನದ ಪರಿಗಣನೆ ಮೇಲೆ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಹೇಳಿದರು.

ಜಗಳೂರು ತಾಲೂಕಿನ ಪಲ್ಲಾಗಟ್ಟೆ ಬಳಿಯ ಸರ್ಕಾರಿ ಬಿಸಿಎಂ ಮೆಟ್ರಿಕ್ ಬಾಲಕಿಯರ ವಸತಿ ವಿದ್ಯಾರ್ಥಿನಿಲಯದ ಕಾಮಗಾರಿ ಗುಣಮಟ್ಟ ಸರಿಯಾಗಿಲ್ಲ. ಸಮಯಕ್ಕೆ ಸರಿಯಾಗಿ ಮುಗಿದಿಲ್ಲ. ಕಟ್ಟಡದಲ್ಲಿ ಉತ್ತಮ ನೆಲಹಾಸು ಇಲ್ಲ, ಸರಿಯಾಗಿ ರಸ್ತೆ ಸಂಪರ್ಕ ಕಲ್ಪಿಸಿಲ್ಲ. ಸುತ್ತ ಕಾಂಪೌಂಡ್ ಇಲ್ಲ. ಕಟ್ಟಡ ಗುಣಮಟ್ಟ ಕಡಿಮೆ ಇದ್ದು, ಬಾಕಿ ಕಾಮಗಾರಿ ಮುಗಿಯುವವರೆಗೂ ಬಿಲ್ ಪ್ರಕ್ರಿಯೆ ನಡೆಸದಂತೆ ಬಿಸಿಎಂ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಎಚ್ಚರಿಕೆ ನೀಡಿದ್ದೇನೆ ಎಂದು ತಿಳಿಸಿದರು.

ಈ ವೇಳೆ ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ, ನಿವೃತ್ತ ಪ್ರಾಂಶುಪಾಲ ದಾದಾ ಪೀರ್ ನವಿಲೇಹಾಳ್, ಮೇಯರ್ ಚಮನ್ ಸಾಬ್, ನಿವೃತ್ತ ಪ್ರಾಧ್ಯಾಪಕಿ ಚಮನ್ ಫರ್ಜಾನಾ ಹಾಗೂ ಇನ್ನಿತರರು ಇದ್ದರು.

# ಯುಎಫ್ಬಿಯು ಜಿಲ್ಲಾ ಸಂಚಾಲಕರಾಗಿ ಕೆ. ರಾಘವೇಂದ್ರ ನಾಯರಿ ಆಯ್ಕೆ



**ದಾವಣಗೆರೆ:** ಬ್ಯಾಂಕ್ ಕಾರ್ಮಿಕ ಸಂಘಟನೆಗಳ ಸಂಯುಕ್ತ ವೇದಿಕೆಯ (ಗಈಃಗ) ದಾವಣಗೆರೆ ಜಿಲ್ಲಾ ಸಂಚಾಲಕರಾಗಿ ಕೆ. ರಾಘವೇಂದ್ರ ನಾಯರಿ ಆಯ್ಕೆಯಾಗಿದ್ದಾರೆ ಎಂದು ಕೆನರಾ ಬ್ಯಾಂಕ್ ಎಂಪ್ಲಾಯೀಸ್ ಯೂನಿಯನ್ನ ರಾಜ್ಯ ಉಪಾಧ್ಯಕ್ಷ ಕೆ. ವಿಶ್ವನಾಥ್ ಬಿಲ್ಲವ ತಿಳಿಸಿದ್ದಾರೆ.

ಈ ಮೊದಲು ಸಂಚಾಲಕರಾಗಿದ್ದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಅಧಿಕಾರಿಗಳ ಸಂಘದ ನಾಯಕ ಕೆ.ಎನ್. ಗಿರಿರಾಜ್ ಅವರು ಬೆಂಗಳೂರಿಗೆ ವರ್ಗವಾದ ಹಿನ್ನೆಲೆಯಲ್ಲಿ ನಡೆದ ಯುಎಫ್ಬಿಯು ಜಿಲ್ಲಾ ಸಮಿತಿ ಸಭೆಯಲ್ಲಿ ಕೆ. ರಾಘವೇಂದ್ರ ನಾಯರಿಯವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು ಎಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಅಧಿಕಾರಿಗಳ ಸಂಘದ ಮುಖಂಡ ಸುನಿಲ್ ಮ್ಯಾಗೇರಿ ತಿಳಿಸಿದ್ದಾರೆ.

ಯುಎಫ್ಬಿಯು ಜಿಲ್ಲಾ ಸಮಿತಿ ಸಭೆಯಲ್ಲಿ ಎಲ್ಲ ಸದಸ್ಯ ಸಂಘಟನೆಗಳ ನಾಯಕರು ಹಾಜರಿದ್ದರು. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಸುನಿಲ್ ಎಸ್ ಮ್ಯಾಗೇರಿ, ಎಂ.ಡಿ.ವಿದ್ಯಾಸಾಗರ್, ಎಂ.ಎಸ್.ವಾಗೀಶ್, ಕಿರಣ್ ಕುಮಾರ್, ದುರ್ಗಪ್ಪ, ಕೆನರಾ ಬ್ಯಾಂಕಿನ ಪ್ರದೀಪ್ ಪಾಟೀಲ, ಕೆ.ವಿಶ್ವನಾಥ್ ಬಿಲ್ಲವ, ಜೆ.ಟಿ.ಶಕ್ತಿ ಪ್ರಸಾದ್, ಪರಶುರಾಮ, ಕೆ.ಮಂಜುನಾಥ್, ಕರ್ಣಾಟಕ ಬ್ಯಾಂಕಿನ ಹೆಚ್.ಎಸ್.ತಿಪ್ಪೇಸ್ವಾಮಿ, ಕೆ.ಗಂಗಾಧರ್, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಅಜಯ್ ಕುಮಾರ್, ಬ್ಯಾಂಕ್ ಆಫ್ ಬರೋಡದ ಅಣ್ಣಪ್ಪ ನಂದಾ, ಇಂಡಿಯನ್ ಬ್ಯಾಂಕಿನ ಕೆ.ಎಂ.ರಾಜಶೇಖರ, ಶಸಿಸೇಕರ್ ಮತ್ತಿತರರು ಹಾಜರಿದ್ದರು.

# ಮಕ್ಕಳ ಪರೀಕ್ಷೆಯ ಉತ್ತಮ ಫಲಿತಾಂಶ ಅವರ ಜೀವನದ ಭವಿಷ್ಯ ಸುಸಂಪನ್ನಗೊಳ್ಳುತ್ತದೆ-ಸಾಲಿಗ್ರಾಮ ಗಣೇಶ್‌ಶೆಣೈ




**ದಾವಣಗೆರೆ:** ಪರೀಕ್ಷೆ ಎನ್ನುವುದು ಪ್ರತಿಯೊಬ್ಬ ವಿದ್ಯಾರ್ಥಿಗಳಿಗೆ ಜೀವನದಲ್ಲಿ ಮಹತ್ತರವಾದ ಮೈಲಿಗಲ್ಲು. ಜೀವನದ ಪರೀಕ್ಷೆಯಲ್ಲಿ ಈಜಾಡಿ ಜಯಿಸಬೇಕಾಗಿದೆ. ಪರೀಕ್ಷೆಯ ಸಮಯದಲ್ಲಿ ಮಾನಸಿಕವಾಗಿ, ದೈಹಿಕವಾಗಿ ತೊಡಗಿಸಿಕೊಳ್ಳಬೇಕಾಗಿದೆ. ಮನಸ್ಸಿನ ಚಂಚಲತೆಯನ್ನು ಹೋಗಲಾಡಿಸಿ, ಏಕಾಗ್ರತೆಯಿಂದ ಉತ್ತಮ ಫಲಿತಾಂಶ ತಂದಾಗ ಮಕ್ಕಳ ಭವಿಷ್ಯ ಸುಸಂಪನ್ನಗೊಳ್ಳುತ್ತದೆ. ಮಕ್ಕಳು ಚನ್ನಾಗಿ ಬದ್ದತೆಯಿಂದ ಓದಿ ಅಭ್ಯಾಸ ಮಾಡಿದಾಗ ಹೆದರುವ ಅವಶ್ಯಕತೆ ಇಲ್ಲ. ನಕರಾತ್ಮಕವಾಗಿ ಚಿಂತೆ ಮಾಡದೇ ಸಕಾರಾತ್ಮಕವಾಗಿ ಚಿಂತನೆ ಮಾಡಿದರೆ, ಹೆತ್ತವರ ಕನಸು ನನಸು ಮಾಡಬಹುದು ಎಂದು ಕಲಾಕುಂಚ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್‌ಶೆಣೈ ಯವರು ತಮ್ಮ ಅನುಭವದ ಅನಿಸಿಕೆಗಳನ್ನು ಹಂಚಿಕೊಂಡರು. ದಾವಣಗೆರೆಯ ಪಿ.ಜೆ. ಬಡಾವಣೆಯಲ್ಲಿರುವ ಜೈನ್ ವಿದ್ಯಾಲಯದ ಸಭಾಂಗಣದಲ್ಲಿ ಇತ್ತೀಚಿಗೆ 2024-25ನೇ ಸಾಲಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಸ್.ಎಸ್.ಎಲ್.ಸಿ. ಪರೀಕ್ಷೆ ಎದುರಿಸುವ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಪರೀಕ್ಷಾ ಪೂರ್ವ ಸಿದ್ಧತಾ ಉಚಿತ ಕಾರ್ಯಾಗಾರವನ್ನು ನಡೆಸಿ ಶಾಲಾ ಶಿಕ್ಷಕ-ಶಿಕ್ಷಕಿಯರ ಅನುಮತಿ ಪಡೆದು ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಮುಖ್ಯೋಪಾಧ್ಯಾಯನಿ ಸಾಯಿದಾಖಾನ್ ಮಾತನಾಡಿ, ಈ ಪ್ರೌಢಶಾಲಾ ಹಂತ ಜೀವನದ, ಶಿಕ್ಷಣದ ಒಂದು ತಿರುವು. ಈ ಸಮಯದಲ್ಲಿ ಮಕ್ಕಳ ಮುಂದಿನ ದಿವ್ಯ, ಭವ್ಯ ಭವಿಷ್ಯದ ಕುರಿತು ಸಂಕಲ್ಪ ಮಾಡಬೇಕಾಗಿದೆ ಎಂದರು. ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಪ್ರಾರಂಭದಲ್ಲಿ ಸ್ವಾಗತಿಸಿ, ನಿರೂಪಿಸಿ ಕೊನೆಯಲ್ಲಿ ವಂದಿಸಿದರು. ವೇದಿಕೆಯಲ್ಲಿ ಶಾಲೆಯ ಶಿಕ್ಷಕ-ಶಿಕ್ಷಕಿಯರಾದ ವೀಣಾ ಬಿ., ಪದ್ಮಾವತಿ ವಿ., ನಾಗರಾಜ್ ಹೆಚ್. ಅಶೋಕ್ ಆರ್. ಮುಂತಾದವರು ಉಪಸ್ಥಿತರಿದ್ದರು.

# ಸೌಮ್ಯ ದಯಾನಂದ ಅವರ ಕೃತಿಗೆ ಕಸಾಪ ದತ್ತಿ ಪ್ರಶಸ್ತಿ

**ದಾವಣಗೆರೆ:** ಜಗಳೂರು ತಾಲ್ಲೂಕು ದಿದ್ದಿಗೆ ಗ್ರಾಮದ ಪ್ರೌಢ ಶಾಲಾ ಸಹ ಶಿಕ್ಷಕಿ ಸೌಮ್ಯ ದಯಾನಂದ ಅವರ ·ಸಂಜೆ ಐದರ ಸಂತೆ'ಕವನ ಸಂಕಲನಕ್ಕೆ ಪ್ರೊ. ಡಿ.ಸಿ. ಅನಂತಸ್ವಾಮಿ ದತ್ತಿ ಕವನ ಸಂಕಲನ ಪುರಸ್ಕಾರ ದೊರೆತಿದೆ.ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತು ವಿವಿಧ 52 ದತ್ತಿ ಪ್ರಶಸ್ತಿಗಾಗಿ ಬರಹಗಾರರಿಂದ 2023ರಲ್ಲಿ ಪ್ರಕಟವಾದ ಕೃತಿಗಳನ್ನು ಆಹ್ವಾನಿಸಿತ್ತು. ಕವನ ಸಂಕಲನ ವಿಭಾಗದಲ್ಲಿ ಸೌಮ್ಯ ದಯಾನಂದ ಕೃತಿಗೆ ಪ್ರೊ. ಡಿ. ಸಿ. ಅನಂತ ಸ್ವಾಮಿ ದತ್ತಿ ಕವನ ಸಂಕಲನ ಪುರಸ್ಕಾರ ದೊರೆತಿದೆ. ದೇಶ ವಿದೇಶಗಳಿಂದ 4 ಸಾವಿರಕ್ಕೂ ಅಧಿಕ ಕೃತಿಗಳು ಸಲ್ಲಿಕೆಯಾಗಿದ್ದು, 12 ಜನರ ಪರಿಣಿತರ ಸಮಿತಿ ಆಯ್ಕೆ ಮಾಡಿದ ಪಟ್ಟಿಯನ್ನು ಕಸಾಪ ರಾಜ್ಯಾಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ನೇತೃತ್ವದ ತಂಡ ಪರಿಶೀಲಿಸಿ ಅಂತಿಮ ಪಟ್ಟಿ ಬಿಡುಗಡೆ ಮಾಡಿದೆ. ಶೀಘ್ರದಲ್ಲೇ ದತ್ತಿ ಪ್ರಶಸ್ತಿಗೆ ಆಯ್ಕೆಯಾದ ಬರಹಗಾರರಿಗೆ ಪ್ರಶಸ್ತಿ ಪ್ರದಾನ ಸಮಾರಂಭ ಏರ್ಪಡಿಸಲಾಗುವುದು ಎಂದು ಕಸಾಪ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಶ್ರೀಮತಿ ಸೌಮ್ಯ ದಯಾನಂದ ಅವರು ಹಲವಾರು ಕಥೆ, ಲೇಖನಗಳನ್ನು ಬರೆದಿದ್ದಾರೆ. ಅವರಿಗೆ ದಾವಣಗೆರೆ ಜಿಲ್ಲಾ ಸಾವಿತ್ರಿಬಾಯಿ ಫುಲೆ ಉತ್ತಮ ಶಿಕ್ಷಕಿ ಪ್ರಶಸ್ತಿ, ದಾವಣಗೆರೆ ನಗರ ಪಾಲಿಕೆಯಿಂದ ಕೊಡಲಾಗುವ ರಾಜ್ಯೋತ್ಸವ ಪ್ರಶಸ್ತಿಗಳು ಲಭಿಸಿವೆ.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಗದಗ :** 2025-26 ನೇ ಸಾಲಿನಲ್ಲಿ ಆದರ್ಶ ವಿದ್ಯಾಲಯ ಕೊರ್ಲಹಳ್ಳಿ ತಾ: ಮುಂಡರಗಿ ಹಾಗೂ ಆದರ್ಶ ವಿಶ್ವ ವಿದ್ಯಾಲಯ ಇಟಗಿ ತಾ: ರೋಣ ಇಲ್ಲಿ 6 ನೇ ತರಗತಿ ದಾಖಲಾತಿಯ ಪ್ರವೇಶ ಪರೀಕ್ಷೆಗೆ ಫೆಬ್ರುವರಿ 28 ರವರಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಗದಗ ಜಿಲ್ಲೆಯಲ್ಲಿ 5 ನೇ ತರಗತಿ ವ್ಯಾಸಂಗ ಮಾಡುತ್ತಿರುವ , ಪೋಷಕರು ತಾಲೂಕಿನಲ್ಲಿ ವಾಸವಿದ್ದಲ್ಲಿ ವಾಸಸ್ಥಳ ದೃಢೀಕರಣ ಪತ್ರ ಹೊಂದಿರುವ ಅರ್ಹ ವಿದ್ಯಾರ್ಥಿಗಳು ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ವಿದ್ಯಾಥಿಯು ಓದುತ್ತಿರುವ ಶಾಲೆಯ ಸ್ಯಾಟ್ ಸಂಖ್ಯೆ ವಿದ್ಯಾರ್ಥಿಯ ಭಾವಚಿತ್ರ , ವಿದ್ಯಾರ್ಥಿ ಓದುತ್ತಿರುವ ಶಾಲೆಯ ಮುಖ್ಯ ಶಿಕ್ಷಕರ ಮೊಬೈಲ್ ನಂಬರ್, ವಿದ್ಯಾರ್ಥಿಯ ಜಾತಿ ಮತ್ತು ಆದಾಯ ದೃಢೀಕರಣ ಪತ್ರ ಪೋಷಕರ ಸರಿಯಾದ ಮೊಬೈಲ್ ನಂಬರ್, ವಾಸ ದೃಢೀಕರಣ ಪತ್ರ, ತಹಶೀಲ್ದಾರ ಅವರಿಂದ ಹಾಗೂ ಅಂಗವಿಕಲ ವಿದ್ಯಾರ್ಥಿಗಳಿಗೆ ಸಕ್ಷಮ ಪ್ರಾದಿಕಾರದಿಂದ ನೀಡಿರುವ ಪ್ರಮಾಣ ಪತ್ರ ಅರ್ಜಿ ಸಲ್ಲಿಸುವ ಸಮಯದಲ್ಲಿ ದಾಖಲಿಸಬೇಕಾಗುತ್ತದೆ.ಹೆಚ್ಚಿನ ಮಾಹಿತಿಗಾಗಿ ನೋಡಲ್ ಅಧಿಕಾರಿ ಕೆಪಿ ಸಾಲಿಮಠ ಮೊ.ಸಂ. 8762487691 ಸಂಪರ್ಕಿಸಬಹುದಾಗಿದೆ.

## ಬೇಕರಿ ಉತ್ಪನ್ನಗಳ ಕುರಿತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಾಗಾರ

**ಶಿವಮೊಗ್ಗ :** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ಶಿವಮೊಗ್ಗ ಕೃಷಿ ಮಹಾವಿದ್ಯಾಲಯ ಆವರಣದ ಬೇಕರಿ ಘಟಕದಲ್ಲಿ ದಿ:03/03/2025 ರಿಂದ ದಿ:01/04/2025 ರವರೆಗೆ 30 ದಿನಗಳು ವಿವಿಧ ಬೇಕರಿ ಉತ್ಪನ್ನಗಳ ತಯಾರಿಕೆ ಕುರಿತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಾಗಾರವನ್ನು ಆಯೋಜಿಸಿದೆ. ತರಬೇತಿಯಲ್ಲಿ ಬೇಕರಿ ಉತ್ಪನ್ನಗಳಾದ ಬೆಣ್ಣೆ ಬಿಸ್ಕತ್, ಕೋಕೋನಟ್ ಕುಕಿಸ್, ಕೋಕೋನಟ್ ಬಿಸ್ಕತ್, ಮಸಾಲ ಬಿಸ್ಕತ್, ಮೆಲ್ಟಿಂಗ್ ಮೊಮೆಂಟ್ ಬಿಸ್ಕತ್, ಪೀನಟ್ ಕುಕಿಸ್, ವೆನಿಲಾ ಬಟನ್, ಬನಾನಾ ಕೇಕ್, ಕೋಕೊನಟ್ ಕ್ಯಾಸಲ್ಸ್, ಫ್ರೂಟ್ ಕೇಕ್, ಸ್ಪಾಂಜ್ ಕೇಕ್, ಆರೆಂಜ್ ಕೇಕ್, ಬ್ಲಾಕ್ ಫಾರೆಸ್ಟ್ ಕೇಕ್, ಸ್ವಿಸ್ ರೋಲ್, ಜೆಲ್ ಕೇಕ್, ಬಟರ್ ಐಸಿಂಗ್, ಮಸಾಲಾ ಡೋನಟ್, ಮಿಲ್ಕ್ ಬ್ರೆಡ್, ಬ್ರೌನಬ್ರೆಡ್, ಫಿಜ್ಜಾ, ಪಫ್ ಪೇಸ್ಟ್ರೀ, ಡ್ಯಾನಿಷ್ ಪೇಸ್ಟ್ರೀ, ದಿಲ್ ಪಸಂದ್, ಬಾಂಬೆ ಕಾರ ಹಾಗೂ ಇತರೆ ಉತ್ಪನ್ನಗಳ ತಯಾರಿಕೆಯ ಬಗ್ಗೆ ತರಬೇತಿ ನೀಡಲಾಗುವುದು.

ತರಬೇತಿ ಶುಲ್ಕ ರೂ. 4500/- ಆಗಿದ್ದು, ಊಟ ಮತ್ತು ವಸತಿ ಸೌಲಭ್ಯ ಇರುವುದಿಲ್ಲ.ಈ ತರಬೇತಿಯಲ್ಲಿ ಭಾಗವಹಿಸಲು ಇಚ್ಚಿಸುವವರು ದಿ:01/03/2025 ರೊಳಗಾಗಿ ಡಾ. ಜಯಶ್ರೀ ಎಸ್.-9449187763, ಜಯಶಂಕರ-9686555897 ಇವರುಗಳನ್ನು ದೂರವಾಣಿ ಮೂಲಕ ಅಥವಾ ಖುದ್ದಾಗಿ ಸಂಪರ್ಕಿಸಿ ಹೆಸರನ್ನು ನೊಂದಾಯಿಸಿಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

## ನಿಧನ ಸುದ್ದಿಗಳು

### ಶ್ರೀ ರವೀಂದ್ರ ಕುಂಟೆ ನಿಧನ

**ದಾವಣಗೆರೆ:** ದಿಕ್ಷೀತ್ ರಸ್ತೆ, 2ನೇ ಕ್ರಾಸ್ ವಾಸಿ ಮತ್ತು ಗೀತಾ ಟೆಕ್ಸ್‌ಟೈಲ್ಸ್ ಮಾಲೀಕರಾದ ಇವರು, ದಿನಾಂಕ 20.02.2025ರ ಗುರುವಾರ ಬೆಳಗಿನ ಜಾವ 3.45ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 68 ವರ್ಷ ವಯಸ್ಸಾಗಿತ್ತು. ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ, ಸೊಸೆ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 20.02.2025ರ ಗುರುವಾರ ಸಂಜೆ 5 ಕ್ಕೆ ಪಿ.ಬಿ. ರಸ್ತೆಯ ವೈಕುಂಠಧಾಮದಲ್ಲಿ ನೆರವೇರಿಸಲಾಯಿತು.

# ಹೊಸೂಡಿಯ ವಿಸ್ಮಯಕಾರಿ ಜಾಗಟೆಕಲ್ಲು



**ಶಿವಮೊಗ್ಗ:** ಮಲೆನಾಡಿನ ಹೆಬ್ಬಾಗಿಲು ಎಂದೇ ಪ್ರತೀತಿಯಾಗಿರುವ ಶಿವಮೊಗ್ಗ ತನ್ನ ಒಡಲಲ್ಲಿ ಅನೇಕ ರಹಸ್ಯ ಹಾಗೂ ವಿಸ್ಮಯಕಾರಿ ಸಂಗತಿಗಳನ್ನು ಹೂತಿಟ್ಟುಕೊಂಡಿದೆ. ಕೆಲವು ಬೆಳಕಿಗೆ ಬಂದಿವೆ, ಇನ್ನೂ ಕೆಲವು ಸಂಗತಿಗಳು ಬೆಳಕಿಗೆ ಬಾರದೇ ಎಲೆಮರೆ ಕಾಯಿಯಂತೆ ಯಾರಿಗೂ ಕಾಣದೆ ಸಾರ್ವಜನಿಕರ ಬರುವಿಕೆಗಾಗಿ ತವಕಿಸುತ್ತಿವೆ. ಇಂತಹ ಸಾಲಿನಲ್ಲಿ ನಿಂತಿರುವುದರಲ್ಲಿ ಹೊಸೂಡಿಯ ಕುತೂಹಲ ಹಾಗೂ ವಿಸ್ಮಯಕಾರಿ ಜಾಗಟೆ ಕಲ್ಲು! ಇಂಥದ್ದೊಂದು ವಿಚಿತ್ರ, ವಿಸ್ಮಯಕಾರಿ ಕಲ್ಲು ಬಂಡೆಯೊಂದು ಶಿವಮೊಗ್ಗದಿಂದ ಸುಮಾರು 15 ಕಿ.ಮೀ.ದೂರದ ಹೊಸೂಡಿ ಫಾರಂ ಎಂಬಲ್ಲಿ ಅದೆಷ್ಟೋ ಸಹಸ್ರಾರು ವರ್ಷಗಳಿಂದ ತಲೆ ಎತ್ತಿ ನಿಂತಿದೆ. ಗಣಿ ಧಣಿಗಳ ಕಾಟಕ್ಕೂ ಬಲಿಯಾಗಿ ಉಳಿದುಕೊಂಡಿದೆ ಈ ಕಲ್ಲುಬಂಡೆ.

ಗೋಲಾಕಾರದ ಆಕೃತಿಯನ್ನು ಹೊಂದಿರುವ ಈ ಕಲ್ಲು ಬಂಡೆ ಸುಮಾರು ಎಂಟು ಅಡಿ ಎತ್ತರ ಹಾಗೂ ಸುಮಾರು 30 ಅಡಿ ಪರಿಧಿಯನ್ನು ಹೊಂದಿದೆ.

ಕುತೂಹಲಕಾರಿ ಸಂಗತಿ ಎಂದರೆ ಯಾರಾದರೂ ಒಂದು ಕಲ್ಲು ತುಂಡನ್ನು ಕೈಯಲ್ಲಿ ಹಿಡಿದು ಈ ಬಂಡೆಯ ಯಾವ ಭಾಗದಲ್ಲೇ ಹೊಡೆದರೂ ಢಣ್, ಡಣ್ ಎಂಬ ಸುಶ್ರಾವ್ಯ ನಾದ (ಸದ್ದು) ಕೇಳಿಬರುತ್ತದೆ. ಒಂದೊಂದು ಜಾಗದಲ್ಲಿ ಒಂದೊಂದು ತರಹದ ನಾದ ಕೇಳಿ ಬರುವುದೇ ಇದರ ವಿಸ್ಮಯಕಾರಿ ಹಾಗೂ ಕುತೂಹಲಕಾರಿ ಸಂಗತಿಯಾಗಿದೆ. ವಿಜ್ಞಾನಿಗಳಿಗೂ ಸವಾಲಾಗಿದೆ ನಿಂತಿದೆ ಈ ಬಂಡೆ!

ಹೊಸೂಡಿ ಗ್ರಾಮಸ್ಥರು ಪ್ರತಿವರ್ಷ ಮುಂಗಾರು ಆರಂಭವಾದ ಸಂದರ್ಭದಲ್ಲಿ ಆರಾಧ್ಯ ದೈವ ಶ್ರೀ ವೀರಭದ್ರಸ್ವಾಮಿಯ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಕುಳ್ಳಿರಿಸಿ ಮೆರವಣಿಗೆಯಲ್ಲಿ ಈ ಜಾಗಟೆ ಕಲ್ಲು ಇರುವ ಸ್ಥಳಕ್ಕೆ ಬಂದು ಲೋಕ ಕಲ್ಯಾಣಾರ್ಥ ಪೂಜೆಗೈಯುವ ಸಂಪ್ರದಾಯವಿದೆ. ಅಲ್ಲದೆ ಹೊಸೂಡಿ ಫಾರಂನ ಜನರೂ ಈ ಕಲ್ಲು ಬಂಡೆಯಲ್ಲಿ ದೈವತ್ವವನ್ನು ನಂಬಿ ವಾರ್ಷಿಕ ಜಾತ್ರೆಯನ್ನು ಹಮ್ಮಿಕೊಂಡು ಬರುತ್ತಿರುವುದು ಭಕ್ತಿಯ ಪರಾಕಾಷ್ಠೆಯ ದ್ಯೋತಕವಾಗಿದೆ.

ಇದೊಂದು ಕಣಶಿಲೆಯ (ಗ್ರಾನೈಟ್) ಕಲ್ಲು ಬಂಡೆಯಾಗಿದ್ದು ಈ ಹಿಂದೆ ಗಣಿಗಾರಿಕೆಯವರ ಚಾಣಕ್ಕೆ ತುತ್ತಾಗಿದ್ದುದು ಬಂಡೆಯ ಮೇಲೆ ಅಲ್ಲಲ್ಲಿ ಬಿದ್ದಿರುವ ಕುಳಿಗಳಿಂದ ಗೋಚರವಾಗುತ್ತದೆ. ಅದೇಕೋ ಏನೋ ಈಗ ಇದ್ದಷ್ಟು ಬಿಟ್ಟು ಹೋಗಿದ್ದಾರೆ. ಸ್ಥಳೀಯರು ದೈವ ಭಕ್ತಿಯ ಮೂಲಕ ಅಪರೂಪದ ಈ ಬಂಡೆಯನ್ನು ಕಾಪಿಟ್ಟುಕೊಂಡು ಬಂದಿರುವುದು ಸಂತಸದ ಸಂಗತಿ.

ಶಿವಮೊಗ್ಗದಿಂದ ಈ ಸ್ಥಳಕ್ಕೆ ತೆರಳಲು ಬಸ್ಸಿನ ವ್ಯವಸ್ಥೆ ಇದೆ. ಶಿವಮೊಗ್ಗದಿಂದ ಹೊಸೂಡಿ ಮಾರ್ಗವಾಗಿ ಶೆಟ್ಟಿಹಳ್ಳಿಗೆ ಹೋಗುವ ಈ ಬಸ್ಸಿನಲ್ಲಿ ಸಾಗಿದರೆ ಹೊಸೂಡಿ ಫಾರಂ ಎಂಬಲ್ಲಿ ಇಳಿಯಬೇಕು. ಮುಖ್ಯ ರಸ್ತೆಯಿಂದ ಒಂದು ನೂರು ಮಾರು ದೂರದ ಹೊಲದ ಅಂಚಿನಲ್ಲಿ ಈ ವಿಸ್ಮಯಕಾರಿ ಜಾಗಟೆಕಲ್ಲು ಇದೆ. ಗ್ರಾಮಾಡಳಿತ, ಸಂಬಂಧಿಸಿದ ಇಲಾಖೆಯವರು ಮನಸ್ಸು ಮಾಡಿದರೆ ಇದನ್ನು ಒಂದು ಉತ್ತಮ ಪ್ರೇಕ್ಷಣೀಯ ಕೇಂದ್ರವನ್ನಾಗಿಸಬಹುದೆಂಬುದು ಹಲವರ ಅಭಿಪ್ರಾಯ.

## ಇ-ಆಸ್ತಿ ನೋಂದಣಿ: ಶಿವಮೊಗ್ಗ ಪಾಲಿಕೆ ಸಂಪೂರ್ಣ ವಿಫಲ

**ಶಿವಮೊಗ್ಗ:** ಇ-ಆಸ್ತಿ ನೋಂದಣಿ ವಿಚಾರದಲ್ಲಿ ಶಿವಮೊಗ್ಗ ಮಹಾನಗರ ಪಾಲಿಕೆ ಸಂಪೂರ್ಣ ವಿಫಲಗೊಂಡಿದೆ. ಈ ಹಿನ್ನೆಲೆಯಲ್ಲಿ ಇ-ಆಸ್ತಿ ತಂತ್ರಾಂಶವನ್ನು ಕಡ್ಡಾಯ ಮಾಡಿರುವುದನ್ನು ಕಂದಾಯ ಇಲಾಖೆ ಕನಿಷ್ಠ ಆರು ತಿಂಗಳು ಮುಂದೂಡಬೇಕು ಎಂದು ಶಿವಮೊಗ್ಗ ನಾಗರಿಕ ಹಿತರಕ್ಷಣಾ ವೇದಿಕೆಯ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಕೆ.ವಿ.ವಸಂತಕುಮಾರ ಆಗ್ರಹಿಸಿದರು.ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಇ-ಆಸ್ತಿ ತಂತ್ರಾಂಶದಲ್ಲಿ ಆಸ್ತಿಗಳನ್ನು ಅಳವಡಿಸಲು ಸೂಕ್ತ ನಿರ್ದೇಶನ ನೀಡಲಾಗಿದ್ದು ಈ ನಿರ್ದೇಶನದ ಪ್ರಕಾರ ಕೆಎಂಡಿಎಸ್ (ಕರ್ನಾಟಕ ಮುನ್ಸಿಪಲ್ ಡೇಟಾ ಸೊಸೈಟಿ) ಯಿಂದ ಅಭಿವೃದ್ಧಿಪಡಿಸಿದ ತಂತ್ರಾಂಶದಲ್ಲಿಯೇ ಆಸ್ತಿಗಳ ನೋಂದಣಿಗಳ ಗಣಕೀಕರಣಗೊಳಿಸಲು ಇಲಾಖೆಯಿಂದ ಸೂಚಿಸಲಾಗಿತ್ತು. ಆದರೆ ಮಹಾನಗರ ಪಾಲಿಕೆ ಈ ನಿರ್ದೇಶನ ಪಾಲಿಸದೆ ಬೇರೆ ಬೇರೆ ತಂತ್ರಾಂಶಗಳಲ್ಲಿ ಅಂದರೆ ಎಂ ಆರ್‌ಸಿ ತಂತ್ರಾಂಶದಲ್ಲಿ ನಮೂದು ಮಾಡಿತ್ತು. ಇದು ಅನಧಿಕೃತ ತಂತ್ರಾಂಶವಾಗಿದ್ದು ಇಲ್ಲಿ ಮಾಡಿರುವ ನಮೂನೆ-2, ನಮೂ ನೆ-3ನ್ನು ಕಂದಾಯ ಇಲಾಖೆಯ ಕಾವೇರಿ ತಂತ್ರಾಂಶಕ್ಕೆ ಅಳವಡಿಸಲು ಸಾಧ್ಯವಾಗದೇ ಇರುವುದರಿಂದ ಇದುವರೆಗೂ ಇ-ಆಸ್ತಿ ಯೋಜನೆ ಅಡಿಯಲ್ಲಿ ಪಡೆದ ನಮೂನೆ 2, 3 ವ್ಯರ್ಥವಾಗಿದೆ ಎಂದು ದೂರಿದರು.ಶಿವಮೊಗ್ಗ ಮಹಾನಗರ ಪಾಲಿಕೆ ಇ-ಆಸ್ತಿಗೆ ಅಗತ್ಯವಾದ ನಮೂನೆ 2, 3ನ್ನು ನೀಡುವಲ್ಲಿ ಸಂಪೂರ್ಣ ವಿಫಲವಾಗಿದೆ. ಆಯುಕ್ತರೂ ಸೇರಿದಂತೆ ಇಲ್ಲಿನ ಅಧಿ ಕಾರಿ ವರ್ಗ ಇ-ಆಸ್ತಿ ನೋಂದಣಿ ವಿಚಾರದಲ್ಲಿ ತಲೆಕೆಡಿಸಿಕೊಂಡಂತೆ ಕಾಣಿಸು ತ್ತಿಲ್ಲ. ಮಹಾನಗರ ಪಾಲಿಕೆಯ ಆಡಳಿತಕ್ಕೇ ದೊಡ್ಡ ಸರ್ಜರಿಯ ಅವಶ್ಯಕತೆ ಇದೆ ಎಂದರು.ಇಷ್ಟು ಹೊತ್ತಿಗೆ ಸಾರ್ವಜನಿಕರಿಗೆ ಯಾವ ಖರ್ಚೂ ಇಲ್ಲದೆ ಕೇವಲ 100ರೂ ಶುಲ್ಕದಲ್ಲಿ ಇ-ಖಾತೆಯನ್ನು ಅಧಿಕಾರಿಗಳು ನೀಡಬಹುದಿತ್ತು. ಆದರೆ ಪಾಲಿಕೆಯ ಅಧಿಕಾರಿಗಳ ವೈಖರಿ ನೋಡಿದರೆ ಅವರು ಇ-ಆಸ್ತಿ ನೀಡಲು ಸಂಪೂರ್ಣ ವಿಫ ಲವಾಗಿದ್ದಾರೆ. ಶಿವಮೊಗ್ಗದಲ್ಲಿ ಸುಮಾರು 1.7 ಲಕ್ಷ ಖಾತೆದಾರರಿದ್ದಾರೆ. ಇದ ರಲ್ಲಿ ಶೇ.30ರಷ್ಟು ಖಾತೆಗಳು ಕೂಡ ಇ-ಆಸ್ತಿ ಪಡೆದಿಲ್ಲ ಎಂದರು.ಈಗ ನೀಡಿರುವ ಇ-ಆಸ್ತಿ ದಾಖಲೆ ಕೂಡ ಅಧೀಕೃತ ತಂತ್ರಾಂಶದಿಂದ ನೀಡಿರುವ ದಾಖಲೆ ಅಲ್ಲವೇ ಅಲ್ಲ. ಒಟ್ಟಾರೆ ಈ ದಿನದ ವರೆಗೆ ಪಾಲಿಕೆಯ ಪ್ರಗತಿ ಶೂನ್ಯವಾಗಿದೆ. ಈಗ ಪಡೆದಿರುವುದೂ ಕೂಡ ಸರಿಯಲ್ಲ ಎಂದಾದರೆ ಇ-ಆಸ್ತಿ ಪಡೆದಿರುವವರು ಕೂಡ ಮತ್ತೆ ತೊಂದರೆ ಅನುಭವಿಸಬೇಕಾಗುತ್ತದೆ. ಪಾಲಿಕೆ ಆಡಳಿತ ಕೂಡ ಇ-ಆಸ್ತಿಗೆ ಸಂಬಂಧಿಸಿದಂತೆ ಹೊರಡಿಸಿದ ಸುತ್ತೋಲೆ ಗಳನ್ನು ಗಮನಿಸಲೇ ಇಲ್ಲ. ಅನುಷ್ಠಾನದಲ್ಲಂತೂ ಸಂಪೂರ್ಣ ನಿರ್ಲಕ್ಷ್ಯ ವಹಿಸಿದೆ ಎಂದರು.ಈಗ ಉಳಿದಿರುವ ಸುಮಾರು ಶೇ.65 ರಷ್ಟು ಡಿಜಟೀಲೀಕರಣ ಕಾಮಗಾರಿಗೆ ಮಾ.10 ಕೊನೆಯ ದಿನವಾಗಿದೆ. ಈ ಅವಧಿಯಲ್ಲಿ ಇದು ಅಸಾಧ್ಯದ ಮಾತಾ ಗಿದೆ. ಶೇ.35ರಷ್ಟು ಪ್ರಗತಿ ಕಾಣಲು 6 ವರ್ಷ ಸಮಯ ತೆಗೆದುಕೊಂಡಿದೆ. ಇನ್ನು ಉಳಿದ 65ರಷ್ಟು ಪ್ರಗತಿಯನ್ನು ಒಂದು ತಿಂಗಳಲ್ಲಿ ಮುಗಿಸುವುದು ಅಸಾಧ್ಯದ ಮಾತು. ಆದ್ದರಿಂದ ನೋಂದಣಿಗೆ ಕಡ್ಡಾಯ ಮಾಡಿರುವ ಇ-ಆಸ್ತಿ ಪ್ರಕ್ರಿಯೆಗೆ ರಾಜ್ಯ ಸರ್ಕಾರ ಕನಿಷ್ಠ 6 ತಿಂಗಳಾದರೂ ಕಾಲಾವಕಾಶ ನೀಡಬೇಕು ಎಂದು ಒತ್ತಾಯಿಸಿದರು.ಡಾ.ಸತೀಶ್‌ಕುಮಾರ ಶೆಟ್ಟಿ ಮಾತನಾಡಿ, ಇ-ಸ್ವತ್ತು ಎನ್ನುವುದು ಸಹಜ ಪ್ರಕ್ರಿಯೆ. ಮಹಾನಗರ ಪಾಲಿಕೆಯವರು ಅದನ್ನು ಮನೆ ಬಾಗಿಲಿಗೆ ಬಂದು ಕೊಡಬೇಕು. ಆದರೆ ಅನಧಿಕೃತ ತಂತ್ರಾಂಶಗಳ ಮೂಲಕ ನೋಂದಣಿ ಮಾಡಲು ಹೋಗಿ ಆಸ್ತಿದಾರರಿಗೆ ತೊಂದರೆ ಉಂಟಾಗಿದೆ. ಸಾರ್ವಜನಿಕರು ಈ ಬಗ್ಗೆ ಗೊಂದಲ ಮೂಡಿಸಿಕೊಳ್ಳದೆ ಯಾವ ಲಂಚವನ್ನೂ ಕೊಡದೆ ಕೇವಲ 100 ರೂ. ಶುಲ್ಕದಲ್ಲಿ ತಮ ಖಾತೆಯನ್ನು ಪಡೆದುಕೊಳ್ಳಬಹುದಾಗಿದೆ ಎಂದರು.ಪ್ರಮುಖರಾದ ಎಸ್.ಆರ್.ಗೋಪಾಲ್, ಎಸ್.ಬಿ.ಅಶೋಕಕುಮಾರ, ಸೀತಾ ರಾಮ್, ಎಸ್.ಎಸ್.ಜ್ಯೋತಿಪ್ರಕಾಶ್ ಸುದ್ದಿಗೋಷ್ಠಿಯಲ್ಲಿದ್ದರು.

## ಡಾ.ಕವಿತಾ ಮಿಶ್ರಾಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ

**ಬಾಳೆಹೊನ್ನೂರು:** ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಮಾ.10-14ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಸಂಯೋಜಿಸಲಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಫಾಲ್ಗುಣ ಶುದ್ಧ ತ್ರಯೋದಶಿ ಮಾ.12ರಂದು ಬುಧವಾರ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವ, ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ, ಶಿವಾದ್ವೈತ ಸಮ್ಮೇಳನ ಜರುಗಲಿದೆ. ಪ್ರತಿ ವರ್ಷ ಪೀಠದಿಂದ ಕೊಡಮಾಡುವ ಪ್ರತಿಷ್ಠಿತ "ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ"ಯನ್ನು ರಾಯಚೂರ ಜಿಲ್ಲೆ ಕವಿತಾಳ ಗ್ರಾಮದ ಕೃಷಿಯಲ್ಲಿ ವಿಶೇಷ ಸಾಧನೆಗೈದ ಮಹಿಳೆ ಡಾ.ಕವಿತಾ ಮಿಶ್ರಾ ಇವರಿಗೆ ಪ್ರದಾನ ಮಾಡಲಾಗುವುದೆಂದು ತಿಳಿಸಿದ್ದಾರೆ.ಪೀಠದಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳ ಜರುಗಲಿವೆ.ಮಾ.10ರಂದು ಸೋಮವಾರ ಧ್ವಜಾರೋಹಣ, ಹರಿದ್ರಾಲೇಪನ, ವೀರಗಾಸೆ-ಪುರವಂತರ ಸಮ್ಮೇಳನ ನಡೆಯುವುದು. 11ರಂದು ಮಂಗಳವಾರ ದೀಪೋತ್ಸವ-ಕುಂಕುಮೋತ್ಸವ, ವೀರಭದ್ರಸ್ವಾಮಿ ಚಿಕ್ಕ ರಥೋತ್ಸವ, ಕೃಷಿ ಸಮ್ಮೇಳನ, ಕಾಫಿ-ಅಡಿಕೆ ಬೆಳೆಗಾರರ ಹಿತ ಚಿಂತನ-ಮಂಥನ ಸಮಾರಂಭ ಜರುಗುವುದು. 13ರಂದು ಗುರುವಾರ ಶಯನೋತ್ಸವ, ಜಗದ್ಗುರು ಶಿವಾನಂದ ಎಸ್ಟೇಟಿನಲ್ಲಿ ಪೂಜಾ-ಪ್ರಸಾದ, ಕೆಂಡಾರ್ಚನೆ, ಜಾನಪದ ಸಮ್ಮೇಳನ ನಡೆಯುವುದು. 14ರಂದು ಪೌರ್ಣಿಮೆ ದಿನದಂದು ವಸಂತೋತ್ಸವ, ಭದ್ರಾನದಿ ತೀರದಲ್ಲಿ ಸುರಗಿ ಸಮಾರಾಧನೆ ಜರುಗಲಿದೆ ಎಂದು ತಿಳಿಸಿದ್ದಾರೆ.

# ಸಂತ ಸೇವಾಲಾಲ್ ಜಯಂತಿಗೆ ತೆರೆ: ಹೋಮದಲ್ಲಿ ಪೂರ್ಣಾಹುತಿ



**ಹೊನ್ನಾಳಿ:** ಜಗದ್ಗುರು ಸಂತ ಸೇವಾಲಾಲ್ ಅವರ 286ನೇ ಜಯಂತ್ಯುತ್ಸವಕ್ಕೆ ಶನಿವಾರ ಹೋಮಕ್ಕೆ ಪೂರ್ಣಾಹುತಿ ಅರ್ಪಿಸುವುದರೊಂದಿಗೆ ತೆರೆ ಬಿದ್ದಿತು.

ಶನಿವಾರ ಬೆಳಗ್ಗೆ ಹೋಮ ಕುಂಡದ ಆವರಣಕ್ಕೆ ಅಲಂಕೃತ ಪಲ್ಲಕ್ಕಿಯಲ್ಲಿ ಮರಿಯಮ್ಮ ಮತ್ತು ಸೇವಾಲಾಲ್ ಉತ್ಸವ ಮೂರ್ತಿಗಳನ್ನು ತರಲಾಯಿತು. ವಿವಿಧ ಬಣ್ಣದ ರಂಗೋಲಿ, ಹೂವಿನಿಂದ ಅಲಂಕರಿಸಿದ್ದ ಹೋಮಕುಂಡಕ್ಕೆ (ಭೋಗ್) ಒಂಭತ್ತು ವಿವಿಧ ಜಾತಿಯ ಮರದ ಚೆಕ್ಕೆಗಳು, ಗಂಧದ ಚೆಕ್ಕೆ, ತುಪ್ಪ ತುಂಬಿದ ಇರುಮುಡಿ ಕಾಯಿಗಳನ್ನು ಧಾರ್ಮಿಕ ವಿಧಾನಗಳೊಂದಿಗೆ ಜೋಡಿಸಿ, ಕರ್ಪೂರದ ಮೂಲಕ ಕುಂಡವನ್ನು ಬೆಳಗಿಸಿ, ಗೋಧಿ ಪಾಯಸ ಮತ್ತು ತುಪ್ಪವನ್ನು ನೈವೇದ್ಯವಾಗಿ ಅರ್ಪಿಸಲಾಯಿತು.

ಹೋಮ ಕುಂಡದ ಧಾರ್ಮಿಕ ವಿಧಿ-ವಿಧಾನಗಳನ್ನು ಸೇವಾಲಾಲ್ ದೇವಸ್ಥಾನದ ಅರ್ಚಕರ ನೇತೃತ್ವದಲ್ಲಿ ಅರ್ಚಕ ಸೇವ್ಯಾನಾಯ್ಕ, ಮರಿಯಮ್ಮ ದೇವಸ್ಥಾನದ ಅರ್ಚಕ ಮಂಜುನಾಥನಾಯ್ಕ ಮತ್ತು ವಿವಿಧ ಸಾಧು, ಸಂತರು ನೆರವೇರಿಸಿದರು.

ಹೋಮಕುಂಡದ ಬಳಿ ಲೋಕಕಲ್ಯಾಣಾರ್ಥವಾಗಿ ಸಾಮೂಹಿಕ ಪ್ರಾರ್ಥನೆಯಲ್ಲಿ 'ಸಕಲ ಜೀವರಾಶಿಗಳಿಗೆ ಒಳ್ಳೆಯದಾಗಲಿ, ಕಾಲ-ಕಾಲಕ್ಕೆ ಮಳೆ, ಬೆಳೆ ಸಮೃದ್ಧಿಯಾಗಿ, ಜನತೆ ಶಾಂತಿ ಸೌಹಾರ್ದದಿಂದ ಬಾಳುವಂತಾಗಲಿ' ಎಂದು ಪ್ರಾರ್ಥಿಸಿದರು.

ಹೋಮ ಪೂಜೆಯಲ್ಲಿ ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ ಅಧ್ಯಕ್ಷ ಹಾಗೂ ವಿಧಾನಸಭಾ ಉಪಾಧ್ಯಕ್ಷ ರುದ್ರಪ್ಪ ಮಾನಪ್ಪ ಲಮಾಣಿ, ಕರ್ನಾಟಕ ತಾಂಡಾಭಿವೃದ್ಧಿ ನಿಗಮ ಅಧ್ಯಕ್ಷ ಎನ್.ಜಯದೇವನಾಯ್ಕ, ಪ್ರಧಾನ ಕಾರ್ಯದರ್ಶಿ ಎನ್.ಅರುಣಕುಮಾರ್, ಪ್ರಧಾನ ಧರ್ಮದರ್ಶಿ ಬಿ.ಹೀರಾನಾಯ್ಕ ಮತ್ತು ಭೋಜ್ಯನಾಯ್ಕ, ಮಹಾಮಠ ನಿರ್ವಹಣಾ ಸಮಿತಿ ಅಧ್ಯಕ್ಷ ಹನುಮಂತನಾಯ್ಕ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜು, ತಾಂಡಾಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಮಾರುತಿನಾಯ್ಕ, ರಾಘವೇಂದ್ರನಾಯ್ಕ, ಎಸ್.ಎನ್.ಗೋಪಾಲನಾಯ್ಕ, ಸುರೇಂದ್ರನಾಯ್ಕ, ಸವಳಂಗ ಭೋಜ್ಯನಾಯ್ಕ, ಭೂಪಾಲನಾಯ್ಕ ಮಹಾಮಠ ಸಮಿತಿಯ ನಿರ್ದೇಶಕರು, ತಹಸೀಲ್ದಾರ್ ಎಚ್.ಬಿ.ಗೋವಿಂದಪ್ಪ, ಪೊಲೀಸ್ ಇಲಾಖೆ ಅಧಿಕಾರಿಗಳು ಇದ್ದರು.

## ಸಂತ ಸೇವಾಲಾಲ್ ಜಯಂತಿ

ಜಗಳೂರು: ತಾಲೂಕು ಬಂಜಾರ ಸಮಾಜ ವತಿಯಿಂದ ಭೋಗ್ ಆಚರಣೆ ಮಾಡುವ ಮೂಲಕ ಸೇವಾಲಾಲ್ ಜಯಂತಿ ಕಾರ್ಯಕ್ರಮವನ್ನು ಪಟ್ಟಣದ ಮಾಲತಿ ಕಾಲೇಜ್ ಆವರಣದ ಸೇವಾಲಾಲ್ ದೇವಸ್ಥಾನದ ಮುಂಭಾಗದಲ್ಲಿ ಪೂಜೆ ಸಲ್ಲಿಸಿ ಜಯಂತಿ ಆಚರಣೆ ಮಾಡಿದರು.ಈ ಸಂದರ್ಭದಲ್ಲಿ ಮಾಲತಿ ಕಾಲೇಜ್ ಕಾರ್ಯದರ್ಶಿ ಮಾಲತಿ ಮುನಿಯ ನಾಯ್ಕ್ ಮಾತನಾಡಿ, ನೊಂದವರ ಕಣ್ಣೀರು ಒರೆಸಿ, ಆತ್ಮಸ್ಥೈರ್ಯ ತುಂಬುತ್ತಿದ್ದ ಸೇವಾಲಾಲ ಮಹಾರಾಜರು ಬಂಜಾರ ಸಮುದಾಯಕ್ಕೆ ಮಾತ್ರ ಸೀಮಿತವಾಗದೆ ಎಲ್ಲರಿಗೂ ಸೇವೆ ಸಲ್ಲಿಸುವ ಮೂಲಕ ಮಾನವೀಯತೆಯ ನೈಜ ಸೇವಕರಾಗಿದ್ದರು. ಸತತವಾಗಿ ಐದು ವರ್ಷಗಳಿಂದ ಕಾಲೇಜ್ ಆವರಣದಲ್ಲಿ ಸೇವಾಲಾಲ್ ದೇವಸ್ಥಾನ ಇರುವುದರಿಂದ ಜಯಂತಿಯನ್ನು ಇಲ್ಲಿ ಆಚರಣೆ ಮಾಡಲಾಗುತ್ತದೆ. ಪಟ್ಟಣದಲ್ಲಿ ಎಲ್ಲಿಯೂ ಈ ದೇವಸ್ಥಾನ ಇಲ್ಲ ಹಾಗಾಗಿ ಇಲ್ಲಿ ಪೂಜೆ ಜೊತೆಗೆ ಜಯಂತಿಯ ಆಚರಣೆ ಮಾಡಿ ಪ್ರಸಾದ ವಿತರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಪಪಂ ಮುಖ್ಯಾಧಿಕಾರಿ ಲೋಕ್ಯ ನಾಯ್ಕ್ ಮಾತನಾಡಿ, 286ನೇ ಜಯಂತಿ ಆಚರಣೆ ಮಾಡಲಾಗುತ್ತದೆ. ಪುರತನ ಕಾಲದಿಂದಲೂ ಈ ಸಂಪ್ರದಾಯವನ್ನು ಮಾಡಿಕೊಂಡು ಬರುತ್ತಿದ್ದೇವೆ. ನಮ್ಮ ಜನಾಂಗ ಮೊದಲು ಗುಡ್ಡುಗಾಡು ಪ್ರದೇಶಗಳಲ್ಲಿ ವಾಸವಾಗಿರುತ್ತಿದ್ದರು. ನಮ್ಮ ಸಮಾಜ ಶಿಕ್ಷಣದಿಂದ ಮುಂದೆ ಬಂದು ಹಲವಾರು ಕೆಲಸ ಮಾಡುತ್ತಿದ್ದಾರೆ. ಎಲ್ಲ ಸಮಾಜದ ಜನರನ್ನು ಒಗ್ಗೂಡಿಸಿಕೊಂಡು ಜೊತೆಯಲ್ಲಿ ಹೋಗುತ್ತಿದ್ದೇವೆ ಎಂದು ಹೇಳಿದರು.ಮಂಜ ನಾಯ್ಕ್ ಮಾತನಾಡಿ ಸೇವಾಲಾಲ್ ತತ್ವಗಳು ಮತ್ತು ಆದರ್ಶಗಳು ಸದಾ ನಮ್ಮೆಲ್ಲರಿಗೂ ಮಾರ್ಗದರ್ಶಿಯಾಗಿದೆ ಹಾಗೂ ಬಂಜಾರ ಸಮಾಜದ ಶ್ರೇಷ್ಠ ದಾರ್ಶನಿಕರಾದ ಸೇವಾಲಾಲ ಮಹಾರಾಜರು, ತಮ್ಮ ಆದರ್ಶ ಮತ್ತು ತತ್ವಗಳ ಮೂಲಕ ಸಮಾಜದ ಸಮಗ್ರ ಅಭಿವೃದ್ಧಿಗೆ ಶ್ರೇಷ್ಠ ಕೊಡುಗೆ ನೀಡಿದ ಮಹಾನ್ ಪುರುಷರು. ಅವರ ಜೀವನ ಸಂದೇಶ ಇಂದು ಸಹ ನಾವು ಕೈಗೊಳ್ಳಬೇಕಾದ ಮಾರ್ಗದರ್ಶನವಾಗಿದೆಮಲ್ಲೇಶ್ ನಾಯ್ಕ್, ಶಿವಕುಮಾರ್, ಮಂಜ ನಾಯ್ಕ್, ಜಯಣ್ಣ, ಆಂಜನೇಯ ನಾಯ್ಕ್, ರಾಜಕುಮಾರ ಎಸ್‌ಡಿಎ ಶಿವಕುಮಾರ್ ನಾಯ್ಕ್, ಆರೋಗ್ಯ ನಿರೀಕ್ಷಕ ಪ್ರಶಾಂತ್,ಜಗದೀಶ್, ದಿನೇಶ್ ಇದ್ದರು.



## ಸತ್ಯ-ನಿಷ್ಟೆ-ಪ್ರಾಮಾಣಿಕತೆಗೆ ಹೆಸರಾದವರು ಸಂತ ಸೇವಾಲಾಲ

**ಶಿವಮೊಗ್ಗ:** ನಮ್ಮ ದೇಶದಲ್ಲಿ ಗುರು ಪರಂಪರೆಗೆ ವಿಶೇಷ ಸ್ಥಾನವಿದ್ದು, ಬಂಜಾರ ಸಮಾಜದ ಗುರುಗಳಾದ ಸಂತ ಸೇವಾಲಾಲರು ಸತ್ಯ, ನಿಷ್ಠೆ ಮತ್ತು ಪ್ರಾಮಾ ಣಿಕತೆಗೆ ಹೆಸರಾದವರು ಎಂದು ಶಾಸಕ ಎಸ್.ಎನ್.ಚನ್ನಬಸಪ್ಪ ಹೇಳಿದರು. ಜಿಲ್ಲಾಡಳಿತ, ಜಿಪಂ, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಬಂಜಾರ ಸಂಘ ಸಂಯುಕ್ತಾಶ್ರಯದಲ್ಲಿ ಶನಿವಾರ ಕುವೆಂಪು ರಂಗಮಂದಿರದಲ್ಲಿ ಏರ್ಪಡಿಸಲಾಗಿದ್ದ ಸಂತ ಶ್ರೀ ಸೇವಾಲಾಲ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ನಮ್ಮದು ಸಾಂಸ್ಕೃತಿಕ ರಾಷ್ಟ್ರ. ವಿವಿಧತೆಯಲ್ಲಿ ಏಕತೆ ಇರುವ ದೇಶ. ಗಿಡ, ಮರ, ನೆಲ, ಜಲ ಹೀಗೆ ಪ್ರಕೃತಿಯನ್ನೇ ಪೂಜಿಸುತ್ತೇವೆ ನಾವು. ಇಂತಹ ಸಮಾಜದಲ್ಲಿ ಸಂತ ಸೇವಾಲಾಲರು ಸತ್ಯ, ನಿಷ್ಠೆ ಪ್ರಾಮಾಣಿಕತೆಗೆ ಹೆಸರಾದವರು ಎಂದರು. ರಾಜ್ಯ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯಕ್ ಮಾತನಾಡಿ, ಸಂತ ಸೇವಾಲಾಲರಂತಹ ದಾರ್ಶನಿಕರು ಒಂದು ಜಾತಿಗೆ ಸೀಮಿತರಲ್ಲ. ಅವರು ಬಂಜಾರ ಸಮಾಜ ಸುಧಾರಣೆ ಮತ್ತು ಅಭಿವೃದ್ಧಿಗಾಗಿ ಬಹಳಷ್ಟು ಉತ್ತಮ ಸಂದೇಶ ನೀಡಿದ್ದಾರೆ ಎಂದು ಹೇಳಿದರು.ವಿಧಾನಪರಿಷತ್ ಶಾಸಕ ಡಿ.ಎಸ್.ಅರುಣ್ ಮಾತನಾಡಿ, ಜಗತ್ತೇ ಒಂದು ಕುಟುಂಬ. ನಾವೆಲ್ಲಾ ಇಲ್ಲಿ ಅಕ್ಕ ತಮ್ಮಂದಿರಂತೆ ಬಾಳಬೇಕು ಎನ್ನುವ ಪರಿಕಲ್ಪನೆಯನ್ನು ಸಂತ ಸೇವಾಲಾಲ್ ಈ ಸಮಾಜಕ್ಕೆ ಕೊಟ್ಟಿದ್ದಾರೆ ಎಂದರು.ಜಿಲ್ಲಾ ಬಂಜಾರ ಸಂಘದ ಅಧ್ಯಕ್ಷ ಕೆ.ಬಿ.ಅಶೋಕ್‌ನಾಯ್ಕ್ ಮಾತನಾಡಿ, ಸ್ವಾಭಿ ಮಾನ, ಭಕ್ತಿ, ತ್ಯಾಗ ಹಾಗೂ ಪ್ರಾಮಾಣಿಕತೆಗೆ ಮತ್ತೊಂದು ಹೆಸರೇ ಬಂಜಾರ ಸಮುದಾಯ. ಬಂಜಾರ ಸಮುದಾಯಕ್ಕೆ ವಿಶೇಷವಾದ ಇತಿಹಾಸ ಇದೆ. ತಿರು ಪತಿ ತಿಮ್ಮಪ್ಪನಿಗೆ ಈ ಸಮಾಜದ ಗುರುವಿನಿಂದಲೇ ಮೊದಲ ಪೂಜೆ ನಡೆಯು ವುದು. ಈ ದೇಶದ ಸಂಸತ್ ಭವನ ಕಟ್ಟಲು ಜಾಗ ಕೊಟ್ಟಿದ್ದು ಕೂಡ ಇದೇ ಸಮಾಜ ಎಂದು ಸ್ಮರಿಸಿದರು.ವಿಧಾನಪರಿಷತ್ ಶಾಸಕರಾದ ಡಾ.ಧನಂಜಯ ಸರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಸಿ.ಎಸ್. ಚಂದ್ರ ಭೂಪಾಲ, ಜಿಲ್ಲಾ ಬಂಜಾರ ಸಂಘದ ಉಪಾಧ್ಯಕ್ಷ ಆರ್.ಜಗದೀಶ್, ಕಾರ್ಯ ದರ್ಶಿ ಕೆ.ಆನಂದ್, ತಾಲ್ಲೂಕು ಬಂಜಾರ ಸಂಘ ಅಧ್ಯಕ್ಷ ಮಂಜುನಾಥ್ ನಾಯಕ್, ಸಿಂಡಿಕೇಟ್ ಸದಸ್ಯರಾದ ಸಾಕಮ್ಮ ಬಾಯಿ, ಮಾಜಿ ಪಾಲಿಕೆ ಸದಸ್ಯ ರಾದ ಆರ್.ಸಿ.ನಾಯ್ಕ, ಸಮಾಜದ ಮುಖಂಡರು, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಎಎಸ್ ಪಿ. ಕಾರ್ಯಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಹೆಚ್.ಉಮೇಶ್ ಪಾಲ್ಗೊಂಡಿದ್ದರು.

# ವೈಭವದ ಶ್ರೀಹಾಲಸ್ವಾಮಿಗಳ ರಥೋತ್ಸವ



**ಸಾಸ್ವೆಹಳ್ಳಿ:** ಹೊನ್ನಾಳಿ ತಾಲೂಕಿನ ರಾಂಪುರ ಗ್ರಾಮದ ಶ್ರೀಹಾಲಸ್ವಾಮಿಗಳ ರಥೋತ್ಸವ ಶನಿವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಸಡಗರ, ಸಂಭ್ರಮದಿಂದ ನಡೆಯಿತು.

ಶ್ರೀಹಾಲಸ್ವಾಮಿಗಳ ರಥೋತ್ಸವದ ಅಂಗವಾಗಿ ಶುಕ್ರವಾರ ರಾತ್ರಿ ವಿವಿಧ ಜಲತಂಡದ ಕಲಾವಿದರಿಂದ ಭಜನೆ, ಜಾನಪದ ಗೀತೆ, ಭಾವಗೀತೆ ಹಾಗೂ ಭಕ್ತಿ ಗೀತೆಗಳು ಸೇರಿದಂತೆ ಜಾನಪದ ಮೇಳಗಳೊಂದಿಗೆ ಅದ್ದೂರಿಯಾಗಿ ನಡೆಯಿತು.

ಮುಂಜಾನೆ ಶ್ರೀಹಾಲಸ್ವಾಮಿಗಳ ಭಾವಚಿತ್ರವನ್ನು ಪಲ್ಲಕ್ಕಿಯಲ್ಲಿಟ್ಟು ಗ್ರಾಮದ ಒಳಗಡೆ ಇರುವ ಹಾಲಸ್ವಾಮಿ ಕರ್ತೃಗದ್ದಿಗೆ ಪೂಜೆ ಸಲ್ಲಿಸಿ ಅನಂತರ ರಥೋತ್ಸವ ಸಮೀಪಿಸುತ್ತಿದ್ದಂತೆ ತಮಟೆಯವರು ಹಾಗೂ ವಾದ್ಯದವರು. ರಣಭಾಜ್ ಬಾರಿಸುತ್ತಿದ್ದಂತೆ ರಥೋತ್ಸವದಲ್ಲಿ ಭಾವಚಿತ್ರವನ್ನು ಆರೋಹಣ ಮಾಡಿದರು ಭಕ್ತರು, ಶ್ರೀಹಾಲಸ್ವಾಮೀಜಿ ಕಿ ಜೈ ಎನ್ನುವ ಭಕ್ತರ ಹರ್ಷೋದ್ಗಾರದ ನಡುವೆ ಭಕ್ತರು ರಥವನ್ನ ಎಳೆದು ಭಕ್ತಿ ಸಮರ್ಪಿಸಿದರು. ಜೊತೆಗೆ ಭಕ್ತರು ತೇರಿನ ಮೇಲೆ ಬಾಳೆಹಣ್ಣು, ತೇರಿನ ಗಾಳಿಗೆ ಕಾಯಿಗಳನ್ನು ಹೊಡೆದು ಭಕ್ತಿ ಸಮರ್ಪಿಸಿದರು. ಮಹಿಳೆಯರು ರಾಥೋತ್ಸವದ ಮೇಲೆ ಮಂಡಕ್ಕಿ ಮೆಣಸುಗಳನ್ನ ಎಸೆದು ಭಕ್ತಿ ಸಮರ್ಪಿಸಿದರು. ಶ್ರೀಹಾಲಸ್ವಾಮಿಗಳ ದೇವಸ್ಥಾನದ ಮುಂಭಾಗದಲ್ಲಿ ಶ್ರೀ ವಿಶ್ವೇಶ್ವರ ಶಿವಾಚಾರ್ಯ ಹಾಲು ಸ್ವಾಮೀಜಿಯವರ ಕರ್ತೃಗದ್ದಿಗೆ ನೋಡಿ ಕಣ್ತುಂಬಿಕೊಂಡರು. ರಥೋತ್ಸವದ ದಿನಬೆಳಗಿನ 5 ಗಂಟೆಗೆ ಸಾಮೂಹಿಕ ವಿವಾಹದಲ್ಲಿ ಐದು ಜೋಡಿಗಳು ಸತಿಪತಿಗಳಾಗಿ ವಿವಿಧ ಸ್ವಾಮೀಜಿಯವರಿಂದ ಆಶೀರ್ವಾದ ಪಡೆದರು.

### ಬಾಳೆಹಣ್ಣಿಗೆ ಮುಗಿಬಿದ್ದ ಭಕ್ತರು..

ತೆಂಗಿನಕಾಯಿಗಳ ದರ ಹೆಚ್ಚಾಗಿರುವುದರಿಂದ ರಥೋತ್ಸವದ ಗಾಲಿಗೆ ಹೊಡೆಯುವ ಕಾಯಿಗಳು ಹಾಗೂ ಪೂಜೆ ಮಾಡಲಿಕ್ಕೆ ಬೇಕಾಗಿರುವುದರಿಂದ ಶ್ರೀ ಹಾಲಸ್ವಾಮಿಗಳ ರಥೋತ್ಸವದ ಜಾತ್ರೆಯಲ್ಲಿ ಒಂದು ತೆಂಗಿನಕಾಯಿಗೆ 70 ರಿಂದ 80 ರೂ. ಬೆಲೆಯ ಭರಾಟೆಯಲ್ಲಿ ಭಕ್ತರು ತೆಂಗಿನಕಾಯಿ ಬದಲಿಗೆ ಬಾಳೆ ಹಣ್ಣು, ಕರ್ಪೂರ, ಊದು ಬತ್ತಿಗಳ ಮೊರೆ ಹೋಗಿದ್ದು ಕಂಡು ಬಂತು. ಇಲ್ಲಿನ ಭಕ್ತರು ಹೇಳುವಂತೆ, ವ್ಯಾಪಾರಸ್ಥರು ತೆಂಗಿನ ತೋಟಗಳನ್ನು ಎರಡ್ಮೂರು ವರ್ಷಗಳ ಅವಧಿಗೆ ಎಳೆ ನೀರು ಮಾರಾಟಕ್ಕೆ ಕರಾರು ಮಾಡಿಕೊಂಡ ಪರಿಣಾಮ ಮಾರುಕಟ್ಟೆಯಲ್ಲಿ ತೆಂಗಿನಕಾಯಿಗಳ ಸಂಖ್ಯೆ ಕಡಿಮೆಯಾಗಿದೆ. ಹೀಗಾಗಿ ತೆಂಗಿನಕಾಯಿ ದರಗಳು ಹೆಚ್ಚಾಗುತ್ತಿದೆ ಎನ್ನುತ್ತಾರೆ ಭಕ್ತರು.

## ಕಲ್ಲಿನ ಮೂರ್ತಿಯಲ್ಲೂ ದೈವ ಕಾಣುತ್ತೇವೆ

**ಸಾಸ್ವೆಹಳ್ಳಿ:** ವೈಚಾರಿಕತೆಯ ಹೆಸರಲ್ಲಿ ಪ್ರಶ್ನೆ ಮಾಡುವ ಮೊದಲು ನಂಬಿಕೆ, ಶ್ರದ್ಧೆ, ವಿಶ್ವಾಸ ದೊಡ್ಡದು. ನಂಬಿಕೆ ಇದ್ದರೆ ಕಲ್ಲಿನ ಮೂರ್ತಿಯಲ್ಲಿಯೂ ದೈವವನ್ನು ಕಾಣುತ್ತೇವೆ. ಆಧುನೀಕತೆ ಬೆಳದಂತೆ ನಂಬಿಕೆ, ವಿಶ್ವಾಸ ಕಳೆದುಕೊಳ್ಳುತ್ತಿದೆ. ಹಲವು ಧರ್ಮ ಸಭೆಗಳ ಮೂಲಕ ಜನರಲ್ಲಿ ನಂಬಿಕೆ ಹುಟ್ಟಿಹಾಕಿದವರು ಲಿಂಗೈಕ್ಯ ಶ್ರೀಗಳು. ಅವರ ಪ್ರಜ್ಞೆ ಹಲವು ಜನರ ಕಷ್ಟಗಳನ್ನು ದೂರ ಮಾಡಿದೆ ಎಂದು ಉಜ್ಜಯಿನಿ ಪೀಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿಗಳು ಅಭಿಪ್ರಾಯಪಟ್ಟರು.ಸಾಸ್ವೆಹಳ್ಳಿ ಸಮೀಪದ ರಾಂಪುರದಲ್ಲಿ ಲಿಂ.ವಿಶ್ವೇಶ್ವರ ಶಿವಾಚಾರ್ಯ ಹಾಲಸ್ವಾಮಿಗಳ ಶಿಲಾಮಂಟಪ,ಕತೃಗದ್ದುಗೆ, ಶಿಲಾ ಮೂರ್ತಿ ಸ್ಥಾಪನೆಯ ಧರ್ಮಸಭೆಯಲ್ಲಿ ಅವರು ಮಾತನಾಡಿದರು.ಭಗವಂತ ಕೊಟ್ಟ ಜೀವನವನ್ನು ಸಮಾಜ ಸೇವೆಗೆ ಮೀಸಲಿಟ್ಟಾಗ ಮಾತ್ರ ನಮ್ಮ ಜೀವನ ಸಾರ್ಥಕವಾಗುತ್ತದೆ. ಆ ಕಾರ್ಯವನ್ನು ರಾಂಪುರ ಬೃಹನ್ಮಠದ ಲಿಂಗೈಕ್ಯ ವಿಶ್ವೇಶ್ವರ ಶಿವಾಚಾರ್ಯ ಹಾಲಸ್ವಾಮೀಜಿಗಳು ಮಾಡಿ ಈ ಭಾಗದ ಜನರ ದೇವರಾಗಿದ್ದಾರೆ ಎಂದರು.ಕಾಶಿ ಪೀಠದ ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರು ಮಾತನಾಡಿ, ಯಜಮಾನನಿಲ್ಲದೆ ಮಠ ಸೊರಗುವುದು ಸಾಮಾನ್ಯ. ಆದರೆ ರಾಂಪುರ ಬೃಹನ್ಮಠದಲ್ಲಿ ಮಠದ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ತರ ಪಾತ್ರವನ್ನು ಶ್ರೀಗಳು ನಿರ್ವಹಿಸಿದ್ದಾರೆ. ಕಡಿಮೆ ಸಮಯದಲ್ಲಿ ಭಕ್ತರಿಂದ ಸಹಕಾರದಿಂದ ಶಿಲಾ ಮಂಟಪ ನಿರ್ಮಾಣ ಮಾಡಿರುವುದು ಸಾಧನೆಯೇ ಸರಿ ಎಂದರು.ಹೊನ್ನಾಳಿ ಹಿರೇಕಲ್ಮಠದ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಮಾತನಾಡಿ, ಗುರುಸೇವೆಯಿಂದ ಎಲ್ಲಾ ಫಲಗಳು ಸಿಗುತ್ತವೆ. ಗುರುವನ್ನು ಕೆಣಕಬಾರದು. ಗುರುವಿನ ಮೇಲೆ ನಂಬಿಕೆ ಇಟ್ಟರೆ ಒಳ್ಳೆಯದಾಗುತ್ತದೆ ಎಂದರು.ಚನ್ನಗಿರಿ ವಿರಕ್ತಮಠದ ಬಸವ ಜಯಚಂದ್ರ ಸ್ವಾಮಿಗಳು ಮಾತನಾಡಿ, ರಾಂಪುರ ಬೃಹನ್ಮಠವು ಎಂದಿಗೂ ಆಳುವವರನ್ನು ಓಲೈಸಿಲ್ಲ. ಅಳುವವರ ನೋವು ಹಾಗೂ ಕಣ್ಣೀರನ್ನು ಒರೆಸಿದ ಮಠ ಇದಾಗಿದೆ. ಶ್ರೀ ಮಠಕ್ಕೆ ಕಾಶಿ ಶ್ರೀಗಳು ಪೀಠಾಧ್ಯಕ್ಷರನ್ನು ಆಯ್ಕೆ ಮಾಡಿ ಮಠದ ಗುರು ಪರಂಪರೆ ಮುಂದುವರೆಸಬೇಕು ಎಂದರು.ಮಠದ ಉಸ್ತುವಾರಿ ಶಿವಕುಮಾರ ಹಾಲಸ್ವಾಮಿಗಳು ಮಾತನಾಡಿ, ಶಿಲಾ ಮಂಟವು ಭಕ್ತರಿಂದ ನಿರ್ಮಾಣ ವಾಗಿದೆಯೇ ಹೊರತು ಸರ್ಕಾರದ ಯಾವುದೇ ಅನುದಾನಗಳಿಂದ ಅಲ್ಲ. ಭಕ್ತರೇ ತಮ್ಮ ಶ್ರೀಗಳನ್ನು ಮಠದಲ್ಲಿ ನೆಲೆಗೊಳಿಸಿದ್ದಾರೆ ಎಂದರು.ಶಿಕಾರಿಪುರದ ಕಡೇನಂದಿಹಳ್ಳಿ ಮಠದ ರೇವಣಸಿದ್ಧ ಶಿವಾಚಾರ್ಯರು ಪ್ರಾಸ್ತವಿಕವಾಗಿ, ಜಿಲ್ಲಾ ಪಂಚಾಯಿತಿಯ ಮಾಜಿ ಅಧ್ಯಕ್ಷೆ ಶೀಲಾ ಗದ್ದಿಗೇಶ್, ಮಾಜಿ ಸದಸ್ಯ ಎ.ಆರ್ ಚಂದ್ರಶೇಖರ್ ಮಾತನಾಡಿದರು. ತೀರ್ಥಹಳ್ಳಿಯ ಕೋಣಂದೂರು ಮಠದ ಶ್ರೀಪತಿ ಪಂಡಿತಾರಾಧ್ಯ ಶಿವಾಚಾರ್ಯರು, ವಿಜಯನಗರ ಜಿಲ್ಲೆಯ ಬುಕ್ಕಸಾಗರ ಮಠದ ಕರಿಸಿದ್ದೇಶ್ವರ ವಿಶ್ವಾರಾಧ್ಯ ಶಿವಾಚಾರ್ಯ,ಚನ್ನಗಿರಿ ಹಿರೇಮಠದ ಕೇದಾರಲಿಂಗ ಶಿವಾಚಾರ್ಯ ಸ್ವಾಮಿಗಳು ಬೃಹನ್ಮಠದ ಶಾಖ ಮಠದ 20ಕ್ಕೂ ಹೆಚ್ಚು ಹಾಲಸ್ವಾಮೀಜಿ ಮಠಾಧೀಶರು, ಗ್ರಾಮ ಪಂಚಾಯಿತಿ ಅಧ್ಯಕ್ಷ ಶ್ರೀನಿವಾಸ್, ಸುತ್ತಮುತ್ತಲ ಗ್ರಾಮದ ಮುಖಂಡರು ಇದ್ದರು.



# ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಜಿ.ಪಂ ಸಿಇಒ ದಿಢೀರ್ ಭೇಟಿ, ಪರಿಶೀಲನೆ



**ಚಿತ್ರದುರ್ಗ** : ಚಿತ್ರದುರ್ಗ ನಗರದ ಹೃದಯ ಭಾಗದಲ್ಲಿರುವ ನಗರ ಕೇಂದ್ರ ಗ್ರಂಥಾಲಯಕ್ಕೆ ಹಾಗೂ ನಗರದ ವಿವಿಧ ವಿದ್ಯಾರ್ಥಿ ನಿಲಯಗಳಿಗೆ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಗ್ರಂಥಾಲಯದಲ್ಲಿನ ವಾಚನಾಲಯ, ನಿಯತಕಾಲಿಕೆಗಳ ಕೊಠಡಿ ಸೇರಿದಂತೆ ವಿವಿಧೆಡೆ ಭೇಟಿ ನೀಡಿ, ಓದುಗರು ಹಾಗೂ ಸ್ಪರ್ಧಾಕಾಂಕ್ಷಿಗಳೊಂದಿಗೆ ಮುಕ್ತವಾಗಿ ಮಾತನಾಡಿ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಸ್ಪರ್ಧಾಕಾಂಕ್ಷಿಗಳು ಹಾಗೂ ವಿದ್ಯಾರ್ಥಿಗಳು ಈ ಗ್ರಂಥಾಲಯ ಉಪಯೋಗಿಸಿಕೊಂಡು ಉತ್ತಮ ಅಂಕ ಪಡೆಯುವುದರ ಜೊತೆಗೆ, ಉನ್ನತ ಹುದ್ದೆ ಅಲಂಕರಿಸುವಂತಾಗಬೇಕು ಎಂದು ತಿಳಿಸಿ, ತಮ್ಮ ವಿದ್ಯಾರ್ಥಿ ಜೀವನದ ಅನುಭವ ಹಂಚಿಕೊಂಡರು.

ಕೆಎಂಇಆರ್‌ಸಿ ಅಡಿಯಲ್ಲಿ ಜಿಲ್ಲಾ ಮತ್ತು ನಗರ ಗ್ರಂಥಾಲಯಗಳಿಗೆ ಅನುದಾನ ಬಿಡುಗಡೆಯಾಗಿದ್ದು, ಈ ಅನುದಾನದಲ್ಲಿ ಅತೀ ಶೀಘ್ರದಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದು ನಗರ ಕೇಂದ್ರ ಮುಖ್ಯ ಗ್ರಂಥಾಧಿಕಾರಿ ಕೊಳ್ಳಿ ಬಸವರಾಜ್ ಮಾಹಿತಿ ನೀಡಿದರು.

ಗ್ರಂಥಾಲಯದ ಅವರಣದೊಳಗೆ ಕಾಮಗಾರಿಗಳ ಅನುಷ್ಠಾನ ಮಾಡುವ ಸ್ಥಳ ಪರಿಶೀಲಿಸಿದ ಜಿಲ್ಲಾ ಪಂಚಾಯಿತಿ ಸಿಇಒ ಅವರು, ಬಿಡುಗಡೆಗೊಂಡಿರುವ ಅನುದಾನವನ್ನು ಕೆಎಂಇಆರ್‌ಸಿ ನಿಯಮಾನುಸಾರ ಖರ್ಚು ಮಾಡಿ, ಕಾಮಗಾರಿಗಳ ಗುಣಮಟ್ಟ ಕಾಪಾಡಿಕೊಳ್ಳಬೇಕು ಮತ್ತು ಸಾರ್ವಜನಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಗ್ರಂಥಾಲಯಗಳನ್ನು ನಿರ್ಮಾಣ ಮಾಡಬೇಕೆಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯ ಅಧಿಕಾರಿಗೆ ಸೂಚಿಸಿದರು. ನಂತರ ಶೌಚಾಲಯಕ್ಕೆ ಭೇಟಿ ನೀಡಿ, ವಿಶೇಷ ಚೇತನರು ಶೌಚಾಲಯ ಬಳಸಲು ಮತ್ತು ಹೋಗಿ ಬರಲು ಜಾಗವನ್ನು ಮಾಡಿಕೊಡಿ ಎಂದು ಸಲಹೆ ನೀಡಿದರು. ಅದೇ ರೀತಿಯಾಗಿ ಬ್ರೈಲ್ ಪುಸ್ತಕಗಳು ಮತ್ತು ಉಪಕರಣಗಳಗಳ ಬಗ್ಗೆ ಮಾಹಿತಿ ಪಡೆದರು.

**ವಿದ್ಯಾರ್ಥಿ ನಿಲಯ ಪರಿಶೀಲನೆ:** ಚಿತ್ರದುರ್ಗ ನಗರದ ಮೆದೇಹಳ್ಳಿ, ತಮಟಕಲ್ಲು ರಸ್ತೆಯಲ್ಲಿರುವ ಡಿ. ದೇವರಾಜು ಅರಸು ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಜಿ.ಪಂ ಸಿಇಒ ಭೇಟಿ ನೀಡಿ ಪರಿಶೀಲಿಸಿದರು.

ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ನಿಲಯ ಪಾಲಕರೊಂದಿಗೆ ಕುಂದು ಕೊರತೆ ಆಲಿಸಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಈ ವಿದ್ಯಾರ್ಥಿ ನಿಲಯಕ್ಕೆ ಉತ್ತಮವಾದ ಗ್ರಂಥಾಲಯಬೇಕೆಂದು ಮನವಿ ಮಾಡಿಕೊಂಡರು. ಅಲ್ಲೇ ವಿದ್ಯಾರ್ಥಿಗಳೊಂದಿಗೆ ಮಧ್ಯಾಹ್ನದ ಭೋಜನ ಸವಿದರು.

# ಫಲಿತಾಂಶ ಹೆಚ್ಚಳಕ್ಕೆ ಶ್ರಮಿಸಿ : ಪುಟ್ಟಸ್ವಾಮಿ



**ಚಿತ್ರದುರ್ಗ**: ಜಿಲ್ಲೆಯಲ್ಲಿ ಈ ಬಾರಿಯ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶಕ್ಕೆ ಹೆಚ್ಚಳಕ್ಕೆ ಶ್ರಮಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಪುಟ್ಟಸ್ವಾಮಿ ಹೇಳಿದರು.

ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜ್ ಆವರಣದಲ್ಲಿ ಈಚೆಗೆ ಆಯೋಜಿಸಿದ್ದ ಶೈಕ್ಷಣಿಕ ಚಟುವಟಿಕೆಗಳ ಸಮಾರೋಪ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿ ಫಲಿತಾಂಶ ಬಹಳ ಕಡಿಮೆ ಇದ್ದು, ಈ ಬಾರಿಯ ಫಲಿತಾಂಶ ಉನ್ನತಕ್ಕೆ ಕೊಂಡೊಯ್ಯುವ ಹೊಣೆಗಾರಿಕೆ ಇಲಾಖೆ ನಮ್ಮೆಲ್ಲರಿಗೂ ವಹಿಸಿದೆ. ಇದಕ್ಕೆ ಮುಖ್ಯವಾಗಿ ವಿದ್ಯಾರ್ಥಿಗಳ ಸಹಕಾರ ಬೇಕು. ಇಲ್ಲದಿದ್ದರೇ ಏಕಮುಖ ಶ್ರಮ, ಬದ್ಧತೆ ಉಪಯೋಗ ಆಗುವುದಿಲ್ಲ ಎಂದರು.

ಫಲಿತಾಂಶ ಹೆಚ್ಚಳಕ್ಕೆ ಹಿಂದುಳಿದ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಜತೆಗೆ ಗುಂಪು ಓದು, ಚರ್ಚೆ ಮೂಲಕ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಸನ್ನದ್ಧರನ್ನಾಗಿಸಲಾಗುತ್ತಿದೆ. ಇಲಾಖೆ ನೀಡಿದ ಗುರಿ ಮುಟ್ಟುವ ಹೊಣೆಗಾರಿಕೆ ಗುರುಗಳೇ ಮೇಲಿದ್ದರೇ, ಭವಿಷ್ಯ ರೂಪಿಸಿಕೊಳ್ಳುವ ಗುರಿ ನಿಮ್ಮಲ್ಲಿರಬೇಕು ಎಂದು ಹೇಳಿದರು.

ಭವಿಷ್ಯ ರೂಪಿಸಿಕೊಳ್ಳಲು, ಸಾಧನೆ ಗುರಿ ಮುಟ್ಟಲು ಛಲದೊಂದಿಗೆ ನಿರಂತರ ಅಧ್ಯಯನ, ಓದು, ಬರವಣಿಗೆ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು. ವಿದ್ಯಾರ್ಥಿ ಜೀವನದಲ್ಲಿ ಮಾತ್ರ ಕಲಿಕೆ ಎಂಬ ಮನೋಭಾವ ಕೈಬಿಡಬೇಕು. ಕಲಿಕೆ ನಿರಂತರವಾಗಿರಬೇಕು. ಸದಾ ವಿದ್ಯಾರ್ಥಿ ಆಗಿರಬೇಕು. ಆಗ ಮಾತ್ರ ಜೀವನದಲ್ಲಿ ವಿಶೇಷ ಸಾಧನೆ ಮಾಡಲು ಸಾಧ್ಯ ಎಂದರು.

ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಎಚ್.ಬಿ.ನರಸಿಂಹಮೂರ್ತಿ ಮಾತನಾಡಿ, ಸರ್ಕಾರಿ ಶಾಲೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಬಹಳ ಪ್ರಾಮಾಣಿಕವಾಗಿ ಓದಿ ಇಲ್ಲಿಗೆ ಬಂದಿರುತ್ತಾರೆ. ಜತೆಗೆ ಇಲ್ಲಿ ಶಿಕ್ಷಕರು ಕೂಡ ಹೆಚ್ಚು ಅಂಕ ಗಳಿಸಿ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಉದ್ಯೋಗಕ್ಕೆ ಸೇರ್ಪಡೆ ಆಗಿರುತ್ತಾರೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ಓದಿದವರೇ ಸರ್ಕಾರಿ ಸೇರಿ ವಿವಿಧ ಸಂಸ್ಥೆಗಳು, ಕ್ಷೇತ್ರಗಳ ಉನ್ನತ ಹುದ್ದೆಗಳಲ್ಲಿ ಇದ್ದಾರೆ. ಆದರೂ ಸರ್ಕಾರಿ ಶಾಲೆ ಎಂದಾಕ್ಷಣ ಮೂಗು ಮುರಿಯುವ ಜನರೇ ಹೆಚ್ಚು. ಈ ಮನಸ್ಥಿತಿಯಿಂದ ಜನ ಹೊರಬರಬೇಕು ಎಂದು ಹೇಳಿದರು.

ಹಿರಿಯ ಉಪನ್ಯಾಸಕ ಪ್ರೊ.ಬಿ.ಕೃಷ್ಣಪ್ಪ ಮಾತನಾಡಿ, ಒಂದೇ ಕಟ್ಟಡದಲ್ಲಿ ಕಾಲೇಜ್ ಮತ್ತು ಪ್ರೌಢಶಾಲೆ ಇದೆ. ನಾವೆಲ್ಲರೂ ಸಹೋದರರ ರೀತಿ ಇದ್ದೇವೆ. ಇಲ್ಲಿ ಕೊಠಡಿಗಳ ಸಮಸ್ಯೆ ಇತ್ತು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ತಮ್ಮ ಅನುದಾನದಲ್ಲಿ ಕೊಠಡಿಗಳ ನಿರ್ಮಾಣಕ್ಕೆ ಚಾಲನೆ ನೀಡಿದ್ದಾರೆ. ಶೀಘ್ರ ಕಾಮಗಾರಿ ಪೂರ್ಣಗೊಂಡು ಸಮಸ್ಯೆಗೆ ಪರಿಹಾರ ದೊರೆಯಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಾಹಿತಿ ಪ್ರೊ. ಎಂ.ಜಿ.ರಂಗಸ್ವಾಮಿ, ಎನ್.ನರಸಿಂಹ ಮೂರ್ತಿ, ಪುಟ್ಟಮಕ್ಕ, ಸಂತೋಷ್, ದೊಡ್ಡಯ್ಯ, ಬಿ.ಎಂ.ಗುರುನಾಥ್, ಚನ್ನಬಸಪ್ಪ, ಡಾ.ಹೇಮಂತರಾಜ್, ಈ.ಮಹೇಶಬಾಬು ಇತರರಿದ್ದರು.

# ‘ಮೀನುಗಳ ಸಾಮೂಹಿಕ ಸಾವು, ಕೊಳಕು ಗಾಳಿ, ದುರ್ವಾಸನೆ’: ಚಿಕ್ಕನಾಗಮಂಗಲ ತ್ಯಾಜ್ಯ ವಿಲೇವಾರಿ ಘಟಕ ಮುಚ್ಚುವಂತೆ ಜನರ ಒತ್ತಾಯ

**ಬೆಂಗಳೂರು:** ಚಿಕ್ಕನಾಗಮಂಗಲದಲ್ಲಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಪುರಸಭೆಯ ಘನತ್ಯಾಜ್ಯ ಸಂಸ್ಕರಣಾ ಘಟಕವನ್ನು ತಕ್ಷಣ ಮುಚ್ಚಬೇಕೆಂದು ಒತ್ತಾಯಿಸಿ ಎಲೆಕ್ಟ್ರಾನಿಕ್ ಸಿಟಿಯ ಸಾವಿರಾರು ನಿವಾಸಿಗಳು ಪ್ರತಿಭಟನೆ ನಡೆಸಿದರು.

2019 ಮತ್ತು 2022 ರಲ್ಲಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ (ಎನ್‌ಜಿಟಿ) ಆದೇಶಗಳ ಅಡಿಯಲ್ಲಿ ರಚಿಸಲಾದ ಜಂಟಿ ಸಮಿತಿಗಳ ಪರಿಶೀಲನಾ ವರದಿಗಳಿಂದ ಆತಂಕಕಾರಿ ಸಂಶೋಧನೆಗಳಿಗೆ ಪ್ರತಿಕ್ರಿಯೆಯಾಗಿ ಈ ಪ್ರತಿಭಟನೆ ನಡೆದಿದೆ. ಈ ವರದಿಗಳು ಸ್ಥಾವರದಲ್ಲಿ ತೀವ್ರ ಕಾರ್ಯಾಚರಣೆಯ ವೈಫಲ್ಯಗಳನ್ನು ಬಹಿರಂಗಪಡಿಸಿದ್ದು, ಜೊತೆಗೆ 4 ಕಿ.ಮೀ ವ್ಯಾಪ್ತಿಯವರೆಗೆ ಬಲವಾದ, ಕೊಳಕು ವಾಸನೆ ಹರಡಿದೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.

ನಿವಾಸಿಗಳ ಕಲ್ಯಾಣ ಸಂಘ ‘ಎಲೆಕ್ಟ್ರಾನಿಕ್ಸ್ ಸಿಟಿ ರೈಸಿಂಗ್’ನ ಅಧ್ಯಕ್ಷ ಪ್ರಣಯ್ ದುಬೆ ಈ ಕುರಿತು ಮಾತನಾಡಿ, ಘಟಕದಿಂದ ಬರುವ ತ್ಯಾಜ್ಯ ನೀರು ಹತ್ತಿರದ ಜಲಮೂಲಗಳನ್ನು ಕಲುಷಿತಗೊಳಿಸುತ್ತಿದೆ. ಇದು ಪರಿಸರಕ್ಕೆ ಅಪಾಯ ಉಂಟುಮಾಡುತ್ತಿದೆ. ನೀರಿಗೆ ಲೀಚೇಟ್ ಪ್ರವೇಶಿಸುವುದರಿಂದ ಮತ್ತು ವಾಯು



ಮಾಲಿನ್ಯದಿಂದಾಗಿ, ಚಿಕ್ಕನಾಗಮಂಗಲ ಕೆರೆಗಳಲ್ಲಿ ಸಾಮೂಹಿಕ ಮೀನುಗಳ ಸಾವು ಸಂಭವಿಸುವುದನ್ನು ನಾವು ನೋಡಿದ್ದೇವೆ. “ಲೀಚೇಟ್ ಸೋರಿಕೆ, ವಾಸನೆ ಮತ್ತು ಮಾಲಿನ್ಯವನ್ನು ನಿಯಂತ್ರಿಸಲು ಓಉಖಿ ದಂಡ ವಿಧಿಸಿದ್ದರೂ ಮತ್ತು ಹೈಕೋರ್ಟ್ ನಿರ್ದೇಶನಗಳನ್ನು ನೀಡಿದ್ದರೂ, ಈ ಸಮಸ್ಯೆ ಬಗೆಹರಿಯದೆ ಉಳಿದಿದೆ” ಎಂದು ಹೇಳಿದರು. ಕೋನಪ್ಪನ ಅಗ್ರಹಾರ ಪಟ್ಟಣ ಪುರಸಭೆಯ ಮಾಜಿ ಸದಸ್ಯೆ ರಾಜೇಶ್ ರೆಡ್ಡಿ ಮಾತನಾಡಿ, “ಲೀಚೇಟ್ ಸೋರಿಕೆಯಿಂದಾಗಿ ಕಲುಷಿತಗೊಂಡ ಕೊಳದ ನೀರನ್ನು ಜಾನುವಾರುಗಳು ಸೇವಿಸುತ್ತವೆ. ಗಾಳಿ ಕಲುಷಿತಗೊಂಡಿದೆ, ಅಂತರ್ಜಲ ಕಲುಷಿತವಾಗಿದೆ ಮತ್ತು ಸರೋವರಗಳು ಮತ್ತು ಕೊಳಗಳು ವಿಷಕಾರಿಯಾಗಿವೆ. ತೀವ್ರ ಸೊಳ್ಳೆ ಕಾಟವೂ ಇದೆ. ಇವೆಲ್ಲವೂ ಬಿಬಿಎಂಪಿ ಈ ತ್ಯಾಜ್ಯ ಸಂಸ್ಕರಣಾ ಘಟಕವನ್ನು ನಿರ್ವಹಿಸುವಲ್ಲಿ ವಿಫಲವಾದ ಕಾರಣದಿಂದಾಗಿದೆ” ಎಂದು ಹೇಳಿದರು.

ಪ್ರತಿಭಟನೆಯ ನಂತರ, ವಲಯ ಜಂಟಿ ಆಯುಕ್ತೆ ಮಧು ಸ್ಥಳಕ್ಕೆ ಭೇಟಿ ನೀಡಿ, ಒಂದು ವಾರದೊಳಗೆ ಮುಖ್ಯ ಆಯುಕ್ತರು ಮತ್ತು ಇತರ ಅಧಿಕಾರಿಗಳಿಗೆ ಈ ವಿಷಯವನ್ನು ತಿಳಿಸುವುದಾಗಿ ನಿವಾಸಿಗಳಿಗೆ ಭರವಸೆ ನೀಡಿದರು.

# ಧಾರ್ಮಿಕ ಆಚರಣೆಗಳಲ್ಲಿ ರಾಜಕೀಯ ಬೆರೆಸುವುದರಿಂದ ಹಿಂದೂ ಆಗುವುದಿಲ್ಲ: ಪ್ರಕಾಶ್ ರಾಜ್



**ಮಂಗಳೂರು:** ಧಾರ್ಮಿಕ ಆಚರಣೆಯೊಂದಿಗೆ ರಾಜಕೀಯ ಬೆರೆಸುವುದರಿಂದ ನಿಜವಾದ ಹಿಂದೂ ಆಗುವುದಿಲ್ಲ ಎಂದು ನಟ ಪ್ರಕಾಶ್ ರಾಜ್ ಹೇಳಿದ್ದಾರೆ. ಮಂಗಳೂರಿಗೆ ಭೇಟಿ ನೀಡಿದ್ದ ವೇಳೆ ಅವರು, ಮಹಾ ಕುಂಭಮೇಳದಲ್ಲಿ ಸ್ನಾನ ಮಾಡುವ ತಮ್ಮ ಎಐನಿಂದ ರೂಪುಗೊಂಡ ಚಿತ್ರದ ಕುರಿತು ಮಾಧ್ಯಮದ ಪ್ರಶ್ನೆಗೆ ಉತ್ತರಿಸುತ್ತಿದ್ದರು.

ನನಗೆ ಧರ್ಮದಲ್ಲಿ ನಂಬಿಕೆ ಇಲ್ಲ. ಧಾರ್ಮಿಕ ವಿಷಯಗಳಲ್ಲಿಯೂ ರಾಜಕೀಯ ಬೆರೆಸುವುದರಿಂದ ನಿಜವಾದ ಹಿಂದೂಗಳಾಗುವುದಿಲ್ಲ. ಂಖ-ರಚಿತ ನನ್ನ ಚಿತ್ರವನ್ನು ಬಳಸಿಕೊಂಡು ನನ್ನನ್ನು ಸೋಷಿಯಲ್ ಮೀಡಿಯಾದಲ್ಲಿ ಟ್ರೋಲ್ ಮಾಡಿದರು. ಒಬ್ಬ ವ್ಯಕ್ತಿ ಸರ್ಕಾರ ಅಥವಾ ವ್ಯಕ್ತಿಯನ್ನು ಟೀಕಿಸುತ್ತಾನೆ ಎಂಬ ಕಾರಣಕ್ಕಾಗಿ ವಾಟ್ಸಾಪ್ ವಿಶ್ವವಿದ್ಯಾಲಯಗಳಲ್ಲಿ ಸುಳ್ಳು ಅಥವಾ ತಪ್ಪು ಮಾಹಿತಿಯನ್ನು ಹರಡುವುದನ್ನು ಪ್ರಶಾಂತ್ ಸಂಬರ್ಗಿಯಂತಹ ಜನರು ಮಾಡುತ್ತಿದ್ದಾರೆ. ನಾನು ಸಂಬರ್ಗಿ ವಿರುದ್ಧ ಪ್ರಕರಣ ದಾಖಲಿಸಿದ್ದೇನೆ. ಂಖ ಒಂದು ಅದ್ಭುತ ತಂತ್ರಜ್ಞಾನ, ಆದರೆ ಅದನ್ನು ವ್ಯಕ್ತಿಯ ಇಮೇಜ್ ನ್ನು ಹಾಳು ಮಾಡಲು ಬಳಸುವುದು ಅಪರಾಧ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವ ಭರದಲ್ಲಿ ರಾಜ್ಯ ಸರ್ಕಾರದ ಬಳಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲದಿರುವ ಬಗ್ಗೆ ಮತ್ತೊಂದು ಪ್ರಶ್ನೆ ಕೇಳಿದಾಗ ಅವರು, ಚುನಾವಣಾ ಪ್ರಕ್ರಿಯೆಯಲ್ಲಿ ಅಥವಾ ರಾಜಕೀಯದಲ್ಲಿ, ವಿರೋಧ ಪಕ್ಷ ಗೆಲ್ಲುವುದಿಲ್ಲ, ಆದರೆ ಆಡಳಿತ ಪಕ್ಷ ಸೋಲುತ್ತದೆ. ಕಾಂಗ್ರೆಸ್ ಈಗ ಅಧಿಕಾರಕ್ಕೆ ಬಂದಿದ್ದರೆ, ಮುಂದೆ ಸೋಲುವುದು ಅವರೇ. ಅವರು ಹೇಗೆ ಆಡಳಿತ ನಡೆಸುತ್ತಿದ್ದಾರೆ ಎಂಬುದು ಇಲ್ಲಿ ಮುಖ್ಯವಾಗುತ್ತದೆ. ಸರ್ಕಾರ ನಷ್ಟದಲ್ಲಿದ್ದರೆ, ನಾವು ಜನರು ಅದನ್ನು ಪ್ರಶ್ನಿಸಬೇಕಾಗಿದೆ ಎಂದರು.

ನೀವು ಎಲ್ಲಿ ವಿಫಲರಾಗುತ್ತಿದ್ದೀರಿ? ಒಂದು ಸರ್ಕಾರ ಅಥವಾ ರಾಷ್ಟ್ರವು ನಾಗರಿಕರ ಹಣದಿಂದ ನಡೆಯುತ್ತದೆ. ಕೆಲವು ದಿನಗಳ ಹಿಂದೆ, ಸುಪ್ರೀಂ ಕೋರ್ಟ್ ‘ಉಚಿತ ಕೊಡುಗೆಗಳು ಕೆಲಸ ಮಾಡಲು ಇಚ್ಛಿಸದ ಜನರ ವರ್ಗವನ್ನು ಸೃಷ್ಟಿಸುತ್ತಿವೆಯೇ’ ಎಂದು ಕೇಳಿತು. ಹಾಗಿದ್ದಲ್ಲಿ, ಕಾರ್ಪೊರೇಟ್ ಸಾಲಗಳನ್ನು ಮನ್ನಾ ಮಾಡುವುದರಿಂದಲೂ ಅವರು ಪರಾವಲಂಬಿಗಳಾಗಿದ್ದಾರೆಯೇ? ಯಾವ ಪಕ್ಷವು ರಾಜ್ಯವನ್ನು ಆಳುತ್ತದೆ ಎಂದು ನೋಡುವ ಬದಲು, ತೆರಿಗೆದಾರರ ಹಣವನ್ನು ಸರ್ಕಾರಗಳು ಹೇಗೆ ಬಳಸಿಕೊಳ್ಳುತ್ತವೆ ಎಂಬುದನ್ನು ನಾವು ಪ್ರಶ್ನಿಸಬೇಕು ಎಂದು ನಟ ಪ್ರಕಾಶ್ ರಾಜ್ ತಮ್ಮ ಅಭಿಪ್ರಾಯ ಹೇಳಿದರು.

# ವಾಸ್ತವದಲ್ಲಿ ಒಳಮೀಸಲಾತಿ ಕೊಡಬೇಕೇ, ಬೇಡವೇ ಎಂಬ ಚರ್ಚೆಯೇ ಅಪ್ರಸ್ತುತ : ಬಿ.ಪಿ.ತಿಪ್ಪೇಸ್ವಾಮಿ



**ಚಿತ್ರದುರ್ಗ** : ವಾಸ್ತವದಲ್ಲಿ ಒಳಮೀಸಲಾತಿ ಕೊಡಬೇಕೇ, ಬೇಡವೇ ಎಂಬ ಚರ್ಚೆಯೇ ಅಪ್ರಸ್ತುತ ಎಂದು ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಬಿ.ಪಿ.ತಿಪ್ಪೇಸ್ವಾಮಿ ಹೇಳಿದರು.

ಚಿತ್ರದುರ್ಗ ನಗರದ ಕೋಟೆ ನಾಡು ಬುದ್ಧ ವಿಹಾರದಲ್ಲಿ ಭಾನುವಾರ ಡಾ.ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಹಾಗೂ ದಲಿತ ಸಂಘರ್ಷ ಸಮಿತಿ ನೇತೃತ್ವದಲ್ಲಿ ಜಸ್ಟೀಸ್ ನಾಗಮೋಹನ್ ದಾಸ್ ಆಯೋಗದ ಮುಂದಿರುವ ಸವಾಲುಗಳು ಮತ್ತು ಸಾಧ್ಯತೆಗಳು ಎಂಬ ಚರ್ಚಾ ವಿಷಯ ಕುರಿತು ಮಾತನಾಡಿದರು.

ಜಸ್ಟೀಸ್ ನಾಗಮೋಹನ್ ದಾಸ್ ಅವರೇ ಹಸಿದವರು ಕಾಯುವುದಕ್ಕೆ ಆಗುವುದಿಲ್ಲ, ಊಟ ಮಾಡುವವರು ಕಾಯುತ್ತಾರೆ. ಈ ಸತ್ಯವನ್ನು ನಾವು ಅರ್ಥಮಾಡಿ ಕೊಳ್ಳಬೇಕಾಗಿದೆ ಎಂದು ಹೇಳಿದ್ದು, ನಮ್ಮ ಆಯೋಗ ಈಗಾಗಲೇ ಕಾರ್ಯಪ್ರವೃತ್ತ ಆಗಿದೆ ಎಂದು ಹೇಳಿದ್ದಾರೆ.

ಎಲ್ಲಿಯವರೆಗೆ ಜಾತಿ ಅಸಮಾನತೆ ಇರುತ್ತದೆ-ಯೋ ಅಲ್ಲಿಯವರೆಗೆ ಮೀಸಲಾತಿ ಇರಬೇಕು. ಎಲ್ಲಿಯವರೆಗೆ ಮೀಸಲಾತಿ ಇರುತ್ತೋ ಅಲ್ಲಿಯವರೆಗೆ ಒಳ ಮೀಸಲಾತಿ ಇರಬೇಕು. ಎಂಬ ಸತ್ಯವನ್ನು ಅರಿತಿರುವ ಆಯೋಗವು ಒಳಮೀಸಲಾತಿ ಹಂಚಿಕೆ ಮಾಡುವ ಮೂಲಕ ಪರಿಶಿಷ್ಟ ಜಾತಿಗಳಲ್ಲಿನ ಸಂಘರ್ಷ ತಪ್ಪಿಸಲು ಬದ್ದವಾಗಿರುವುದು ಖಚಿತಪಡಿಸಿದೆ.

ಕೆಲವು ಕಡೆ ಎಕೆ-ಎಡಿ ಹಾಗೂ ಎಡಿ-ಎಕೆಗಳಾಗಿದ್ದಾರೆ. ಇದನ್ನು ಸರಿಪಡಿಸುವುದು ತುಂಬಾ ಕಷ್ಟವೆಂದೂ ಕೆಲವರು ಅಡ್ಡಗಾಲು ಹಾಕುತ್ತಿದ್ದಾರೆ. ಇಂದಿನ ವೈಜ್ಞಾನಿಕ ಯುಗದಲ್ಲಿ ನಿಗದಿತ ಅವಧಿಯೊಳಗೆ ಮಾದಿಗ ಸಮಾಜದ ಜಾತಿಗಳು ಒಂದು ಕಡೆ, ಛಲವಾದಿ ಜಾತಿಗಳು ಒಂದು ಕಡೆಯೆಂದು ನಮೂದಿಸುವಂತೆ ಸರಕಾರವು ಇಲಾಖೆ ಮೂಲಕ ಅಧಿಸೂಚನೆ ನೀಡಿದರೆ ಕೆಲವೇ ದಿನಗಳಲ್ಲಿ ಈ ಸಮಸ್ಯೆ ಬಗೆಹರಿಯುತ್ತದೆ.

ಮಾದಿಗ ಸಂಬಂಧಿತ 29ಜಾತಿಗಳಲ್ಲಿ ಸ್ತ್ರೀಮತಸ್ಥ ಗುಂಪುಗಳಾದ ಡೋಹರ, ಮೋಚಿ, ಸಮಗಾರ, ಹರಳಯ್ಯ, ದಕ್ಕಲಿಗ ಜಾತಿಗಳು ಪ್ರತ್ಯೇಕ ಮೀಸಲಾತಿಗಾಗಿ ಈ ಹಿಂದೆ ಆಯೋಗಕ್ಕೆ ಮನವಿ ಸಲ್ಲಿಸಿದ್ದವು. ಇದೇ ತಿಂಗಳು ಫೆ.13ರಂದು ಬೆಂಗಳೂರಿನ ಅಂಬೇಡ್ಕರ್ ಭವನದಲ್ಲಿ ನಡೆದ ಮಾದಿಗ ಸಂಬಂಧಿತ ಜಾತಿಗಳ ಸಮವರ್ಧನ ಸಭೆಯಲ್ಲಿ ಈ ಎಲ್ಲಾ ಜಾತಿಗಳು ಮಾದಿಗ ಜಾತಿಯು ಹಿರಿಯಣ್ಣನಂತೆ ಇದ್ದು, ನಾವೆಲ್ಲಾರು ಚರ್ಮಕಾರರಾಗಿದ್ದು, ಮಾದಿಗರ ಗುಂಪಿನಲ್ಲಿಯೇ ಮುಂದುವರೆಯುವುದಾಗಿ ಜಸ್ಟೀಸ್ ನಾಗ್ ಮೋಹನ್ ದಾಸ್ ಅವರಿಗೆ ಅಖಂಡ ಸಭೆಯಲ್ಲಿ ಮನವಿ ಸಲ್ಲಿಸಿ, ಒಗ್ಗಟ್ಟು ಪ್ರದರ್ಶಿಸಿದ್ದು, ಮಾದಿಗರಲ್ಲಿನ ಆಂತರಿಕ ಸಂಘರ್ಷ ಕೊನೆಗೊಂಡಂತಾಗಿದೆ.

ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಸರಕಾರಗಳ ಈ ಹಿಂದಿನ ಎಲ್ಲಾ ಮುಖ್ಯ ಮಂತ್ರಿಗಳು ಹಾಗೂ ಪ್ರಧಾನಿ ಮೋದಿ ಅವರು ಸಹ ಒಳಮೀಸಲಾತಿಗೆ ಒಪ್ಪಿಗೆಯ ಬದ್ಧತೆ ತೋರಿಸಿರುವುದರಿಂದ ಯಾವುದೇ ವಿರೋಧವಿಲ್ಲದಂತಾಗಿದೆ. ಹಸಿದವರನ್ನು ಹೆಚ್ಚು ಕಾಯಿಸದೇ ಒಳಮೀಸಲಾತಿ ಜಾರಿ ಮಾಡಿ ಸಣ್ಣಪುಟ್ಟ ವ್ಯತ್ಯಾಸವಿದ್ದರೆ 2025ರ ನಂತರ ನಡೆಯುವ ಜಾತಿಗಣತಿಯ ದತ್ತಾಂಶಗಳನ್ನು ಪರಿಗಣಿಸಿ ಸೂಕ್ತ ಬದಲಾವಣೆ ಮಾಡಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಜನಶಕ್ತಿ ಮುಖಂಡ ಪುರುಷೋತಮ್, ನಿಸರ್ಗ ಟ್ರಸ್ಟ್ ಅಧ್ಯಕ್ಷ ದುರ್ಗೇಶ್, ಗ್ರಾವಿಟಿ ಮೀಡಿಯಾದ ಅನುಷ್, ಬೆಸ್ಕಾಂ ತಿಪೇಸ್ವಾಮಿ, ಶಿಕ್ಷಕಿ ದ್ರಾಕ್ಷಿಯಣಿ, ಗಿರಿಜಾ, ಶಾಂತಮ್ಮ, ಮಾನಸ, ಉಪನ್ಯಾಸಕ ಇಂದೂದರ್ ಗೌತಮ್, ಬನ್ನಿಕೋಡ್ ರಮೇಶ್, ರಾಮಣ್ಣ, ಶಕುಂತಲಾ ಮುಂತಾದವರು ಭಾಗವಹಿಸಿದ್ದರು.

# ಎಸ್.ಸಿ.ಪಿ.-ಟಿ.ಎಸ್.ಪಿ. ಕಾಯ್ದೆಗೆ ಪ್ರತ್ಯೇಕ ಶಾಶ್ವತ ನ್ಯಾಯಮಂಡಳಿ ರಚನೆಗೆ ಆಗ್ರಹ

**ಚಿಕ್ಕಮಗಳೂರು:** ಕರ್ನಾಟಕ ರಾಜ್ಯದಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಕಾಯ್ದೆಗೆ ಪ್ರತ್ಯೇಕ, ಶಾಶ್ವತ ನ್ಯಾಯಮಂಡಳಿ ರಚನೆ ಮಾಡುವಂತೆ ವಿವಿಧ ಪ್ರಗತಿಪರ ಸಂಘಟನೆಗಳು ಸರ್ಕಾರವನ್ನು ಒತ್ತಾಯಿಸಿವೆ. ಈ ಸಂಬಂಧ ರಾಜ್ಯದ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ಭಾರತದ ಶೋಷಿತ ವರ್ಗಗಳ ಸಮೂಹದ ಸಂಸ್ಥಾಪಕ ಡಾ. ಎಸ್.ಆರ್.ಶಿವುಪ್ರಸಾದ್, ಸಂವಿಧಾನ ಸಂರಕ್ಷಣೆ ವೇದಿಕೆಯ ಮುಖಂಡ ಕೃಷ್ಣಮೂರ್ತಿ, ದಲಿತ ಸಂಘರ್ಷ ಸಮಿತಿಯ ಮರ್ಲೆ ಅಣ್ಣಯ್ಯ, ಬಿಳೇಕಲ್ಲು ಬಾಲಕೃಷ್ಣ, ದಂಟರಮಕ್ಕಿ ಶ್ರೀನಿವಾಸ್, ವಿರೂಪಾಕ್ಷ, ಛಲವಾದಿ ಮಹಾಸಭಾದ ಜಿಲ್ಲಾಧ್ಯಕ್ಷ ಬಿ.ಎಂ.ರಘು, ಅಂಬೇಡ್ಕರ್ ಸೇನೆಯ ಜಿಲ್ಲಾಧ್ಯಕ್ಷ ಸಂತೋಷ್‌ಕುಮಾರ್, ಪಿ.ಟಿ.ಚಂದ್ರಶೇಖರ್ ಮನವಿ ಸಲ್ಲಿಸಿದ್ದಾರೆ.ಸಾಮಾಜಿಕ ರಕ್ಷಣೆಗಳ ನೈಸರ್ಗಿಕ ಸಂಪನ್ಮೂಲಗಳು, ಆರ್ಥಿಕ ಷೇರುಗಳಲ್ಲಿ ತಮ್ಮ ಕಾನೂನುಬದ್ಧ ಪಾಲನ್ನು ಕಳೆದುಕೊಂಡಿರುವ ಎಸ್ಸಿ ಎಸ್ಟಿ ಜನಸಂಖ್ಯೆಯ ಉನ್ನತಿಗಾಗಿ ವಿವಿಧ ಅವಕಾಶಗಳನ್ನು ಸೃಷ್ಟಿಸುವ ಉದ್ದೇಶದಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಗಳನ್ನು ಭಾರತದಲ್ಲಿ 1970ರಲ್ಲಿ ಪ್ರಾರಂಭಿಸಲಾಯಿತು. ರಾಜ್ಯದಲ್ಲಿ ಈವರೆಗೂ ಆಡಳಿತ ನಡೆಸಿರುವ ಸರ್ಕಾರಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲ. ಈ ನಿಧಿಗಳ ಉತ್ತಮ ಬಳಕೆಗಾಗಿ ಯೋಜನೆ ರೂಪಿಸುವಲ್ಲಿ ವಿಫಲವಾಗಿವೆ ಎಂದು ಆರೋಪಿಸಿದ್ದಾರೆ.ಶೋಷಿತ ವರ್ಗಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಿ, ಈ ವರ್ಗದ ಜನರಿಗೆ ಆಗಿರುವ ಆರ್ಥಿಕ ತಾರತಮ್ಯವನ್ನು ಕಡಿಮೆ ಮಾಡಲು ರಾಜ್ಯಮಟ್ಟದಲ್ಲಿ ಶಾಶ್ವತ ನ್ಯಾಯಮಂಡಳಿಯನ್ನು ಸ್ಥಾಪಿಸಬೇಕೆಂದು ಒತ್ತಾಯಿಸಿದ್ದು, ಈ ವರ್ಗದ ಜನರ ಆರ್ಥಿಕ ಅಭಿವೃದ್ಧಿಗೆ ಹಂಚಿಕೆಯಾಗಿರುವ ನಿಧಿಯನ್ನು ಪರಿಣಾಮಕಾರಿಯಾಗಿ ಬಳಕೆಯಾಗದಿರುವುದಕ್ಕೆ ಹಣಕಾಸು ಸಚಿವರು, ಸಮಾಜ ಕಲ್ಯಾಣ ಸಚಿವರು ಮತ್ತು ಪರಿಶಿಷ್ಟ ಪಂಗಡಳಗಳ ಇಲಾಖೆಯ ಸಚಿವರನ್ನು ಹೊಣೆಗಾರರನ್ನಾಗಿ ಮಾಡುವಂತೆ ಒತ್ತಾಯಿಸಿದ್ದಾರೆ. ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಹಣವನ್ನು ಹಂಚಿಕೆ ಮಾಡುವ ಆಯಾ ಜಾತಿಗಳ ಜನಸಂಖ್ಯೆ ಅನುಗುಣವಾಗಿ ಯಾವುದೇ ಜಾತಿಗಳು ಉಪ ಘಟಕ ಯೋಜನೆಗಳ ಪ್ರಯೋಜನಗಳಿಂದ ಹೊರಗುಳಿಯದಂತೆ ನೋಡಿಕೊಳ್ಳುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

# ಮತದಾನದಲ್ಲಿ ಗೊಂದಲ: ಆರೋಪ

**ಶಿವಮೊಗ್ಗ:** ಇಲ್ಲಿನ ಎಪಿಎಂಸಿ ಆವರಣದಲ್ಲಿ ಮಂಗಳವಾರ ನಡೆದ ಮ್ಯಾಮ್ ಕೋಸ್ ಚುನಾವಣೆ ಸಂದರ್ಭದಲ್ಲಿ ಗುರುತಿನ ಚೀಟಿಯನ್ನು ಎದುರಾಳಿಗಳು ದುರುಪಯೋಗ ಮಾಡಿಕೊಂಡು ಮತದಾನದಲ್ಲಿ ಗೊಂದಲ ಎಬ್ಬಿಸಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ಸಹಕಾರ ಭಾರತಿಯ ಕೇಸರಿ ಕಲರ್ ಗುರುತಿನ ಚೀಟಿಗಳನ್ನು ಎದುರಾಳಿ ತಂಡ ಸಾವಿರಾರು ಗಟ್ಟಲೆ ಮಾಡಿಸಿ ಫ್ರಾಕ್ಸಿ ಮತಗಳು ಬೀಳಿಸುವ ಹುನ್ನಾರ ನಡೆಸಿ ಚುನಾವಣೆಯಲ್ಲಿ ಗೊಂದಲ ಮೂಡಿಸುವ ಪ್ರಯತ್ನ ಮಾಡಿದೆ ಎಂದು ಬಿಜೆಪಿ ಬೆಂಬಲಿತ ಸಹಕಾರಿ ಭಾರತಿ ಗಂಭೀರ ಆರೋಪ ಮಾಡಿದೆ. ಈ ಕುರಿತು ಮಾತನಾಡಿದ ಸಹಕಾರ ಭಾರತಿಯ ಸದಸ್ಯ ವಿರುಪಾಕ್ಷಪ್ಪ, ಎದುರಾಳಿ ತಂಡ ಚುನಾವಣೆ ಅಖಾಡದಲ್ಲಿ ಅನುಚಿತ ವರ್ತನೆ ತೋರಿದ್ದಾರೆ. ಸಹಕಾರಿ ಭಾರತಿಯ 19 ಜನರಿರುವ ಗುರುತಿನ ಚೀಟಿಯನ್ನು ರಾಷ್ಟ್ರೀಯ ಸಹಕಾರ ಪ್ರತಿಷ್ಠಾನದಿಂದ ಪ್ರಿಂಟ್ ಮಾಡಿಸಿಕೊಂಡು ಬಂದು ಮತದಾರರಲ್ಲಿ ಹಂಚಿ ಗೊಂದಲ ಉಂಟುಮಾಡುವ ಯತ್ನ ನಡೆಸಲಾಗುತ್ತಿದೆ ಎಂದು ದೂರಿ ದ್ದಾರೆ. ಸಹಕಾರಿ ಭಾರತಿಯ ಸದಸ್ಯರ ಕೇಸರಿ ಕಲರ್ ಗುರುತಿನ ಚೀಟಿಗಳನ್ನು ಮಾಡಿ ಕೊಂಡು ಬಂದಿರುವ ಎದುರಾಳಿ ಸಹಕಾರಿ ಪ್ರತಿಷ್ಠಾನದವರು ಬಿಳಿ ಬಣ್ಣದ ಗುರುತಿನ ಚೀಟಿ ಹಂಚುವ ಬದಲು ಕೇಸರಿ ಕಲರ್ ಹಂಚಿ ನಮ್ಮ ಹೆಸರಿನಲ್ಲಿ ಮತದಾರರಲ್ಲಿ ಗೊಂದಲ ಉಂಟುಮಾಡುತ್ತಿದ್ದಾರೆ. ಚುನಾವಣೆಯಲ್ಲಿ ಸೋಲನ್ನು ಒಪ್ಪಿರುವ ಸಹಕಾರ ಪ್ರತಿಷ್ಠಾನ ಎಲ್ಲಿ ಪ್ರಿಂಟ್ ಮುದ್ರಣ ಮಾಡಿಸಿ ದ್ದಾರೋ ಆ ಮುದ್ರಣ ಕಚೇರಿ ಮೇಲೆ ಚುನಾವಣಾ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು. ಆದರೆ ಈ ಆರೋಪವನ್ನು ಕಾಂಗ್ರೆಸ್ ಬೆಂಬಲಿತ ರಾಷ್ಟ್ರೀಯ ಸಹಕಾರ ಪ್ರತಿಷ್ಠಾ ನದವರು ಸಾರಾಸಗಟಾಗಿ ತಿರಸ್ಕರಿಸಿದ್ದಾರೆ.

# ಮಾಲತೇಶ್ ಅರಸ್ ಅವರಿಗೆ ದೇವರಾಜ ಅರಸು ಹೆಸರಿನಲ್ಲಿ “ಧ್ವನಿ ಕೊಟ್ಟ ಧಣಿ” ರಾಜ್ಯ ಪ್ರಶಸ್ತಿ ಪ್ರದಾನ

**ಮೈಸೂರು:** ಸಾಮಾಜಿಕ ನ್ಯಾಯ, ಹಿಂದುಳಿದ ವರ್ಗಗಳ ಹರಿಕಾರ, ಮಾಜಿ ಮುಖ್ಯಮಂತ್ರಿ ಡಿ. ದೇವರಾಜ್ ಅರಸು ಅವರ ಹೆಸರಿನಲ್ಲಿ ಮೈಸೂರಿನ ಅನ್ವೇಷಣಾ ಸೇವಾ ಟ್ರಸ್ಟ್ ಕೊಡಮಾಡುವ “ಧ್ವನಿ ಕೊಟ್ಟ ಧಣಿ” ರಾಜ್ಯ ಪ್ರಶಸ್ತಿಯನ್ನು ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ ಚಿತ್ರದುರ್ಗ ಜಿಲ್ಲಾಧ್ಯಕ್ಷರು ಹಾಗೂ ಸಂಶೋಧಕರಾದ ಮಾಲತೇಶ್ ಅರಸ್ ಅವರಿಗೆ ದೇವರಾಜ ಅರಸು ಮೊಮ್ಮಗ ಸೂರಜ್ ಹೆಗ್ಡೆ ಅವರು ಪ್ರದಾನ ಮಾಡಿದರು.

ಮೈಸೂರು ನಗರದ ಜೆ. ಎಲ್. ಬಿ ರಸ್ತೆಯ ದಿ ಇನ್ಸಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಫೆಬ್ರವರಿ 16 ರ ಭಾನುವಾರ ನಡೆದ ಅದ್ದೂರಿ ಸಮಾರಂಭದಲ್ಲಿ ನಾಡಿನ ಆರು ಜನ ಸಾಧಕರಾದ ಮೈಸೂರಿನ ಹಿರಿಯ ಪತ್ರಕರ್ತ, ಚಿಂತಕ ಟಿ. ಗುರುರಾಜ್, ಸಂಘಟಕ, ಹೋರಾಟಗಾರ ರಮೇಶ್ ಸುರ್ವೆ, ಅಖಿಲಭಾರತ ಅಂಚೆ ನೌಕರರ ಸಂಘ ಅಧ್ಯಕ್ಷರಾದ ಎನ್.ಕೃಷ್ಣ, ಹಾಸನ ಜಿಲ್ಲೆಯ ಖ್ಯಾತ ಯೋಗ ಶಿಕ್ಷಕಿ ಪ್ರೇಮಾ ಮಂಜುನಾಥ್, ಚಿತ್ರದುರ್ಗದ ವಕೀಲರು ಹಾಗೂ ಸಂಶೋಧಕ ಮಾಲತೇಶ್ ಅರಸ್, ಚಿಂತಕ ಹಿರೇನಲ್ಲೂರು ಶಿವು ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಸಮಿತಿ ರಾಷ್ಟ್ರೀಯ ಕಾರ್ಯದರ್ಶಿಗಳು, ಸರ್ಕಾರದ ಗ್ಯಾರಂಟಿ ಯೋಜನೆ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷರೂ, ದೇವರಾಜ ಅರಸು ಮೊಮ್ಮಗ ಸೂರಜ್ ಹೆಗ್ಡೆ, ಕರ್ನಾಟಕ ಸರ್ಕಾರದ ಕಂಠೀರವ ಸ್ಟುಡಿಯೋ ಮಾಜಿ ಅಧ್ಯಕ್ಷರಾದ ವಿಜಯಲಕ್ಷ್ಮಿ ಅರಸ್, ವಿಧಾನ ಪರಿಷತ್ ಸದಸ್ಯರೂ ಅರಸು ಜಾಗೃತಿ ಅಕಾಡೆಮಿ ಅಧ್ಯಕ್ಷರಾದ ಡಾ.ಡಿ.ತಿಮ್ಮಯ್ಯ, ಟ್ರಸ್ಟ್ ಸ್ಥಾಪಕ ಆರ್ಯ ಅಮರ್‌ನಾಥರಾಜೇ ಅರಸ್, ಅರಸು ಜಾಗೃತಿ ಅಕಾಡೆಮಿ ಉಪಾಧ್ಯಕ್ಷರಾದ ಎಚ್.ಎ. ವೆಂಕಟೇಶ್, ಅನ್ವೇಷಣಾ ಸೇವಾ ಟ್ರಸ್ಟ್ ಅಧ್ಯಕ್ಷರಾದ ಡಾ.ಎಂ.ಜಿ.ಆರ್. ಅರಸ್ ಉಪಸ್ಥಿತರಿದ್ದರು.



# ಮುಂಗಾರು ಮಳೆಯಲ್ಲಿ ತಂದಲ್ಲೇ ನೀನಿಲ್ಲಿ ಪ್ರೀತಿಯ ಮುನ್ಸೂಚನೆ' ಹಾಡಿಗೆ ಪ್ರೇಕ್ಷಕರು ಫಿದಾ



ವಿನಯ್ ರಾಜ್ಕುಮಾರ್ ಮತ್ತು ಅದಿತಿ ಪ್ರಭುದೇವ ಅಭಿನಯದ 'ಅಂದೊಂದಿತ್ತು ಕಾಲ' ಚಿತ್ರ ಇದೀಗ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಚಿತ್ರತಂಡ ಇತ್ತೀಚೆಗಷ್ಟೇ 'ಮುಂಗಾರು ಮಳೆಯಲ್ಲಿ ತಂದಲ್ಲೇ ನೀನಿಲ್ಲಿ ಪ್ರೀತಿಯ ಮುನ್ಸೂಚನೆ' ಎಂಬ ಹಾಡನ್ನು ಬಿಡುಗಡೆ ಮಾಡಿತ್ತು. ಹಾಯಾಗಿದೆ ಮತ್ತು ಜಗವೇ ನೀನು ಗೆಳತಿಯೇ ಮುಂತಾದ ಕನ್ನಡ ಗೀತೆಗಳಿಗೆ ಧ್ವನಿ ನೀಡಿರುವ ಗಾಯಕ ಸಿದ್ ಶ್ರೀರಾಮ್ ಈ ಗೀತೆಗೂ ಧ್ವನಿ ನೀಡಿದ್ದು, ಮತ್ತೊಮ್ಮೆ ಪ್ರೇಕ್ಷಕರ ಮನಸ್ಸಿಗೆ ಹತ್ತಿರವಾಗಿದ್ದಾರೆ.

ಮುಂಗಾರು ಮಳೆ ಖ್ಯಾತಿಯ ನಟ ಗಣೇಶ್ ಮತ್ತು ಪೂಜಾ ಗಾಂಧಿ ಬಿಡುಗಡೆ ಮಾಡಿದ ಈ ಟ್ರ್ಯಾಕ್ ಇದೀಗ ಲಕ್ಷಾಂತರ ವೀಕ್ಷಣೆಗಳನ್ನು ಗಳಿಸಿದೆ. ಹಾಡಿನ ಯಶಸ್ಸಿನ ನಂತರ, ಚಿತ್ರತಂಡ ಇತ್ತೀಚೆಗೆ ಮಾಧ್ಯಮಗಳೊಂದಿಗೆ ಸಂವಾದ ನಡೆಸಿ, ಯೋಜನೆಯ ಕುರಿತು ಮಾಹಿತಿ ಹಂಚಿಕೊಂಡಿತು.

ವಿನಯ್ ರಾಜ್ಕುಮಾರ್ ಮಾತನಾಡಿ, "ಮುಂಗಾರು ಮಳೆಯಲ್ಲಿ ತಂದಲ್ಲೇ ನೀನಿಲ್ಲಿ ಪ್ರೀತಿಯ ಮುನ್ಸೂಚನೆ' ಎಂಬ ಹಾಡಿಗೆ ಸಿಕ್ಕ ಪ್ರತಿಕ್ರಿಯೆ ಹೃದಯಸ್ಪರ್ಶಿಯಾಗಿದೆ. ನಮ್ಮ ಚಿತ್ರವು ಐದು ಅತ್ಯುತ್ತಮ ಹಾಡುಗಳನ್ನು ಒಳಗೊಂಡಿದೆ. ಪ್ರತಿಯೊಂದು ಹಾಡನ್ನು ಸಂಗೀತ ನಿರ್ದೇಶಕ ವಿ ರಾಘವೇಂದ್ರ ಅವರು ಎಚ್ಚರಿಕೆಯಿಂದ ಸಂಗೀತ ಸಂಯೋಜಿಸಿದ್ದಾರೆ. ಅಂದೊಂದಿತ್ತು ಕಾಲ ಚಿತ್ರವು ನಿರ್ದೇಶಕನ ಪ್ರಯಾಣದ ಕಥೆಯನ್ನು ಹೇಳುತ್ತದೆ. ನಿರ್ದೇಶಕ ಕೀರ್ತಿ ಅವರ ವೈಯಕ್ತಿಕ ಅನುಭವಗಳು ಮತ್ತು ಅವರ ನಿಕಟ ಸ್ನೇಹಿತರ ಅನುಭವಗಳಿಂದ ಚಿತ್ರಿಸಲಾಗಿದೆ. ಚಿತ್ರವು ಮಾರ್ಚ್ನಲ್ಲಿ ಬಿಡುಗಡೆಯಾಗಲಿದ್ದು, ಇದು ಪ್ರೇಕ್ಷಕರಿಗೆ ಇಷ್ಟವಾಗುತ್ತದೆ ಎಂಬ ವಿಶ್ವಾಸ ನನಗಿದೆ. ಸುರೇಶ್ ಅವರು ಚಿತ್ರ ನಿರ್ಮಾಣ ಮಾಡಿದ್ದು, ಅವರಿಗೆ ಅವರಿಗೆ ಯಶಸ್ಸು ಸಿಗಲೆಂದು ಬಯಸುತ್ತೇನೆ. ತೀರ್ಥಹಳ್ಳಿಯ ಸುತ್ತಮುತ್ತ ಚಿತ್ರೀಕರಣ ಮಾಡುವಾಗ ಅದಿತಿ ಮತ್ತು ನಾನು ಅದ್ಭುತ ದೃಶ್ಯಗಳಿಗೆ ಸಾಕ್ಷಿಯಾಗಿದ್ದೇವೆ' ಎಂದರು.

ನಿರ್ದೇಶಕ ಕೀರ್ತಿ ಕೃಷ್ಣ ಮಾತನಾಡಿ, 'ಹಾಡಿನ ರಚನೆಯು ಒಂದು ಪ್ರಕ್ರಿಯೆಯಾಗಿದೆ ಮತ್ತು ಒಂದು ಹಂತದಲ್ಲಿ, ನಮ್ಮ ಸಂಗೀತ ಸಂಯೋಜಕರು ಸರಿಯಾದ ಮೆಲೋಡಿಯನ್ನು ಹುಡುಕಲು ಹೆಣಗಾಡುತ್ತಿದ್ದರು. ಆ ಹತಾಶೆಯ ಕ್ಷಣದಲ್ಲಿ, ಅವರು ಒಂದು ಟ್ಯೂನ್ ಅನ್ನು ಹಾಡಿದರು. ನಂತರ ಮ್ಯಾಜಿಕ್ ಸಂಭವಿಸಿತು! ಆರಂಭದಲ್ಲಿ, ನಾವು ಈ ಹಾಡಿಗೆ ಸಿದ್ ಶ್ರೀರಾಮ್ ಅವರನ್ನು ಕರೆತರಬೇಕೆಂದು ಆಶಿಸಿದ್ದೆವು. ಆದರೆ, ಅವರ ಶುಲ್ಕವು ಅಡ್ಡಿಯಾಗಿತ್ತು. ಆದರೂ, ನಿರ್ಮಾಪಕರು ಅವರನ್ನೇ ಕರೆತರಲು ನಿರ್ಧರಿಸಿದರು. ಹಾಡಿನ ಯಶಸ್ಸಿನಲ್ಲಿ ಇದು ಕೂಡ ಮಹತ್ವದ ಪಾತ್ರ ವಹಿಸಿದೆ ಎಂದು ನಾನು ನಂಬುತ್ತೇನೆ' ಎಂದರು.

ಅಂದೊಂದಿತ್ತು ಕಾಲ ಚಿತ್ರದಲ್ಲಿ ನಿಶಾ ರವಿಕೃಷ್ಣನ್, ಜಗ್ಗಪ್ಪ, ಅರುಣಾ ಬಾಲರಾಜ್ ಸಹ ನಟಿಸಿದ್ದಾರೆ. ನಟ ರವಿಚಂದ್ರನ್ ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಬೆಂಗಳೂರು ಮತ್ತು ತೀರ್ಥಹಳ್ಳಿಯ ಸುತ್ತಮುತ್ತ ಚಿತ್ರೀಕರಿಸಲಾಗಿದ್ದು, ಈ ಚಿತ್ರವನ್ನು ಭುವನ್ ಸಿನಿಮಾಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾಗುತ್ತಿದ್ದು, ಅಭಿಷೇಕ್ ಕಾಸರಗೋಡು ಅವರ ಛಾಯಾಗ್ರಹಣವಿದೆ.

# ಎಲ್ಲೋ ಜೋಗಪ್ಪ ನಿನ್ನರಮನೆ'ಗಾಗಿ 25 ಸಾವಿರ KM ಪ್ರಯಾಣ: ಹಯವದನ

ಜನಪ್ರಿಯ ಜನಪದ ಗೀತೆಯ 'ಎಲ್ಲೋ ಜೋಗಪ್ಪ ನಿನ್ನರಮನೆ' ಎಂಬ ಪದಗುಚ್ಛವು ಮೊದಲು ಶಿವರಾಜಕುಮಾರ್ ಅಭಿನಯದ ಜೋಗಿ ಸಿನಿಮಾದಲ್ಲಿ ಹಾಡಿನ ರೂಪದಲ್ಲಿ ಬಂದು ವ್ಯಾಪಕ ಮನ್ನಣೆ ಗಳಿಸಿತು. ಈಗ, ಈ ಸಾಂಪ್ರದಾಯಿಕ ಸಾಲು ಹಯವದನ ನಿರ್ದೇಶನದ ಚೊಚ್ಚಲ ಸಿನಿಮಾ ಟೈಟಲ್ ಆಗಿದೆ.

ಈ ಚಿತ್ರದಲ್ಲಿ ಕಂಬ್ಳಿ ಹುಳ ಸ್ಟಾರ್ ಅಂಜನ್ ನಾಗೇಂದ್ರ, ವೆನ್ಯಾ ರೈ ಮತ್ತು ಸಂಜನಾ ದಾಸ್ ಪ್ರಮುಖ ಪಾತ್ರಗಳಲ್ಲಿದ್ದಾರೆ. ಫೆಬ್ರವರಿ 21 ರಂದು ಸಿನಿಮಾ ಬಿಡುಗಡೆಯಾಗಲಿದೆ. ತಂದೆ ಮತ್ತು ಮಗನ ನಡುವಿನ ಘರ್ಷಣೆ, ಮಧ್ಯಮ ವರ್ಗದ ಹೋರಾಟಗಳು ಮತ್ತು ಸಾಮಾಜಿಕ ಮಾಧ್ಯಮಗಳ ನಿರಂತರ ಪ್ರಭಾವದ ಕಥೆಯಾಗಿದೆ.

ಈ ಚಿತ್ರಕ್ಕಾಗಿ ಇಡೀ ಇಂಡಿಯಾ ಸುತ್ತಿದ್ದೇನೆ. ಇದು ಒಂದು ಜರ್ನಿ ಸಿನಿಮಾ. ತಂದೆ ಮತ್ತು ಮಗನ ಬಾಂಧವ್ಯದ ಕಹಾನಿ ಇದೆ. ಬೆಂಗಳೂರಿನಿಂದ ಶುರುವಾದ ಪ್ರಯಾಣ ಹಿಮಾಲಯದವರೆಗೆ ಹೋಗುತ್ತದೆ. ಭಾವನಾತ್ಮಕವಾದ ಈ ಸಿನಿಮಾ ಯುವ ಜನರಿಗೆ ಹೆಚ್ಚು ಮನರಂಜನೆ ನೀಡುತ್ತದೆ ಎಂದು ಹೇಳಿದ್ದಾರೆ. ಹಲವು ರಾಜ್ಯಗಳ ಅನೇಕ ಲೊಕೇಷನ್ಗಳಲ್ಲಿ ಈ ಸಿನಿಮಾದ ಶೂಟಿಂಗ್ ಮಾಡಲಾಗಿದೆ. ಭಾರತದ ವೈವಿಧ್ಯಮಯ ಭೂದೃಶ್ಯಗಳಾದ್ಯಂತ ನಾಯಕನ ಪ್ರಯಾಣವು ಅನ್ವೇಷಣೆಯಾಗಿ ಕಾರ್ಯನಿರ್ವಹಿಸುತ್ತದೆ, ಸಾಂಸ್ಕೃತಿಕ ಗಡಿಗಳಲ್ಲಿ ಮಾನವ ಸಂಪರ್ಕಗಳನ್ನು ಎತ್ತಿ ತೋರಿಸುತ್ತದೆ.

ಸಿನಿಮಾ ಶೂಟಿಂಗ್ ಸಮಯದಲ್ಲಿ 25,000 ಕಿಲೋಮೀಟರ್ಗಳಷ್ಟು ಪ್ರಯಾಣಿಸಿದ್ದೇವೆ. ಹತ್ತು ರಾಜ್ಯಗಳನ್ನು ವ್ಯಾಪಿಸಿರುವ, ಚಿತ್ರದ



ಪ್ರಯಾಣವು ಭಾರತದ ದಕ್ಷಿಣದ ತುದಿಯಿಂದ ಹಿಮದಿಂದ ಆವೃತವಾದ ಹಿಮಾಲಯದವರೆಗೆ ವ್ಯಾಪಿಸಿದೆ, 3,000–ಕಿಲೋಮೀಟರ್ ಮಾರ್ಗವು ಪರದೆಯ ಮೇಲೆ ತೋರಲಾಗುತ್ತದೆ ಎಂದು ನಿರ್ದೇಶಕ ಹಯವದನ ತಿಳಿಸಿದ್ದಾರೆ. ಕಿರುತೆರೆಯಲ್ಲಿ ಯಶಸ್ವಿ ಹಿನ್ನೆಲೆ ಹೊಂದಿರುವ ಹಯವದನ ಅವರು ದೃಶ್ಯ ಮಾಧ್ಯಮದಲ್ಲಿ ಪಾರಂಗತರಾಗಿದ್ದಾರೆ. ಅಗ್ನಿ ಸಾಕ್ಷಿ, ನಾಗಿಣಿ ಮತ್ತು ಕಮಲಿ ಮುಂತಾದ ಜನಪ್ರಿಯ ಧಾರಾವಾಹಿಗಳನ್ನು ನಿರ್ದೇಶಿಸಿದ ಅವರು ದೂರದರ್ಶನ ಮತ್ತು ಸಿನಿಮಾ ನಡುವಿನ ಸಂಪೂರ್ಣ ವ್ಯತ್ಯಾಸಗಳನ್ನು ಒಪ್ಪಿಕೊಂಡಿದ್ದಾರೆ. ಟೆಲಿವಿಷನ್ ನನಗೆ ಪ್ರಯೋಗ ಮಾಡಲು ವೇದಿಕೆಯನ್ನು ನೀಡಿತು, ಧಾರಾವಾಹಿ ಹಿನ್ನಲೆಯಿಂದ ಬಂದವರಿಗೆ ಸಿನಿಮಾ ಮಾಡಲು ಸಾಧ್ಯವಿಲ್ಲ ಎಂಬ ಸ್ಟೀರಿಯೊಟೈಪ್ ವಾದ ಮುರಿಯುತ್ತದೆ. ಉದಾಹರಣೆಗೆ, ನನ್ನ ಚಿತ್ರದ ಅವಧಿ ಕೇವಲ 2 ಗಂಟೆ 6 ನಿಮಿಷಗಳು. ನನ್ನ ಚೊಚ್ಚಲ ಸಿನಿಮಾ ಪ್ರದರ್ಶನವು ಎಲ್ಲಾ ಸವಾಲುಗಳನ್ನು ಮೆಟ್ಟಿ ನಿಲ್ಲುತ್ತದೆ ಎಂದು ಹೇಳಿದ್ದಾರೆ.

ಕಂಬ್ಳಿ ಹುಳದ ನಂತರ ಎಲ್ಲೋ ಜೋಗಪ್ಪ ನಿನ್ನರಮನೆ ಚಿತ್ರರಂಗದಲ್ಲಿ ನನ್ನ ಎರಡನೇ ಹೆಜ್ಜೆ. ಇದು ಪ್ರತಿಯೊಬ್ಬರೂ ಆನಂದಿಸಬಹುದಾದ ಚಿತ್ರವಾಗಿದೆ. ವಿಶಿಷ್ಟವಾದ ಪಾತ್ರದಲ್ಲಿ ಅಭಿನಯಿಸಲು ನಾನು ರೋಮಾಂಚನಗೊಂಡಿದ್ದೇನೆ. ಪ್ರೇಕ್ಷಕರು ನಮ್ಮನ್ನು ಬೆಂಬಲಿಸುತ್ತಾರೆ ಎಂದು ನಾನು ಭಾವಿಸುತ್ತೇನೆ

ಎಂದು ಚಿತ್ರದ ನಾಯಕರಲ್ಲಿ ಒಬ್ಬರಾದ ಅಂಜನ್ ನಾಗೇಂದ್ರ ಹೇಳಿದ್ದಾರೆ.

ಪವನ್ ಶಿಮಿಕೇರಿ ಮತ್ತು ಸಿಂಧು ಹಯವದನ ನಿರ್ಮಾಣದ ಈ ಚಿತ್ರಕ್ಕೆ ಶಿಯೋಂ ಅವರ ಸಂಗೀತ, ನಟರಾಜು ಮದ್ದಾಳ ಅವರ ಛಾಯಾಗ್ರಹಣ ಮತ್ತು ಹೊಸಮನೆ ಮೂರ್ತಿ ಅವರ ಕಲಾ ನಿರ್ದೇಶನವಿದೆ.

# ಸಾಂಪ್ರದಾಯಿಕ ಕುಟುಂಬದ ಮನೆಯ ಸಾರವನ್ನು ಸೆರೆಹಿಡಿಯಲು ಬರ್ತಿದ್ದಾರೆ 'ದೊಡ್ಮನೆ ಸೊಸೆ'



ಕೌಟುಂಬಿಕ ಕಥೆಯನ್ನು ಒಳಗೊಂಡಿರುವ ಆಸ್ಕರ್ ಕೃಷ್ಣ ನಿರ್ದೇಶನದ 'ದೊಡ್ಮನೆ ಸೊಸೆ' ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗಷ್ಟೇ ನಡೆಯಿತು. ಪದ್ಮಶ್ರೀ ಮತ್ತು ರಾಷ್ಟ್ರ ಪ್ರಶಸ್ತಿ ವಿಜೇತ ಗಿರೀಶ್ ಕಾಸರವಳ್ಳಿ ಅವರು ಚಿತ್ರಕ್ಕೆ ಕ್ಲ್ಯಾಪ್ ಮಾಡಿದರು.

ಮಾನ್ಯ ಸಿನಿ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ತೇಜಸ್ ವಿನಯ್ ಎಸ್ ನಿರ್ಮಿಸಿರುವ ಈ ಚಿತ್ರಕ್ಕೆ ಆಸ್ಕರ್ ಕೃಷ್ಣ ಅವರೇ ಕಥೆ ಬರೆದಿದ್ದಾರೆ. ಚಿತ್ರದಲ್ಲಿ ನಾಯಕಿಯಾಗಿ ರಾಗಶ್ರೀ ನಟಿಸುತ್ತಿದ್ದಾರೆ.

ಗಿರೀಶ್ ಕಾಸರವಳ್ಳಿ ಮಾತನಾಡಿ, ಇಂದಿನ ಸಿನಿಮಾಗಳಲ್ಲಿ ಕೌಟುಂಬಿಕ ಕಥೆಗಳು ಕಡಿಮೆಯಾಗಿವೆ. ಹೆಚ್ಚಾಗಿ ಆಕ್ರಮಣಶೀಲತೆ ಮತ್ತು ಹಿಂಸೆಯಿಂದ ಕೂಡಿರುತ್ತವೆ. 'ಸದ್ಯದ ಮಾರುಕಟ್ಟೆ ಉದ್ದೇಶದಿಂದಾಗಿ ಕ್ರೌರ್ಯ, ಹಿಂಸೆ ವಿಜೃಂಭಿಸುತ್ತಿರುವ ಕಾಲದಲ್ಲಿ ಸುಂದರವಾದ ಕುಟುಂಬ ಆಧರಿತ ಕಥೆ ತೆರೆಗೆ ಬರುವುದು ಅಗತ್ಯವಾಗಿದೆ. ದೊಡ್ಮನೆ ಸೊಸೆ ಇಂತಹ ಕಥೆಯೊಂದಿಗೆ ಬರುತ್ತಿದೆ. ಇದು ಕುಟುಂಬಗಳಲ್ಲಿನ ಸಂಕೀರ್ಣ ಸಂಬಂಧಗಳನ್ನು ಮತ್ತು ಮಾನವ ಬಂಧಗಳನ್ನು ಹೇಗೆ ಮರುವ್ಯಾಖ್ಯಾನಿಸಬಹುದು ಎಂಬುದನ್ನು ಪರಿಶೋಧಿಸುತ್ತದೆ' ಎಂದು ಹೇಳಿದರು.

70 ಮತ್ತು 80ರ ದಶಕದ ಶ್ರೇಷ್ಠ ಚಲನಚಿತ್ರಗಳನ್ನು ಪ್ರತಿಬಿಂಬಿಸುತ್ತಾ, ಪುಟ್ಟಣ್ಣ ಕಣಗಾಲ್, ದೊರೆ ಭಗವಾನ್, ರಾಜ್ಕುಮಾರ್ ಅವರ ಸಿನಿಮಾಗಳು ಯಾವ ಮೌಲ್ಯಗಳನ್ನು ಹೇಳುತ್ತಿದ್ದವೋ ಅದೇ ಮೌಲ್ಯಗಳನ್ನು ಈ ಚಿತ್ರವೂ ಒಳಗೊಂಡಿದೆ ಎಂದು ಹೇಳಿದರು.

ಡಾ. ಗಿರೀಶ್ ಕಾಸರವಳ್ಳಿ ಅವರ ಚಿತ್ರಗಳನ್ನು ನೋಡುತ್ತಾ ಬೆಳೆದಿದ್ದೇನೆ. ಇದು ನನ್ನ ನಿರ್ದೇಶನದ 7ನೇ ಚಿತ್ರವಾಗಿದ್ದು, ದೊಡ್ಮನೆ ಸೊಸೆ ಸಾಂಪ್ರದಾಯಿಕ ಮನೆತನದ ಸಾರವನ್ನು ಪ್ರತಿಬಿಂಬಿಸುತ್ತದೆ' ಎಂದು ನಿರ್ದೇಶಕ ಆಸ್ಕರ್ ಕೃಷ್ಣ ಹರ್ಷ ವ್ಯಕ್ತಪಡಿಸಿದರು.

ದೊಡ್ಮನೆ ಸೊಸೆ ಚಿತ್ರದಲ್ಲಿ ಸುಂದರ್ ರಾಜ್, ಸಚಿನ್ ಪುರೋಹಿತ್, ವಂಶಿ, ಶಂಕರಭಟ್, ಲಯಕೋಕಿಲ, ಮುರಳಿ ಕೊಟ್ಟೂರು ಮತ್ತು ಮಮತಾ ಸೇರಿದಂತೆ ಇತರರು

ನಟಿಸಿದ್ದಾರೆ. ಚಿತ್ರಕ್ಕೆ ನಿತೀಶ್ ವಿ ಸಂಗೀತ ಸಂಯೋಜನೆ, ಮೈಸೂರು ಸೋಮು ಅವರ ಛಾಯಾಗ್ರಹಣ, ಕೌಶಿಕ್ ಕಿರಣ್ ಅವರ ಸಂಕಲನವಿದೆ. ವಿನಯ್ ಕುಮಾರ್ ಪೆನ್ನಾ ಚಿತ್ರಕಥೆ ಮತ್ತು ಸಂಭಾಷಣೆಯನ್ನು ಸಹ ನಿರ್ವಹಿಸುತ್ತಿದ್ದಾರೆ.

ಫೆಬ್ರುವರಿ ಮೂರನೇ ವಾರದಲ್ಲಿ ಚಿತ್ರೀಕರಣ ಆರಂಭಿಸಲು ಚಿತ್ರತಂಡ ಸಜ್ಜಾಗಿದ್ದು, ಬೆಂಗಳೂರು ಮತ್ತು ಸುತ್ತಮುತ್ತಲಿನ ಸುಂದರ ಸ್ಥಳಗಳಲ್ಲಿ ಚಿತ್ರೀಕರಣ ನಡೆಯಲಿದೆ. ಮೇ ತಿಂಗಳಲ್ಲಿ ಚಿತ್ರವನ್ನು ಪ್ರೇಕ್ಷಕರೆದುರು ತರುವ ಗುರಿಯನ್ನು ಚಿತ್ರತಂಡ ಹೊಂದಿದೆ.

# 42 ವರ್ಷ ಪೂರೈಸಿದ 'ಪಲ್ಲವಿ ಅನು ಪಲ್ಲವಿ

## ಕನ್ನಡ ಚಿತ್ರವನ್ನು ನೆನಪಿಸಿಕೊಂಡ ಬಾಲಿವುಡ್ ನಟ ಅನಿಲ್ ಕಪೂರ್

**ಚೆನ್ನೈ:** ಕನ್ನಡ ಚಿತ್ರ ಪಲ್ಲವಿ ಅನು ಪಲ್ಲವಿ?ಗೆ ಈಗ 42 ವರ್ಷ ಪೂರೈಸಿದೆ. ನಟ ಅನಿಲ್ ಕಪೂರ್ ಮಂಗಳವಾರ ಭಾರತದ ಶ್ರೇಷ್ಠ ಸಂಗೀತ ನಿರ್ದೇಶಕರಲ್ಲಿ ಒಬ್ಬರಾದ ಇಳಯರಾಜ ಅವರ ಸಂಗೀತದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದು, ಅವರ ಸಂಗೀತವು 'ಕಾಲಾತೀತ' ಎಂದಿದ್ದಾರೆ.

ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ಪೋಸ್ಟ್ ಹಾಕಿರುವ ನಟ, ಪಲ್ಲವಿ ಅನು ಪಲ್ಲವಿ ಚಿತ್ರದ ಸಣ್ಣ ಕ್ಲಿಪ್ ಅನ್ನು ಹಂಚಿಕೊಂಡಿದ್ದಾರೆ. '42 ವರ್ಷ ಕಳೆದಿದೆ ಮತ್ತು ಇಳಯರಾಜ ಸರ್ ಅವರ ಮಧುರ ಗೀತೆಗಳು ಇನ್ನೂ ಶಕ್ತಿಯುತವಾಗಿ ಪ್ರತಿಧ್ವನಿಸುತ್ತಿವೆ. ಪಲ್ಲವಿ ಅನು ಪಲ್ಲವಿ ಚಿತ್ರ 42 ವರ್ಷಗಳನ್ನು ಪೂರೈಸಿದೆ. ಆದರೆ, ಚಿತ್ರದ ಸಂಗೀತವು ಶಾಶ್ವತವಾಗಿ ಉಳಿದಿದೆ!' ಎಂದು ಬರೆದಿದ್ದಾರೆ.

ಪಲ್ಲವಿ ಅನು ಪಲ್ಲವಿ ಚಿತ್ರವು ಹಲವಾರು ಕಾರಣಗಳಿಗಾಗಿ ವಿಶಿಷ್ಟವಾಗಿದ್ದು, ಈ ಚಿತ್ರದ ಮೂಲಕ ಮಣಿರತ್ನಂ ಅವರು ನಿರ್ದೇಶಕರಾಗಿ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದರು. ಇಂದು ದೇಶದ ಅತ್ಯುತ್ತಮ ಚಲನಚಿತ್ರ ನಿರ್ಮಾಪಕರು ಮತ್ತು ನಿರ್ದೇಶಕರಲ್ಲಿ ಒಬ್ಬರಾಗಿದ್ದಾರೆ.

ಈ ಚಿತ್ರಕ್ಕೆ ತಮಿಳು ಚಿತ್ರರಂಗದ ಮತ್ತೊಬ್ಬ ದಿಗ್ಗಜ ಬಾಲು ಮಹೇಂದ್ರ ಅವರ ಛಾಯಾಗ್ರಹಣವಿದೆ. ಅಲ್ಲದೆ, ಬಿ ಲೆನಿನ್ ಅವರ ಸಂಕಲನವಿದೆ. ಲೆನಿನ್ ಅವರು ಇಂದಿಗೂ ತಮಿಳು ಚಿತ್ರರಂಗದಲ್ಲಿ ದೊಡ್ಡ ಮಟ್ಟದ ಹೆಸರು ಮಾಡಿದ್ದಾರೆ. ಈ ಚಿತ್ರಕ್ಕೆ ಇಳಯರಾಜ ಅವರ ಸಂಗೀತ ಸಂಯೋಜನೆಯಿತ್ತು.

1983ರಲ್ಲಿ ಬಿಡುಗಡೆಯಾದ ಈ ಚಿತ್ರದಲ್ಲಿ ಅನಿಲ್ ಕಪೂರ್, ಲಕ್ಷ್ಮಿ ಮತ್ತು ಕಿರಣ್



ವೈರಾಲೆ ಮುಖ್ಯ ಭೂಮಿಕೆಯಲ್ಲಿದ್ದರು. ಸಿನಿಮಾ ನಿರ್ಮಾಣದಲ್ಲಿ ಯಾವುದೇ ತರಬೇತಿ ಪಡೆದಿಲ್ಲದ ಮಣಿರತ್ನಂ ಅವರಿಗೆ ಅತ್ಯುತ್ತಮ ಚಿತ್ರಕಥೆಗಾಗಿ ಮತ್ತು ಅತ್ಯುತ್ತಮ ಛಾಯಾಗ್ರಹಣಕ್ಕಾಗಿ ಬಾಲು ಮಹೇಂದ್ರ ಅವರಿಗೆ ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿ ಲಭಿಸಿತು.

ಕೇವಲ ಇಳಯರಾಜರ ಹಾಡುಗಳಷ್ಟೇ ಜನಮೆಚ್ಚುಗೆ ಗಳಿಸಿರಲಿಲ್ಲ. ಅವರ ಹಿನ್ನೆಲೆ ಸಂಗೀತವು ಸಹ ಮಹಾಕಾವ್ಯವಾಗಿತ್ತು.

ಪಲ್ಲವಿ ಅನು ಪಲ್ಲವಿ ಚಿತ್ರವು ಇಬ್ಬರು ಶ್ರೇಷ್ಠರಾದ ಮಣಿರತ್ನಂ ಮತ್ತು ಇಳಯರಾಜ ನಡುವಿನ ಬಾಂಧವ್ಯದ ಆರಂಭಕ್ಕೆ ನಾಂದಿಯಾಯಿತು. ಬಳಿಕ ಇಳಯರಾಜ ಅವರು ಮಣಿರತ್ನಂ ಅವರ ಮುಂದಿನ ಒಂಬತ್ತು ಚಿತ್ರಗಳಿಗೆ ಕೆಲಸ ಮಾಡಿದರು. ಇವೆಲ್ಲವೂ ಹಿಟ್, ಸೂಪರ್ಹಿಟ್ ಅಥವಾ ಬ್ಲಾಕ್ಬಸ್ಟರ್ ಸಿನಿಮಾಗಳಾಗಿ ಹೊರಹೊಮ್ಮಿದವು.

10ಬಿಗ್ ಬಜೆಟ್ ಚಿತ್ರದಲ್ಲಿ ನಟ ಚಿಕ್ಕಣ್ಣ; ಬಂಡವಾಳ ಹೂಡಲಿದ್ದಾರೆ ಸೋಮಶೇಖರ್ ಕಟ್ಟಿಗೇನಹಳ್ಳಿ

ಹಾಸ್ಯನಟನಾಗಿ ಮನೆ ಮಾತಾಗಿದ್ದ ನಟ ಚಿಕ್ಕಣ್ಣ ಅವರು ಪೂರ್ಣ ಪ್ರಮಾಣದ ನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಉಪಾಧ್ಯಕ್ಷ (2024) ಚಿತ್ರದ ಮೂಲಕ ಯಶಸ್ಸನ್ನು ಗಳಿಸಿದ ನಟ, ಈಗ ಸ್ಕ್ರಿಪ್ಟ್ ಆಯ್ಕೆ ವಿಚಾರದಲ್ಲಿ ಎಚ್ಚರಿಕೆಯ ಹೆಜ್ಜೆಯನ್ನಿಡುತ್ತಿದ್ದಾರೆ ಮತ್ತು ಸರಿಯಾದ ಯೋಜನೆಗಳನ್ನು ಆಯ್ಕೆ ಮಾಡಲು ಸಮಯ ತೆಗೆದುಕೊಳ್ಳುತ್ತಿದ್ದಾರೆ. ತಾವು ಕೇಳಿರುವ ಸ್ಕ್ರಿಪ್ಟ್ಗಳ ಪೈಕಿ ಒಂದೆರಡು ಮಾತ್ರ ಗಮನ ಸೆಳೆದಿದ್ದು, ಈಗ ಅವುಗಳಲ್ಲಿ ಒಂದರಲ್ಲಿ ನಟಿಸಲು ಸಿದ್ಧರಾಗಿದ್ದಾರೆ.

ನಾಯಕನಾಗಿ ಪದಾರ್ಪಣೆ ಮಾಡಿದ ಅನುಭವದ ಬಗ್ಗೆ ಕೇಳಿದಾಗ, 'ನಾನು ನಾಯಕನಾಗಲು ಸಂತೋಷಪಡುತ್ತೇನೆ. ಆದರೆ, ಅದಕ್ಕೆ ತುಂಬಾ ತಾಳ್ಮೆ ಬೇಕು. ಆಗ ಸಂತೋಷವಾಗುವುದಿಲ್ಲ. ನಿಜ ಹೇಳಬೇಕೆಂದರೆ, ಮುಂದಿನ ಒಂದೂವರೆ ವರ್ಷ ನನ್ನ ಬಳಿ ಡೇಟ್ಸ್ ಇಲ್ಲ. ಆದರೆ, ಈ ಸಮಯದಲ್ಲಿ, ನಾನು ಮೂರು ಚಿತ್ರಗಳಿಗೆ ಕಮಿಟ್ ಆಗುತ್ತೇನೆ. ಇದು ಕೇವಲ ಒಂದು ಹಂತ. ಆದರೆ, ನನ್ನ ಮೊದಲ ಚಿತ್ರ ಉಪಾಧ್ಯಕ್ಷ ಮತ್ತು ಎರಡನೇ ಚಿತ್ರ ಲಕ್ಷ್ಮಿ ಪುತ್ರ ನಡುವಿನ ಅಂತರವು ಸಮಯ ಮತ್ತು ತಾಳ್ಮೆಯ ಪರೀಕ್ಷೆಯಾಗಿದೆ' ಎಂದು ಹೇಳುತ್ತಾರೆ.

ಇದೇ ವೇಳೆ ಮತ್ತೊಂದು ರೋಚಕ ಯೋಜನೆಗೆ ಚಿಕ್ಕಣ್ಣ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಈ ಬಾರಿ, ನಟ ಹೊಸ ನಿರ್ದೇಶಕರೊಂದಿಗೆ ಕೆಲಸ ಮಾಡುತ್ತಿದ್ದಾರೆ ಮತ್ತು ಈವರೆಗೆ ತಾವು ಕಾಣಿಸಿಕೊಳ್ಳದ ಪಾತ್ರವನ್ನು ಒಳಗೊಂಡಿರುವ ಆಸಕ್ತಿದಾಯಕ ಸ್ಕ್ರಿಪ್ಟ್ ಇದೆ ಎಂದು ವರದಿಯಾಗಿದೆ.

ಈ ಚಿತ್ರಕ್ಕೆ ಮಹೇಶ್ ಕಥೆ ಬರೆದಿದ್ದು, ನಿರ್ಮಾಪಕರು ಶೀಘ್ರದಲ್ಲೇ ತಾಂತ್ರಿಕ ತಂಡವನ್ನು ಅಂತಿಮಗೊಳಿಸಲಿದ್ದಾರೆ. ಆಕಾಶ್ ಎಂಟರ್ಪ್ರೈಸಸ್ ಬ್ಯಾನರ್ ಅಡಿಯಲ್ಲಿ ವಿನೋದ್ ಪ್ರಭಾಕರ್ ಅಭಿನಯದ ಫೈಟರ್ ಚಿತ್ರದ ನಿರ್ಮಾಪಕ ಸೋಮಶೇಖರ್ ಕಟ್ಟಿಗೇನಹಳ್ಳಿ ಈ ಚಿತ್ರವನ್ನು ನಿರ್ಮಿಸಲಿದ್ದಾರೆ.

ಈಗಾಗಲೇ ಸ್ಕ್ರಿಪ್ಟ್ ಕೆಲಸ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ನಿರ್ಮಾಣ ಪ್ರಾರಂಭವಾಗಲಿದೆ.

ಇದು ನನ್ನ ಮೊದಲ ಬಿಗ್ ಬಜೆಟ್ ಚಿತ್ರವಾಗಲಿದೆ. ಪಾತ್ರಕ್ಕೆ ಉತ್ತಮ ಮೌಲ್ಯ ಇಲ್ಲದ ಹೊರತು ಎಲ್ಲ ಪಾತ್ರಗಳಲ್ಲಿ ನಾನು ನಟಿಸುವುದಿಲ್ಲ. ಆದರೆ ಇದೀಗ, ನನ್ನ ಮುಂದೆ ಕೆಲವು ಯೋಜನೆಗಳಿವೆ. ಅವುಗಳತ್ತ ಗಮನ ಹರಿಸುತ್ತೇನೆ. ನಾನು ಇನ್ನೂ ಹೀರೋ ಆಗುವ ಹಂಬಲದಲ್ಲೇ ಇದ್ದೇನೆ' ಎನ್ನುತ್ತಾರೆ ಚಿಕ್ಕಣ್ಣ.

# ಕಣ್ಣಪ್ಪನ ಬಗ್ಗೆ ಯೋಚಿಸಿದಾಗ, ಡಾ. ರಾಜ್ಕುಮಾರ್ ನನ್ನ ಕಣ್ಮುಂದೆ ಬರ್ತಾರೆ: ಮೋಹನ್ ಬಾಬು



ತೆಲುಗಿನ ನಟ ವಿಷ್ಣು ಮಂಚು ನಟನೆಯ ಮುಂಬರುವ ಪ್ಯಾನ್ ಇಂಡಿಯಾ ಚಿತ್ರ ಕಣ್ಣಪ್ಪದ 'ಶಿವ ಶಿವ ಶಂಕರ' ಹಾಡನ್ನು ಇತ್ತೀಚೆಗೆ ಬಿಡುಗಡೆ ಮಾಡಲಾಗಿದೆ. ಈ ಚಿತ್ರವನ್ನು ನಟ ಮೋಹನ್ ಬಾಬು ನಿರ್ಮಿಸಿದ್ದಾರೆ, ಮುಖೇಶ್ ಕುಮಾರ್ ಸಿಂಗ್ ನಿರ್ದೇಶಿಸಿದ್ದಾರೆ. ಆರ್ಟ್ ಆಫ್ ಲಿವಿಂಗ್ನ ಶ್ರೀ ಶ್ರೀ ರವಿಶಂಕರ್ ಗುರೂಜಿ ಶಿವ ಶಿವ ಶಂಕರ ಹಾಡನ್ನು ಅನಾವರಣಗೊಳಿಸಿ, ಚಿತ್ರದ ಯಶಸ್ಸಿಗೆ ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಮೋಹನ್ ಬಾಬು, ವಿಷ್ಣು ಮಂಚು, ನಿರ್ದೇಶಕ ಮುಖೇಶ್ ಕುಮಾರ್ ಸಿಂಗ್ ಮತ್ತು ಚಿತ್ರತಂಡ ಭಾಗವಹಿಸಿತ್ತು. ಇನ್ನು ವಿಶೇಷ ಅತಿಥಿಗಳಾಗಿ ಭಾರತಿ ವಿಷ್ಣುವರ್ಧನ್, ಸುಮಲತಾ ಅಂಬರೀಶ್ ಮತ್ತು ನಿರ್ಮಾಪಕ ರಾಕ್ಲೈನ್ ವೆಂಕಟೇಶ್ ಭಾಗವಹಿಸಿದ್ದರು.ಈ ವೇಳೆ ಮಾತನಾಡಿದ ಭಾರತಿ ವಿಷ್ಣುವರ್ಧನ್ ಅವರು, ನನ್ನ ಪತಿ ವಿಷ್ಣುವರ್ಧನ್ ಅವರಿಗೆ ಮೋಹನ್ ಬಾಬು ಅವರ ಮೇಲೆ ಅಪಾರ ಗೌರವವಿತ್ತು. ಅವರ ಭಾವನೆ ಪರಸ್ಪರವಾಗಿತ್ತು. ಮೋಹನ್ ಬಾಬು ತಮ್ಮ ಮಗನಿಗೆ ನನ್ನ ಪತಿ (ವಿಷ್ಣು) ಹೆಸರಿಟ್ಟಿರುವುದು ವಿಶೇಷವಾಗಿ ಹೃದಯಸ್ಪರ್ಶಿಯಾಗಿದೆ ಎಂದು ಹೇಳಿದರೆ, ಮೋಹನ್ ಬಾಬು ಮತ್ತು ಅಂಬರೀಶ್ ಅವರ ನಡುವೆ ಆತ್ಮೀಯ ಬಾಂಧವ್ಯವಿತ್ತು.


ಅವರ ಮಗ ವಿಷ್ಣು ಮಂಚುನನ್ನು ನಾನು ಬಾಲ್ಯದಿಂದಲೂ ನೋಡಿದ್ದೇನೆ ಎಂದು ಸುಮಲತಾ ಅಂಬರೀಶ್ ಹೇಳಿದರು. ಕರ್ನಾಟಕ ವಿತರಣಾ ಹಕ್ಕುಗಳನ್ನು ಪಡೆದ ರಾಕ್ಲೈನ್ ವೆಂಕಟೇಶ್, ನಾನು ಈಗಾಗಲೇ ಕಣ್ಣಪ್ಪ ಚಿತ್ರವನ್ನು ನೋಡಿದ್ದೇನೆ. ಇದು ಅದ್ಭುತ ಚಿತ್ರ. ಇದನ್ನು ಕರ್ನಾಟಕಕ್ಕೆ ತರಲು ನಾನು ಉತ್ಸುಕನಾಗಿದ್ದೇನೆ ಎಂದು ಹೇಳಿದರು. ಸ್ಟೀಫನ್ ದೇವಸ್ಸಿ ಸಂಗೀತ ಸಂಯೋಜಿಸಿದ್ದು ರಾಮಜೋಗಯ್ಯ ಶಾಸ್ತ್ರಿ ಸಾಹಿತ್ಯ ಬರೆದಿದ್ದು, ಈ ಹಾಡನ್ನು ವಿಜಯ್ ಪ್ರಕಾಶ್ ಹಾಡಿದ್ದಾರೆ.

# ನಾಗವಲ್ಲಿ ಬಂಗಲೆ' ಫೆಬ್ರುವರಿ ಕೊನೆಯಲ್ಲಿ ಬಿಡುಗಡೆಗೆ ಸಿದ್ಧ

ನಾಗವಲ್ಲಿ ಬಂಗಲೆ ಚಿತ್ರ ಫೆಬ್ರುವರಿ 28 ರಂದು ರಾಜ್ಯದಾದ್ಯಂತ ಬಿಡುಗಡೆಗೆ ಸಜ್ಜಾಗಿದೆ. ಚಿತ್ರತಂಡ ಇತ್ತೀಚೆಗಷ್ಟೇ ಚಿತ್ರದ ಆಡಿಯೋ ಲಾಂಚ್ ಮಾಡಿದೆ. ಸಮಾರಂಭದಲ್ಲಿ ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಅಶ್ವತ್ಥ್ ನಾರಾಯಣ್ ಮತ್ತು ಹಿರಿಯ ನಿರ್ಮಾಪಕ ಎಸ್ಎ ಚಿನ್ನೇಗೌಡ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಅಶ್ವತ್ಥ್, 'ನಾನು ಸಿನಿಮಾ ನೋಡುತ್ತಾ ಬೆಳೆದವನು. ನಮ್ಮ ಕನಸುಗಳು ದೊಡ್ಡ ಪರದೆಯ ಮೇಲೆ ಪ್ರತಿಫಲಿಸುವುದನ್ನು ನಾವು ಆಗಾಗ್ಗೆ ನೋಡುತ್ತೇವೆ ಮತ್ತು ಕೆಲವೊಮ್ಮೆ, ಆ ಕನಸುಗಳು ನಮ್ಮ ಜೀವನದಲ್ಲಿ ಒಂದು ಸ್ಥಾನವನ್ನು ಕಂಡುಕೊಳ್ಳುತ್ತವೆ. ಸಿನಿಮಾ ಪ್ರಭಾವ ಬೀರುವ ಈ ಅದ್ಭುತ ಸಾಮರ್ಥ್ಯವನ್ನು ಹೊಂದಿದೆ' ಎಂದರು.

ನಾಗವಲ್ಲಿ ಬಂಗಲೆ ಮತ್ತು ಚಿತ್ರತಂಡಕ್ಕೆ ಅಗಾಧ ಯಶಸ್ಸು ಸಿಗಲಿ ಎಂದು ಹಾರೈಸುತ್ತೇನೆ. ಹಂಸ ವಿಷನ್ಸ್ ಬ್ಯಾನರ್ ಅಡಿಯಲ್ಲಿ ಈ ಯೋಜನೆಗೆ ಕೈಜೋಡಿಸಿರುವ ಚಿತ್ರದ ನಿರ್ಮಾಪಕರಾದ ನೆಲ ಮಹೇಶ್



ಮತ್ತು ನೇವಿ ಮಂಜು ಅವರಿಗೆ ಶಾಸಕರು ಶುಭ ಹಾರೈಸಿದರು.ನಾಗವಲ್ಲಿ ಬಂಗಲೆಯ ಕಥೆಯನ್ನು ಪ್ರಸಿದ್ಧ ಬರಹಗಾರ ಜೆಎಂ ಪ್ರಹ್ಲಾದ್ ಬರೆದಿದ್ದು, 'ಕಥೆಯು ಆರು 'ಅರಿಷಡ್ವರ್ಗಗಳನ್ನು' ಸಂಕೇತಿಸುವ ಆರು ಪ್ರಮುಖ ಪಾತ್ರಗಳ ಸುತ್ತ ಸುತ್ತುತ್ತದೆ. ಕಾಮ (ಆಸೆ), ಕ್ರೋಧ (ಕೋಪ), ಲೋಭ (ದುರಾಸೆ), ಮೋಹ, ಮದ ಮತ್ತು ಮಾತ್ಸರ್ಯ (ಅಸೂಯೆ) ಇವುಗಳ ಸುತ್ತ ಸುತ್ತುತ್ತದೆ. ಈ ದುರ್ಗುಣಗಳನ್ನು ಮೀರಿದ ಏಳನೇ ಪಾತ್ರವೂ ಇದೆ. ಇದು ಶಕ್ತಿಯುತ ಸಂದೇಶವನ್ನು ನೀಡುತ್ತದೆ ಎಂದರು. ಇದು ಅವರ 35ನೇ ಚಿತ್ರದ ಕಥೆಯಾಗಿದೆ.ಚಿತ್ರಕ್ಕೆ ಕವಿ ರಾಜೇಶ ಅವರು ಆ?ಯಕ್ಷನ್ ಕಟ್ ಹೇಳಿದ್ದಾರೆ. ಚಿತ್ರದಲ್ಲಿ ನೇವಿ ಮಂಜು, ನೆಲ ನರೇಂದ್ರ ಬಾಬು, ತೇಜಸ್ವಿನಿ, ರೂಪಶ್ರೀ, ಯಶವಂತ್ ಕುಮಾರ್, ಸಿಮ್ರಾನ್, ಪ್ರೇರಣಾ, ಮಾನಸ ಗೌಡ, ಶ್ವೇತಾ, ರಂಜಿತಾ ಗೌಡ, ಮತ್ತು ಸುಷ್ಮಾ ನಟಿಸಿದ್ದಾರೆ. ತಾಂತ್ರಿಕವಾಗಿ ಹೇಳುವುದಾದರೆ, ರೋಹನ್ ದೇಸಾಯಿಯವರ ಸಂಗೀತವಿದೆ.

# ಅನೀಶ್ ನಿರ್ದೇಶನದ ಚಿತ್ರದ ಟೈಟಲ್ 'ಲವ್' ಚಿತ್ರೀಕರಣ

2024ರಲ್ಲಿ ತೆರೆಕಂಡ ಅಭಿಷೇಕ್ ಶೆಟ್ಟಿ ನಿರ್ದೇಶನದ ಆರಾಮ್ ಅರವಿಂದ ಸ್ವಾಮಿ ಕಮರ್ಷಿಯಲ್ ಎಂಟರ್ಟೈನರ್ ಯಶಸ್ಸಿನ ನಂತರ, ನಟ ಅನೀಶ್ ಇದೀಗ ನಿರ್ದೇಶಕನ ಕ್ಯಾಪ್ ತೊಡಲು ತಯಾರಿ ನಡೆಸುತ್ತಿದ್ದಾರೆ. ಈ ಮೊದಲು ರಾಮಾರ್ಜುನ ಚಿತ್ರ ನಿರ್ದೇಶಿಸಿದ್ದ ಅನೀಶ್ ಇದೀಗ 'ಲವ್ ಔಖಿಕ' ಚಿತ್ರಕ್ಕೆ ಆ?ಯಕ್ಷನ್ ಕಟ್ ಹೇಳುತ್ತಿದ್ದಾರೆ. ನಿರ್ದೇಶನ ಮಾತ್ರವಲ್ಲದೆ ಈ ಕಮರ್ಷಿಯಲ್ ಎಂಟರ್ಟೈನರ್ಗೆ ಕಥೆ ಬರೆದು, ತಾವೇ ನಟಿಸುತ್ತಿದ್ದಾರೆ.ಭಾವಪ್ರೀತ ಪ್ರೊಡಕ್ಷನ್ಸ್ ಅಡಿಯಲ್ಲಿ ವಿಜಯ್ ಎಂ ರೆಡ್ಡಿ ನಿರ್ಮಿಸಲಿರುವ 'ಲವ್ ಔಖಿಕ' ಚಿತ್ರವನ್ನು ಕನ್ನಡ ಮತ್ತು ತೆಲುಗಿನಲ್ಲಿ ಏಕಕಾಲದಲ್ಲಿ



ಚಿತ್ರೀಕರಿಸಲು ನಿರ್ಧರಿಸಲಾಗಿದೆ. 'ನಾನು ಈಗ ತೆಲುಗಿಗೆ ಪದಾರ್ಪಣೆ ಮಾಡುತ್ತಿದ್ದೇನೆ ಮತ್ತು ನನ್ನ ಮೂಲ ಕನ್ನಡ ಆಗಿರುವುದರಿಂದ ಚಿತ್ರವನ್ನು ಎರಡೂ ಭಾಷೆಗಳಲ್ಲಿ ಬಿಡುಗಡೆ ಮಾಡಲು ಬಯಸುತ್ತೇನೆ' ಎನ್ನುತ್ತಾರೆ ಅನೀಶ್.

ಸಾಮಾನ್ಯವಾಗಿ ಔಖಿಕ ಎಂದರೆ 'ಒನ್ ಟೈಮ್ ಪಾಸ್ವರ್ಡ್' ಎಂದು ಹೇಳಲಾಗುತ್ತದೆ. ಮುಂದುವರಿದು 'ಓವರ್ ಟಾರ್ಚರ್ ಪ್ರೆಶರ್' ಎಂದು ಹಾಸ್ಯಮಯವಾಗಿ ಹೇಳಲಾಗುತ್ತದೆ. ಇದೀಗ ಅನೀಶ್ ಚಿತ್ರಕ್ಕೆ ಲವ್ ಔಖಿಕ ಎಂದು ಹೆಸರಿಟ್ಟಿರುವುದು ನಿರೀಕ್ಷೆ ಹುಟ್ಟುಹಾಕಿದೆ. ಇದು ಪ್ರೀತಿ ಮತ್ತು ಸಂಬಂಧಗಳ ಏರಿಳಿತಗಳ ಮೇಲೆ ಕೇಂದ್ರೀಕರಿಸುತ್ತದೆ.ಆರಾಮ್ ಅರವಿಂದ ಸ್ವಾಮಿಯನ್ನು ವೀಕ್ಷಿಸಿದ ಯಾರಾದರೂ ಲವ್ ಔಖಿಕ ಅನ್ನು ಖಂಡಿತವಾಗಿಯೂ ವೀಕ್ಷಿಸುತ್ತಾರೆ. ಚಿತ್ರವು ಸಂಬಂಧಗಳ ಸಾರವನ್ನು ಪರಿಶೀಲಿಸುತ್ತದೆ. ಶೀರ್ಷಿಕೆಯು ಕಥೆಯೊಂದಿಗೆ ಆಳವಾಗಿ ಸಂಪರ್ಕ ಸಾಧಿಸುತ್ತದೆ' ಎಂದು ಹೇಳುತ್ತಾರೆ.

# ನಟ ರಕ್ಷಿತ್ ಶೆಟ್ಟಿ ನಿರ್ಮಾಣದ 'ಮಿಥ್ಯ' ಬಿಡುಗಡೆಗೆ ದಿನಾಂಕ ನಿಗದಿ



ನಟ ರಕ್ಷಿತ್ ಶೆಟ್ಟಿಯವರ ಪರಂವಃ ಸ್ಟುಡಿಯೋಸ್ ನಿರ್ಮಿಸಿರುವ 'ಮಿಥ್ಯ' ಸಿನಿಮಾ ಮಾರ್ಚ್ 7 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಚಿತ್ರಕ್ಕೆ ಮಿಥುನ್ ಮುಕುಂದನ್ ಅವರ ಸಂಗೀತ ಸಂಯೋಜನೆಯಿದ್ದು, ವೃತ್ತಿಯಲ್ಲಿ ಸಾಫ್ಟ್ವೇರ್ ಇಂಜಿನಿಯರ್ ಆಗಿರುವ ಸುಮಂತ್ ಭಟ್ ಚಿತ್ರವನ್ನು ನಿರ್ದೇಶಿಸಿದ್ದಾರೆ.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಾಸರಗೋಡು ಮತ್ತು ವಿಕ್ರಾಂತ್ ರೋಣ ಚಿತ್ರದ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದ ಬಾಲನಟ ಆತಿಶ್ ಶೆಟ್ಟಿ ಮಿಥ್ಯ ಚಿತ್ರದಲ್ಲಿ ಮಿಥುನ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಇನ್ನುಳಿದಂತೆ ಪ್ರಕಾಶ್ ತೂಮಿನಾಡ್ ಮತ್ತು ರೂಪ ವರ್ಕಾಡಿ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

'ಚಿತ್ರವು ತನ್ನ ಹೆತ್ತವರನ್ನು ಕಳೆದುಕೊಂಡ 11 ವರ್ಷದ ಬಾಲಕನ ಕಥೆಯಾಗಿದೆ. ತನ್ನ ತಂದೆ-ತಾಯಿಯನ್ನು ಕಳೆದುಕೊಂಡು, ಆ ನೋವಿನಿಂದ ಹೊರಬರಲಾರದ ಬಾಲಕ, ಹೊಸ ಪ್ರಪಂಚವನ್ನು ಹುಡುಕಿಕೊಂಡು ಹೊರಡುತ್ತಾನೆ. ಹಳೆಯ ಸಂಬಂಧಗಳಲ್ಲಿ ಹೊಸತನ ಕಾಣುವ ಹಾಗೂ ಹೊಸ ಸ್ನೇಹಿತರಲ್ಲಿ ಹಳೆಯ ಗೆಳೆತನ ಹುಡುಕುವ ಪಯಣವೇ ಈ ಮಿಥ್ಯ.

ಚಿತ್ರದ ನಿರ್ದೇಶಕ ಸುಮಂತ್ ಭಟ್ ಮಾತನಾಡಿ, 'ಯುವ ದಂಪತಿ ಅಗಲುವಿಕೆ, ಇಬ್ಬರು ಮಕ್ಕಳನ್ನು ಅನಾಥರನ್ನಾಗಿ ಮಾಡುವುದು, ಆಲೋಚನೆಗಳ ಸರಮಾಲೆಯನ್ನು ಪ್ರಚೋದಿಸಿತು. ಚಿಕ್ಕ ಮಕ್ಕಳು ಹೇಗೆ ಸಮಾಧಾನಗೊಳ್ಳುತ್ತಾರೆ

ಗಾಯಗಳು ಎಷ್ಟು ದಿನಗಳಿಗೆ ವಾಸಿಯಾಗುತ್ತವೆ ಮಕ್ಕಳು ಹೇಗೆ ದುಃಖಿಸುತ್ತಾರೆ ಇವುಗಳಿಗೆ ಉತ್ತರ ಹುಡುಕುವ ಪ್ರಯತ್ನವೇ ಮಿಥ್ಯ' ಎಂದಿದ್ದಾರೆ.ನಿರ್ಮಾಪಕ ರಕ್ಷಿತ್ ಶೆಟ್ಟಿ ಮಾತನಾಡಿ, 'ನಮ್ಮ ಉದ್ಯಮಕ್ಕೆ ಎಲ್ಲ ರೀತಿಯ ಚಿತ್ರಗಳು ಬೇಕು. ನಾವು ಹೊಸ ಕಥೆಗಳು ಮತ್ತು ಕ್ಷೇತ್ರಕ್ಕೆ ಹೊಸ ದೃಷ್ಟಿಕೋನಗಳನ್ನು ತರುವ ಹೊಸ ಕಾಲದ ಕಥೆಗಾರರನ್ನು ಸ್ವಾಗತಿಸಬೇಕಾಗಿದೆ. ಪರಂವಃ ಸ್ಟುಡಿಯೋಸ್ ನಿರೂಪಣೆಗಳ ವ್ಯಾಪ್ತಿಯನ್ನು ವಿಸ್ತರಿಸುವ ಕಂಟೆಂಟ್ನೊಂದಿಗೆ ತನ್ನನ್ನು ಗುರುತಿಸಿಕೊಳ್ಳಲು ಬಯಸುತ್ತದೆ. ಈ ನಿಟ್ಟಿನಲ್ಲಿ ಮಿಥ್ಯ ಒಂದು ಸುಂದರ ಪ್ರಯತ್ನವಾಗಿದೆ' ಎಂದು ಹೇಳಿದರು.ಚಿತ್ರಕ್ಕೆ ಉದಿತ್ ಖುರಾನಾ ಅವರ ಛಾಯಾಗ್ರಹಣ ಮತ್ತು ಶ್ರೀಯಾಂಕ್ ನಂಜಪ್ಪ ಅವರ ಧ್ವನಿ ವಿನ್ಯಾಸವಿದೆ.

## ಫೆ. 24 ರಂದು ಉದ್ಯೋಗ ಮೇಳ

**ಶಿವಮೊಗ್ಗ :** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಶಿವಮೊಗ್ಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಶಿವಮೊಗ್ಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಇವುಗಳ ಸಂಯುಕ್ತಾಶ್ರಯದಲ್ಲಿ ಫೆ. 24 ರಂದು ಶಿವಮೊಗ್ಗದ ಬಾಲರಾಜ್ ಅರಸ್ ರಸ್ತೆ, ಆಚಾರ್ಯ ತುಳಸಿ ರಾಷ್ಟ್ರೀಯ ವಾಣಿಜ್ಯ ಕಾಲೇಜ ಆವರಣದಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಸಂದರ್ಶನದಲ್ಲಿ ಪ್ರತಿಷ್ಠಿತ ಖಾಸಗಿ ಕಂಪನಿಗಳು ಭಾಗವಹಿಸಲಿದ್ದು, ಎಸ್‌ಎಸ್‌ಎಲ್‌ಸಿ/ಪಿಯುಸಿ/ಐಟಿಐ/ ಡಿಪ್ಲೊಮಾ/ಬಿಇ ಮತ್ತು ಯಾವುದೇ ಪದವಿ/ಸ್ನಾತಕೋತ್ತರ ಪದವಿ ಉತ್ತೀರ್ಣ/ಅನುತ್ತೀರ್ಣ ಹೊಂದಿದ ಅಭ್ಯರ್ಥಿಗಳು ಬಯೊಡಾಟಾ ಮತ್ತು ಆಧಾರ್ ಕಾರ್ಡ್ ಪ್ರತಿಯೊಂದಿಗೆ ಸಂದರ್ಶನದಲ್ಲಿ ಭಾಗವಹಿಸುವುದು.

ಆಸಕ್ತ ಅಭ್ಯರ್ಥಿಗಳು ಆನ್‌ಲೈನ್ ಃಣಣಠಿ://ಜಿಂಡಿಟ. ರಟಜ/ಜ41ಠಿಚಿಉಅಂಖಜಥಕಕಕ9 ರಲ್ಲಿ ಅಥವಾ ಸ್ಥಳದಲ್ಲೆ ನೇರವಾಗಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-255294/ 9019485688 ಗಳನ್ನು ಸಂಪರ್ಕಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸುರೇಶ್ ಹೆಚ್.ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕಾಶವಾಣಿ ಭದ್ರಾವತಿಯಲ್ಲಿ 4 ವಿಶೇಷ ಕಾರ್ಯಕ್ರಮ ಸರಣಿಗೆ ಚಾಲನೆ

**ಶಿವಮೊಗ್ಗ :** ಆಕಾಶವಾಣಿ ಭದ್ರಾವತಿ 60 ವರ್ಷಗಳನ್ನು ಪೂರೈಸಿ 61ನೇ ವರ್ಷಕ್ಕೆ ಕಾಲಿಟ್ಟಿರುವ ಸಂದರ್ಭದಲ್ಲಿ ಆಕಾಶವಾಣಿಯ ದ್ಯೇಯವಾಕ್ಯವಾದ "ಬಹುಜನ ಹಿತಾಯ ಬಹುಜನ ಸುಖಾಯ" ದಂತೆ ಆಕಾಶವಾಣಿಯ ಕೇಳುಗರಿಗಾಗಿ ಆರೋಗ್ಯ ಸಲಹೆ, ರೈತರಿಗೆ ಮಾಹಿತಿ ಮತ್ತು ಭಕ್ತಿಭಾವ ಬೆಳೆಸುವ ವಿವಿಧ ಕಾರ್ಯಕ್ರಮ ಒಳಗೊಂಡ ಹೊಸ ಸರಣಿ ಮುಂದಿನವಾರದಿಂದ ಪ್ರಸಾರವಾಗಲಿದೆ.

ಸೋಮವಾರದ ಬೆಳಿಗ್ಗೆ 8.30ಕ್ಕೆ ಆಕಾಶವಾಣಿ ಭದ್ರಾವತಿ, ಕುವೆಂಪು ವಿಶ್ವವಿದ್ಯಾಲಯದ ಬಸವಪೀಠ ಹಾಗೂ ಬಸವಸಮಿತಿ ಬೆಂಗಳೂರು ಇವರ ಸಹಯೋಗದಲ್ಲಿ ವಿವಿಧ ವಚನ ವ್ಯಾಖ್ಯಾನ ಹಾಗೂ ಗಾಯನ ಒಳಗೊಂಡ "ವಚನೋದಯ" ಎನ್ನುವ ಸರಣಿಯಲ್ಲಿ ವಿವಿಧ ತಜ್ಞರು ವಚನ ವ್ಯಾಖ್ಯಾನಮಾಡಿ ಮಾಹಿತಿ ತಿಳಿಸಲಿದ್ದಾರೆ.

ಸೋಮವಾರ ಸಂಜೆ 6.50ಕ್ಕೆ ಕೃಷಿರಂಗ ಕಾರ್ಯಕ್ರಮದಲ್ಲಿ ಅಡಿಕೆ ಬೆಳೆಯ ಮಹತ್ವ, ಬೆಳೆಗಾರರಿಗೆ ಇರುವ ವಿವಿಧ ಸೌಲಭ್ಯ ತಿಳಿಸುವ ಸರಣಿ ಮಲೆನಾಡು ಅಡಿಕೆ ಮಾರಾಟದ ಸಹಕಾರ ಸಂಘ ನಿಯಮಿತ ಶಿವಮೊಗ್ಗ ಇವರ ಸಹಯೋಗದಲ್ಲಿ "ಅಡಿಕೆ-ಅರಿಕೆ" ಎನ್ನುವ ಸರಣಿ ಆಕಾಶವಾಣಿ ಭದ್ರಾವತಿ, ಚಿತ್ರದುರ್ಗ, ಮಡಿಕೇರಿ ಹಾಗೂ ಮಂಗಳೂರು ಕೇಂದ್ರದಿಂದ ಪ್ರಸಾರವಾಗಲಿದ್ದು ಅಡಿಕೆ ಬೆಳೆಗಾರರಿಗೆ ವಿಶೇಷ ಮಾಹಿತಿ ನೀಡಲಾಗುವುದು.

ಬುಧವಾರ ಬೆಳಿಗ್ಗೆ 7.15ಕ್ಕೆ ಸುಬ್ಬಯ್ಯ ವೈದ್ಯಕೀಯ ಸಮೂಹ ಸಂಸ್ಥೆ ಹಾಗೂ ಮೆಡಿಕಲ್ ಕಾಲೇಜು, ಆಸ್ಪತ್ರೆಯ ಸಹಯೋಗದಲ್ಲಿ ವಿವಿಧ ತಜ್ಞವೈದ್ಯರು ವೈದ್ಯಕೀಯ ಸಲಹೆ ನೀಡುವ "ಆರೋಗ್ಯ ದೀವಿಗೆ" ಎನ್ನುವ ವಿಶೇಷ ಸರಣಿ ಪ್ರಸಾರವಾಗಲಿದ್ದು ಸಾರ್ವಜನಿಕರಿಗೆ ಆರೋಗ್ಯ ಸಲಹೆ, ವಿವಿಧ ರೋಗಗಳ ಪ್ರಕಾರ ಹಾಗೂ ಅದಕ್ಕೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಬಗ್ಗೆ ಮಾಹಿತಿ ನೀಡಲಿದ್ದಾರೆ.





### ಮಹಾಕುಂಭಕ್ಕೆ ತೆರಳಲು ಹಣದ ಕೊರತೆ: ಹಿತ್ತಲಿನಲ್ಲಿ 40 ಅಡಿ ಬಾವಿ ತೋಡಿ 'ಗಂಗೆ' ಭೂಮಿಗೆ ತಂದ 'ಗೌರಿ'

# ಶಿವರಾತ್ರಿಯಂದು ಪುಣ್ಯಸ್ನಾನ

**ಶಿರಸಿ:** ಮಹಾಕುಂಭಮೇಳಕ್ಕಾಗಿ ಪ್ರಯಾಗರಾಜ್ಗೆ ಪ್ರವಾಸ ಕೈಗೊಳ್ಳಲು ಸಾಧ್ಯವಾಗದ 57 ವರ್ಷದ ಗೌರಿ ವಿಶಿಷ್ಟವಾದ ಕೆಲಸವನ್ನು ಮಾಡಿದ್ದಾರೆ. ಅವರು ತಮ್ಮ ಹಿತ್ತಲಿನಲ್ಲಿ 40 ಅಡಿ ಆಳದ ಬಾವಿಯನ್ನು ತೋಡಿದ್ದಾರೆ, ಆ ಮೂಲಕ ಗಂಗೆಯನ್ನು ಭೂಮಿಗೆ ತರುತ್ತಿದ್ದಾರೆ. ಅವರು ಇದನ್ನೆಲ್ಲಾ ಸ್ವತಃ ಮಾಡಿದ್ದಾರೆ.

2024 ರ ಮಧ್ಯದಲ್ಲಿ, ಜಿಲ್ಲಾಡಳಿತದ ವಿರೋಧದ ನಡುವೆಯೂ ಅಂಗನವಾಡಿ ಮಕ್ಕಳು ಮತ್ತು ಸಿಬ್ಬಂದಿಯ ಬಾಯಾರಿಕೆಯನ್ನು ನೀಗಿಸಲು ಅವರು ಬಾವಿ ತೋಡಿದ್ದಾರೆ. ಮಹಾಕುಂಭಕ್ಕೆ ಹೋಗಲು ಅದೃಷ್ಟವಿರಬೇಕು. ನನಗೆ ಅಷ್ಟು ವೆಚ್ಚವನ್ನು ಭರಿಸಲಾಗುವುದಿಲ್ಲ (ಗೌರಿ ತನ್ನ ಜೀವನೋಪಾಯಕ್ಕೆ ಸಹಾಯ ಮಾಡುವ ಕೃಷಿ ಭೂಮಿಯ ಒಂದು ಸಣ್ಣ ಭಾಗವನ್ನು ಹೊಂದಿದ್ದಾರೆ). ಹೀಗಾಗಿ ನಾನು ಇಲ್ಲಿ ಬಾವಿ ತೋಡಿ ಗಂಗೆಯನ್ನು ತರಲು ನಿರ್ಧರಿಸಿದೆ ಎಂದು ಅವರು ತಿಳಿಸಿದರು.

ಅವರು ಈಗ 40 ಅಡಿ ಆಳ ತೋಡಿದ್ದಾರೆ ಮತ್ತು ಬಾವಿಯಲ್ಲಿ ಸಾಕಷ್ಟು ನೀರು ಸಿಕ್ಕಿರುವುದಕ್ಕೆ ಸಂತೋಷ ವ್ಯಕ್ತಪಡಿಸಿದ್ದಾರೆ. ಈ ತಿಂಗಳ ಕೊನೆಯಲ್ಲಿ ಮಹಾ ಶಿವರಾತ್ರಿ ದಿನದಂದು ಇದೇ ಬಾವಿ ನೀರಿನಲ್ಲಿ ನಾನು ಸ್ನಾನ ಮಾಡಲು ಯೋಜಿಸುತ್ತಿದ್ದೇನೆ ಎಂದು ಅವರು ಹೇಳಿದರು.

ಗೌರಿ ಡಿಸೆಂಬರ್‌ನಲ್ಲಿ ಮಹಾಕುಂಭಮೇಳದ ಬಗ್ಗೆ ಕೇಳಿದ್ದರು, ಆದರೆ ಪ್ರಯಾಗ್ರಾಜ್ಗೆ ಪ್ರಯಾಣಿಸಲು ತನ್ನ ಬಳಿ ಸಾಕಷ್ಟು ಹಣವಿಲ್ಲ ಎಂಬುದನ್ನು ಅರಿತಿದ್ದರು. ಆಗ ಅವರು ಬಾವಿಯನ್ನು ಅಗೆಯಲು ನಿರ್ಧರಿಸಿದರು. ಕೂಡಲೇ ಡಿಸೆಂಬರ್ 15 ರಂದು ಬಾವಿ ತೋಡಲು ಆರಂಭಿಸಿದರು.



ಅವರ ಸಂಬಂಧಿಕರು ಮತ್ತು ನೆರೆಹೊರೆಯವರ ಪ್ರಕಾರ, ಅವರು ದಿನಕ್ಕೆ ಸುಮಾರು 6-8 ಗಂಟೆಗಳ ಕಾಲ ಕೆಲಸ ಮಾಡಿದರು, ಮಣ್ಣು ಅಗೆಯುವುದು ಮತ್ತು ಅದನ್ನು ಹೊರಸುರಿಯುವುದು. ಅವರು ತಮ್ಮ ಪ್ರಯತ್ನವನ್ನು ಪ್ರಾರಂಭಿಸಿದ ಎರಡು ತಿಂಗಳ ನಂತರ ಫೆಬ್ರವರಿ 15 ರಂದು ಬಾವಿಯನ್ನು ಪೂರ್ಣಗೊಳಿಸಿದರು.

ಯಾರ ಸಹಾಯವಿಲ್ಲದೆ ಬಾವಿಯನ್ನು ತೋಡುವುದು ಗೌರಿಗೆ ಹೊಸದಲ್ಲ. ಇಲ್ಲಿಯವರೆಗೆ ಅವರು ಸ್ವತಃ ನಾಲ್ಕು ಬಾವಿಗಳನ್ನು ತೋಡಿ-ದ್ದಾರೆ. ಒಂದು ಕೃಷಿಗಾಗಿ ತನ್ನ ಹೊಲದಲ್ಲಿ, ಇನ್ನೊಂದು ತನ್ನ ಹಳ್ಳಿಯ ಜನರ ಬಾಯಾರಿಕೆಯನ್ನು ನೀಗಿಸಲು ಮತ್ತು ಮೂರನೆಯದು 2024 ರ ಮಧ್ಯದಲ್ಲಿ ಸಿರ್ಸಿಯ ಗಣೇಶ ನಗರ ಅಂಗನವಾಡಿ ಶಾಲೆಯಲ್ಲಿ ಬಾವಿ ತೋಡಿದ್ದಾರೆ.

ಅಂಗನವಾಡಿಗಾಗಿ ಬಾವಿಯ ತೋಡುವ ಕೆಲಸಕ್ಕೆ ಜಿಲ್ಲಾಡಳಿತ ತೀವ್ರವಾಗಿ ಆಕ್ಷೇಪಿಸಿತು. ಅಂದಿನ ಜಿಲ್ಲಾಧಿಕಾರಿ ಬಾವಿ ತೋಡುವುದನ್ನು ತಕ್ಷಣವೇ ನಿಲ್ಲಿಸುವಂತೆ ಆದೇಶಿಸಿದರು. ಆದರೆ ಆಗಿನ ಉತ್ತರ ಕನ್ನಡ ಸಂಸದ ಅನಂತ್ ಕುಮಾರ್ ಹೆಗ್ಡೆ ಅವರ ಬೆಂಬಲದ ನಂತರ ಗೌರಿ ಬಾವಿಯನ್ನು ಪೂರ್ಣಗೊಳಿಸಿದರು. ನಂತರ ಅವರು 45 ಅಡಿ ಆಳದ ಬಾವಿಯನ್ನು ತೋಡಿದ್ದರು ಮತ್ತು ಅದು ಇನ್ನೂ ಬಳಕೆಯಲ್ಲಿದೆ. ಹೊಸ ಬಾವಿಯ ವಿಷಯದಲ್ಲಿ, ಅವರು ಮತ್ತೆ ಒಬ್ಬಂಟಿಯಾಗಿ ತೋಡಿದ್ದಾರೆ, ಬಾವಿಯಲ್ಲಿ ನೀರು ಸಿಕ್ಕಿದ್ದಕ್ಕೆ ಗೌರಿ ಸಂತೋಷ ವ್ಯಕ್ತಪಡಿಸಿದರು.

## ಜಿಲ್ಲಾ ಮಡಿಕಟ್ಟೆ (ದೋಭಿ ಘಾಟ್)ಯಲ್ಲಿ ಒಂದುವರೆ ಕೋಟಿ ವೆಚ್ಚದ ಆಧುನಿಕ ವಿದ್ಯುತ್ ವಾಷಿಂಗ್ ಯಂತ್ರ : ಸಚಿವ ಮಲ್ಲಿಕಾರ್ಜುನ್ ಚಾಲನೆ



**ದಾವಣಗೆರೆ :** ಫೆಬ್ರವರಿ 20 ರಂದು ಜಿಲ್ಲಾ ಮಡಿಕಟ್ಟೆ (ದೋಭಿ ಘಾಟ್)ಯಲ್ಲಿ ಒಂದುವರೆ ಕೋಟಿ ವೆಚ್ಚದ ಆಧುನಿಕ ವಿದ್ಯುತ್ ವಾಷಿಂಗ್ ಯಂತ್ರಕ್ಕೆ ಚಾಲನೆ ದೊರೆಯಿತು.

ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ದಾವಣಗೆರೆ ನಗರ ಪಾಲಿಕೆಯ ಮೇಯರ್ ಚಮನ್ ಸಾಬ್, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ನಗರ ಪಾಲಿಕೆ ಆಯುಕ್ತರಾದ ರೇಣುಕಾ, ನಗರ ಪಾಲಿಕೆ ಸದಸ್ಯರು, ಮಡಿವಾಳ ಸಮಾಜ ಜಿಲ್ಲಾಧ್ಯಕ್ಷ ನಾಗೇಂದ್ರಪ್ಪ ಎಂ, ದಾವಣಗೆರೆ ಮಡಿವಾಳ ಹಾಸ್ಟೆಲ್ ಅಧ್ಯಕ್ಷ ನಾಗರಾಜ್ ಜಿಲ್ಲೆ, ಮಡಿಕಟ್ಟೆ (ದೋಬಿ ಘಾಟ್) ಅಧ್ಯಕ್ಷ ಕಿಶೋರ್ ಕುಮಾರ್, ಗುತ್ಯಪ್ಪ, ಹನುಮಂತಪ್ಪ, ಶಿವಮೂರ್ತಪ್ಪ, ರವಿ, ಮಂಜಣ್ಣ, ಕೋಟೆಪ್ಪ, ರಮೇಶ್, ಫಕೀರಪ್ಪ, ಸಿದ್ದೇಶ್, ಮಡಿವಾಳಪ್ಪ, ಹನುಮಂತಪ್ಪ, ಮಂಜುನಾಥ್, ಚೇತನ್ ವಿನಯ್, ಮಡಿಕಟ್ಟೆ ಸಮಾಜ ಬಾಂಧವರು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ನಮ್ಮ ದಾವಣಗೆರೆ ಫೌಂಡೇಶನ್ ನಿಂದ ಇಂದು ಜ್ಞಾನನಿಧಿಗೆ ಚಾಲನೆ




**ದಾವಣಗೆರೆ:** ನಮ್ಮ ದಾವಣಗೆರೆ ಫೌಂಡೇಶನ್ ವತಿಯಿಂದ ನಾಳೆ ಫೆ. 22 ಶನಿವಾರ ಸಂಜೆ 6.30 ಕ್ಕೆ ಎಂಸಿಸಿ 'ಬಿ' ಬ್ಲಾಕ್ ನಲ್ಲಿರುವ ಶ್ರೀ ಸದ್ಯೋಜಾತ ಮಠದಲ್ಲಿ ಪೌರಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ನೀಡುವ 'ಜ್ಞಾನ ನಿಧಿ' ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದು ಫೌಂಡೇಶನ್ ಕಾರ್ಯದರ್ಶಿ ಪವನ್ ರೇವಣಕರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ದಾವಣಗೆರೆ ಫೌಂಡೇಶನ್ ಒಂದು ಪ್ರಜ್ಞಾವಂತ ಯುವ ಸಮೂಹದ ಸಾಮಾಜಿಕ ಚಿಂತನೆಯ ಫಲವಾಗಿ ಹುಟ್ಟಿಕೊಂಡ ಸಮಾನ ಮನಸ್ಕರ ಸಂಸ್ಥೆಯಾಗಿದ್ದು, ಅನೇಕ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬಂದಿದೆ. ಫೆ.22 ರಂದು ಸಂಸ್ಥೆಯ ಸದಸ್ಯರು, ಪಾಲಿಕೆ ಸದಸ್ಯರೂ ಆದ ಕೆ. ಪ್ರಸನ್ನ ಕುಮಾರ್ ಅವರ ಜನ್ಮದಿನದೊಂದಿಗೆ 'ಜ್ಞಾನನಿಧಿ' ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದರು.

ಮುಖ್ಯ ಅತಿಥಿಗಳಾಗಿ ಕಸಾಪ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಆಗಮಿಸಲಿದ್ದು, ಮಹಾನಗರ ಪಾಲಿಕೆಯ ಪೌರಕಾರ್ಮಿಕರ 16 ಹೆಚ್ಚು ಮಕ್ಕಳಿಗೆ ಪ್ರೋತ್ಸಾಹ ಧನದ ಚೆಕ್ ವಿತರಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ಕಾರ್ಯದರ್ಶಿ ಸಿ. ಚೇತನ್, ಅಂಬರೀಶ್, ವಿನಯ್ ದಿಳ್ಯಪ್ಪ, ಸಚಿನ್ ವೆರ್ಣೇಕರ್ ಹಾಗೂ ಆರ್.ಎಚ್. ವಿಕಾಸ್ ಉಪಸ್ಥಿತರಿದ್ದರು.

## ದೈವಜ್ಞ ಸೊಸೈಟಿ ಚುನಾವಣೆಯಲ್ಲಿ ಪ್ರವೀಣ್ ಕುಮಾರ್ ತಂಡ ಸ್ಪರ್ಧೆ




**ದಾವಣಗೆರೆ:** ನಗರದ ದೈವಜ್ಞ ಕೋ-ಆಪರೇಟಿವ್ ಸೊಸೈಟಿಯ ಆಡಳಿತ ಮಂಡಳಿಯಗೆ ನಾಳೆ ಫೆ.22 ರಂದು ನಡೆಯುತ್ತಿರುವ ಚುನಾವಣೆಯಲ್ಲಿ ನಾನು ಎನ್.ಎಂ. ಪ್ರವೀಣ್ ಕುಮಾರ್ (ರಾಯ್ಕರ್) ರಾಘವೇಂದ್ರ ಕುರ್ಡೇಕರ್ (ಅವರ್ಸಾ), ರಾಜಕುಮಾರ್ ಎಂ. ವೆರ್ಣೇಕರ್ (ಬ್ಯಾತನಾಳ) ಹಾಗೂ ಸರೋಜ ಎಂ. ವೆರ್ಣೇಕರ್ (ಬ್ಯಾತನಾಳ) ಅವರು ಸ್ಪರ್ಧಿಸುತ್ತಿದ್ದು, ತಮಗೆ ಮತ ನೀಡಿ ಜಯಶೀಲರನ್ನಾಗಿ ಮಾಡುವಂತೆ ಎನ್.ಎಂ. ಪ್ರವೀಣ್ ಕುಮಾರ್ ರಾಯ್ಕರ್ ತಿಳಿಸಿದರು.


ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ತಂಡದಲ್ಲಿ ವಿದ್ಯಾವಂತರು ಹಾಗೂ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಅನುಭವ ಹೊಂದಿರುವವರಿದ್ದು, ಸಾಕಷ್ಟು ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿದ್ದೇವೆ. 5 ವರ್ಷಗಳ ಅವಧಿಗೆ ನಮ್ಮನ್ನು ಆಯ್ಕೆ ಮಾಡಿದಲ್ಲಿ ಇನ್ನೂ ಹೆಚ್ಚಿನ ಸೇವೆಗಳಲ್ಲಿ ತೊಡಗಿಸಿಕೊಳ್ಳಲಿದ್ದೇವೆ ಎಂದು ಹೇಳಿದರು.

ಮತದಾನ ನಾಳೆ ಫೆ.22 ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ರೇಣುಕಾ ಬಡಾವಣೆಯ ದೈವಜ್ಞ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ, ರಾಘವೇಂದ್ರ ಕುರ್ಡೇಕರ್, ರಾಮಕುಮಾರ್ ಎಂ. ವೆರ್ಣೇಕರ್ ಹಾಗೂ ಸರೋಜಾ ಎಂ. ವೆರ್ಣೇಕರ್, ಮಂಜುನಾಥ್ ರಾಯ್ಕರ್, ಉಪಸ್ಥಿತರಿದ್ದರು.

## ಕೆಎಸ್‌ಎಂಸಿಎ ಸಂಸ್ಥೆಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 1 ಕೋಟಿ ದೇಣಿಗೆ ನೀಡಿಕೆ

**ಬೆಂಗಳೂರು:** ಕರ್ನಾಟಕ ಸರ್ಕಾರದ ಏಕೈಕ ಜಾಹೀರಾತು ಸಂಸ್ಥೆಯಾದ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಕಂಪನಿಯ ಅಧ್ಯಕ್ಷರಾದ ಸತೀಶ್ ಕೃಷ್ಣ ಸೈಲ್ ಅವರು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಸಂಸ್ಥೆಯ ಆರ್ಥಿಕ ವರ್ಷ 2023-24ರ ಲಾಭಾಂಶದಿಂದ 1 ಕೋಟಿ ರೂಪಾಯಿ ದೇಣಿಗೆಯ ಚೆಕ್ ಅನ್ನು ಇಂದು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ.ಬಿ. ಪಾಟೀಲ ಅವರ ಸಮ್ಮುಖದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರಿಗೆ ಹಸ್ತಾಂತರಿಸಿದರು. ಸಂಸ್ಥೆಯು ಸಾಮಾಜಿಕ ಕಳಕಳಿ ಹೊಂದಿರುವ ದ್ಯೋತಕ ಇದಾಗಿರುವುದು.




ಕೆಎಸ್‌ಎಂಸಿಎ ಸಂಸ್ಥೆಯು ಆರ್ಥಿಕ ವರ್ಷ 2023-24ರ ಸಾಲಿನಲ್ಲಿ ರೂ.5.29 ಕೋಟಿಗಳ ಮೊತ್ತದ ಲಾಭಾಂಶವನ್ನು ಘೋಷಿಸಿದೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರಾದ ಎಲ್.ಕೆ. ಅತೀಕ್ ಹಾಗೂ ಕೆಎಸ್‌ಎಂಸಿಎ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಮೊಹಮ್ಮದ್ ಅತೀಕುಲ್ಲಾ ಶರೀಫ್‌ರವರು ಮತ್ತು ಉಪ ಪ್ರಧಾನ ವ್ಯವಸ್ಥಾಪಕರಾದ ೯ ಪಿ.ಎಸ್. ನಂದೀಶ ಅವರು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**